ಸಂಪುಟ: ೦೭/ ಸಂಚಿಕೆ: ೧೧೫/ಗುರುವಾರ ದಿನಾಂಕ : ೧೯-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 115/ THURSDAY Date : 19-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ

# ಅತಿವೃಷ್ಟಿ/ಪ್ರವಾಹ ನಿರ್ವಹಣೆ ಸಿದ್ಧತೆಗೆ ಜಿಲ್ಲಾಧಿಕಾರಿ ಸೂಚನೆ

**ಬೆಳಗಾವಿ,** : ಮಹಾರಾಷ್ಟ್ರಾ ರಾಜ್ಯದಲ್ಲಿ ಹಾಗೂ ಬೆಳಗಾವಿ ಜಿಲ್ಲೆಯಲ್ಲಿ ಭಾರಿ ಮಳೆಯಾಗುತ್ತಿರುವ ಕಾರಣ ಜಿಲ್ಲೆಯ ನದಿಗಳಿಗೆ ನೀರಿನ ಒಳಹರಿವು ಗಣನೀಯವಾಗಿ ಹೆಚ್ಚಾಗುತ್ತಿರುವದರಿಂದ ಜಿಲ್ಲೆಯಲ್ಲಿ ಉಂಟಾಗಬಹುದಾದ ಅತೀವೃಷ್ಟಿ/ಪ್ರವಾಹ ನಿರ್ವಹಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬುಧವಾರ (ಜೂ.18) ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ, ಹುಕ್ಕೇರಿ, ಖಾನಾಪೂರ, ನಿಪ್ಪಾಣಿ, ಚಿಕ್ಕೋಡಿ ಭಾಗದಲ್ಲಿ ಮಳೆ ಹೆಚ್ಚಿರುವ ಕಾರಣ ಸಂಬಂಧಿಸಿದ ಅಧಿಕಾರಿಗಳು ಜಲಾಶಯ ಮಟ್ಟದ ಕುರಿತು ನಿರಂತರ ನಿಗಾ ವಹಿಸಬೇಕು ಎಂದರು.

ಅಗತ್ಯವಿರುವ ಸ್ಥಳಗಳಲ್ಲಿ ಜನರಿಗೆ ತಿಳುವಳಿಕೆ ಹೇಳಿ ಜನ, ಜಾನುವಾರುಗಳ ಸ್ಥಳಾಂತರಕ್ಕೆ ಸೂಚಿಸಬೇಕು. ಕಾಳಜಿ ಕೇಂದ್ರಗಳನ್ನು ಗುರುತಿಸಿ, ಮೂಲಭೂತ ಸೌಕರ್ಯವಿರುವ ಕಾಳಜಿ ಕೇಂದ್ರಗಳಿಗೆ ಒದಗಿಸಬೇಕು.

ಮಾರ್ಖಂಡೇಯ ಜಲಾಶಯದಲ್ಲಿ ನೀರು ಬಿಡುಗಡೆಯಾದರೆ ಗೋಕಾಕ್ ಕೆಲವು ಸ್ಥಳಗಳಲ್ಲಿ ನೀರು ನುಗ್ಗಿ ಜನರಿಗೆ ತೊಂದರೆಯಾಗುವ ಸಾಧ್ಯತೆಯಿದೆ ಅಂತಹ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಗೋಕಾಕ್ ತಹಶೀಲ್ದಾರ್ ಗೆ ತಿಳಿಸಿದರು.



**ಮುಳುಗಡೆ ಸೇತುವೆಗಳಿಗೆ ಬ್ಯಾರಿಕೇಡ್ ಅಳವಡಿಕೆ:**
ಮುಳುಗಡೆಯಾದ ಸೇತುವೆಗಳಿಗೆ ಕಡ್ಡಾಯವಾಗಿ ಬ್ಯಾರಿಕೇಡ್ ಅಳವಡಿಸಬೇಕು. ಸೇತುವೆಯ ಸ್ಥಿತಿಗತಿ ನೋಡಿಕೊಂಡು ನೀರು ಕಡಿಮೆಯಾದಾಗ ಬ್ಯಾರಿಕೇಡ್ ತೆರವುಗೊಳಿಸಬೇಕು.
ಸದ್ಯಕ್ಕೆ ಕೊಯ್ನಾ ಜಲಾಶಯದಲ್ಲಿ ಕಳೆದ ವರ್ಷಕ್ಕಿಂತ ಈ ಬಾರಿ ನೀರಿನ ಮಟ್ಟ ಹೆಚ್ಚಿದೆ. ಮಹಾರಾಷ್ಟ್ರದಿಂದ ಕೃಷ್ಣ ನದಿಗೆ 6 ಟಿ.ಎಂ.ಸಿ ನೀರು ಹರಿದು ಬರುತ್ತಿದೆ.

ಮಹಾರಾಷ್ಟ್ರ ಜಲಾಶಯದಿಂದ ಇನ್ನೂ ಹೆಚ್ಚಿನ ಮಟ್ಟದಲ್ಲಿ ನೀರು ಬಿಡುಗಡೆಯಾಗುವ ಸಾಧ್ಯತೆ ಇರುವ ಕಾರಣ ಕೊಯ್ನಾ ಜಲಾಶಯದ ನೀರಿನಮಟ್ಟದ ಕುರಿತು ಮಾಹಿತಿ ನುಡಿಯಲು ಜಿಲ್ಲೆಯ ಒಬ್ಬ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗುವುದು.

ಹಿಡಕಲ್ ಜಲಾಶಯ ಹಾಗೂ ಮಾರ್ಕಾಂಡೇಯ ಜಲಾಶಯದ ನೀರಿನ ಮಟ್ಟ, ನೀರು ಬಿಡುಗಡೆ ಕುರಿತು ನಿರಂತರ ನಿಗಾ ವಹಿಸಬೇಕು. ರಕ್ಷಣಾತ್ಮಕವಾಗಿ ಬೋಟ್, ವಾಟರ್ ಜಾಕೆಟ್, ಬ್ಯಾರಿಕೇಡ್, ಲೈಟ್ಸ್ ಸೇರಿಸಂತೆ ಉಪಕರಣಗಳ ಜೊತೆಗೆ ಗೃಹರಕ್ಷಕ ದಳ, ಅಗ್ನಿಶಾಮಕ ದಳದ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು ಎಂದರು.

ಎಲ್ಲ ತಹಸೀಲ್ದಾರ್ ಗಳು ಅತಿವೃಷ್ಟಿ ಸಂದರ್ಭದಲ್ಲಿ ಅಗತ್ಯವಿರುವ ರಕ್ಷಣಾ ಸಾಮಗ್ರಿಗಳ ಬೇಡಿಕೆ ಪಟ್ಟಿ ತಯಾರಿಸಿ, ಯಾವುದೇ ಕಾರಣಕ್ಕೂ ವಿಳಂಬ ಮಾಡದೆ ತಕ್ಷಣವೇ ಬೇಡಿಕೆ ಸಲ್ಲಿಸಬೇಕು ಎಂದು ತಿಳಿಸಿದರು.

**ಕಾಳಜಿಕೇಂದ್ರ ಗುರುತಿಸಲು ಸೂಚನೆ:** ಗುರುತಿಸಿದ ಎಲ್ಲ ಕಾಳಜಿ ಕೇಂದ್ರಗಳಲ್ಲಿ, ಪೌಷ್ಟಿಕ ಆಹಾರ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಈ ಕುರಿತು ಮೂರು ದಿನಗಳೊಳಗೆ ವರದಿ ನೀಡಬೇಕು. ಎಲ್ಲ ತಹಶೀಲ್ದಾರ್ ಗಳು ಜಿಲ್ಲಾ ಮಟ್ಟದ ಕಂಟ್ರೋಲ್ ರೂಮ್ ಗೆ ನಿರಂತರ ಸಂಪರ್ಕದಲ್ಲಿರಬೇಕು ಎಂದು ಸೂಚಿಸಿದರು.

ಜಿಲ್ಲಾ ಪಂಚಾಯತಿ ಕೆರೆಗಳ ಕಟ್ಟೆ ಒಡೆಯದಂತೆ ಅಗತ್ಯ ದುರಸ್ತಿ ಕಾರ್ಯ ಕೈಗೊಳ್ಳಬೇಕು. ಗೋಕಾಕ್ ತಾಲೂಕಿನ ವ್ಯಾಪ್ತಿಯಲ್ಲಿ ಮನೆಯ ಮೇಲ್ಛಾವಣಿ ಬಿದ್ದು ಅವಘಡ ಸಂಭವಿಸಿದೆ ಹಾಗಾಗಿ ಮುಂಜಾಗೃತಿಯಿಂದ ಅಂತಹ ಮನೆಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಲೆಕ್ಕಾಧಿಕಾರಿಗಳು ಜಂಟಿ ಸರ್ವೆ ನಡೆಸಬೇಕು ಎಂದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲ ಚರಂಡಿ ಸ್ವಚ್ಛತೆ, ನಗರದ ಪ್ರಮುಖ ರಸ್ತೆಗಳ ಬದಿಯಲ್ಲಿನ ಅಪಾಯಕಾರಿ ಮರಗಳನ್ನು ಕಟಾವು ಮಾಡಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸೂಚನೆ ನೀಡಿದರು.

**ನಗರ ಪೊಲೀಸ್ ಆಯುಕ್ತ ಭೂಷಣ್ ಗುಲಾಬರಾವ ಬೊರಸೆ:**
ಮಾತನಾಡಿ ನಗರದಲ್ಲಿ ಗಾಂಧಿ ನಗರದ ಸೇತುವೆ ಪಕ್ಕದ ಚರಂಡಿ ಭರ್ತಿಯಾಗಿ ಸೇತುವೆಯ ಒಳರಸ್ತೆ ಮುಳುಗಡೆಯಾಗುತ್ತಿದೆ. ಸಾಂಬ್ರಾ ರಸ್ತೆಯ ಸೇತುವೆ ಸಹ ಇದೆ ಪರಿಸ್ಥಿತಿ ಎದುರಾಗುತ್ತಿದೆ. ಸಂಬಂಧಿಸಿದ ಇಲಾಖೆಯಿಂದ ಒಳಚರಂಡಿಗಳನ್ನು ಸ್ವಚ್ಛಗೊಳಿಸಬೇಕು ತಿಳಿಸಿದರು.

**ಶಾಲೆ-ಅಂಗನವಾಡಿ ಕಟ್ಟಡಗಳ ಪರಿಶೀಲನೆ ಸೂಚನೆ:** ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಮಾತನಾಡಿ ನೀರಾವರಿ ಇಲಾಖೆಯಿಂದ ಎಲ್ಲ ಜಲಾಶಯಗಳ ಸಮರ್ಪಕವಾಗಿ ನಿರ್ವಹಣೆಯಾಗುವ ಕುರಿತು ವರದಿ ನೀಡಬೇಕು. ಪ್ರತಿ ತಾಲೂಕುಗಳಲ್ಲಿ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಗ್ರಾಮ ಪಂಚಾಯತಿ ವ್ಯಾಪ್ತಿ ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳ ಕಟ್ಟಡಗಳನ್ನು ಪರಿಶೀಲಿಸಿ ಸರಿಯಾಗಿರುವ ಕುರಿತು ವರದಿ ನೀಡಬೇಕು ಎಂದನು ಎಂದರು.

ಗ್ರಾಮ ಮಟ್ಟದಲ್ಲಿ ಸೇತುವೆಗಳು ಕುಸಿತ, ಮುಳುಗಡೆ, ದುರಸ್ಥಿ ಇರುವ ಕುರಿತು ಕೂಡಲೇ ವರದಿ ಸಲ್ಲಿಸಬೇಕು. ಸೇತುವೆ, ನಾಲಾ, ಬ್ಯಾರೇಜ್ ಗಳಲ್ಲಿ ಬ್ಲಾಕ್ ಗಳನ್ನು ಸ್ವಚ್ಛಗೊಳಿಸುವ ಕಾರ್ಯ ಕೈಗೊಳ್ಳಬೇಕು ಜಿ.ಪಂ ಸಿಇಓ ರಾಹುಲ್ ಶಿಂಧೆ ತಿಳಿಸಿದರು.

**ಕಂಟ್ರೋಲ್ ರೂಮ್ ಸ್ಥಾಪನೆ:** ಜಿಲ್ಲಾಡಳಿತದಿಂದ ಅತಿವೃಷ್ಟಿ ಪ್ರವಾಹ ನಿರ್ವಹಣೆಗೆ ಈಗಾಗಲೇ ಕಂಟ್ರೋಲ್ ರೂಮ್ ಸ್ಥಳಿಸಲಾಗಿದೆ ಈ ಕುರಿತು ಪ್ರಕಟಣೆ ಹೊರಡಿಲಾಗುವುದು. ಸಾಮಾಜಿಕ ಜಾಲತಾಣ ಮುಖಾಂತರ ಪ್ರವಾಹ ಸಂದರ್ಭದಲ್ಲಿ ಸುಳ್ಳು ಸುದ್ದಿ ಹರಡತಂತೆ ನಿಗಾ ವಹಿಸಬೇಕು. ತಾಲೂಕಾ ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳು ಕಂಟ್ರೋಲ್ ರೂಮ್ ವರದಿ ನೀಡಬೇಕು ಎಂದು ಪ್ರೊಬೇಷನರಿ ಐಎಎಸ್ ಅಧಿಕಾರಿ ಅಭಿನವ. ಜೆ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ, ಬೆಳಗಾವಿ ಉಪವಿಭಾಗಾಧಿಕಾರಿ ಶ್ರವಣ್ ನಾಯಕ, ತಹಶೀಲ್ದಾರ ಬಸವರಾಜ ನಾಗರಾಳ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಈಶ್ವರ ಗಡಾದ, ಜಿಲ್ಲಾ ನಗರಾಭಿವೃದ್ಧಿ ಯೋಜನಾ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ್ ಕಲಾದಗಿ, ಜಿಲ್ಲಾಪಂಚಾತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ್ ದಿವಟರ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು. ಎಲ್ಲ ಉಪವಿಭಾಗಾಧಿಕಾರಿಗಳು, ತಾಲೂಕಾ ತಹಶೀಲ್ದಾರಗಳು, ಕಾರ್ಯನಿರ್ವಾಹಕ ಅಧಿಕಾರಿಗಳು, ವಿಡಿಯೋ ಸಂವಾದದಲ್ಲಿ ಹಾಜರಿದ್ದರು.

## ಕೆಪಿಟಿಸಿಎಲ್‌ನಲ್ಲಿ ಖಾಲಿಯಿರುವ 35 ಸಾವಿರ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿಗೆ ಕ್ರಮ: ಮುಖ್ಯಮಂತ್ರಿ




ಬೆಂಗಳೂರು: ಕರ್ನಾಟಕ ವಿದ್ಯುತ್ ಪ್ರಸರಣ ಇಲಾಖೆಯಲ್ಲಿ ಖಾಲಿಯಿರುವ 35 ಸಾವಿರ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿದ ಮಾತನಾಡಿದ ಸಿಎಂ, ನಿಗಮದಲ್ಲಿ ತೆರವಾಗಿರುವ 35 ಸಾವಿರ ಹುದ್ದೆಗಳನ್ನು ಹಂತ- ಹಂತವಾಗಿ ತುಂಬಲಾಗುವುದು. ಜೊತೆಗೆ ಇಲಾಖೆಯ 532 ಮಂದಿ ಪೌರ ಕಾರ್ಮಿಕರ ಹುದ್ದೆ ಖಾಯಂಗೊಳಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

ನಮ್ಮದು ನುಡಿದಂತೆ ನಡೆಯುವ ಸರ್ಕಾರ. ನಿಗಮದ ಬೇಡಿಕೆಗಳ ಪರಿಶೀಲಿಸಿ ಕ್ರಮ ತೆಗೆದುಕೊಳ್ಳುತ್ತೇವೆ. ಕೇಂದ್ರ ಸರ್ಕಾರ ಎನ್?ಪಿಎಸ್?? ಜಾರಿ ಮಾಡಿದೆ. ಆದರೆ, ನಾವು ಒಪಿಎಸ್ ಜಾರಿಯನ್ನು ಪ್ರಣಾಳಿಕೆಯಲ್ಲೇ ಘೋಷಿಸಿದ್ದೇವೆ. ಈ ಬಗ್ಗೆ ಚರ್ಚಿಸಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

1964ರಲ್ಲಿ ಆರಂಭವಾದ ನೌಕರರ ಸಂಘ ಇಷ್ಟು ಮಹತ್ತರ ವರ್ಷಗಳ ಕಾಲ ನಿರಂತರವಾಗಿ ನೌಕರರ ಕಷ್ಟ ಸುಖಗಳಿಗೆ ಸ್ಪಂದಿಸಿ, ಪ್ರಾಮಾಣಿಕ ಹೋರಾಟ ನಡೆಸುತ್ತಿದೆ. ಇಡೀ ಏಷ್ಯಾದಲ್ಲಿ ಮೊದಲಿಗೆ ವಿದ್ಯುತ್ ಉತ್ಪಾದನೆ ಆಗಿದ್ದು 1902 ರಲ್ಲಿ ಕರ್ನಾಟಕದಲ್ಲಿ. 1905 ರಲ್ಲಿ ಬೆಂಗಳೂರಿನಲ್ಲಿ ಪ್ರಥಮ ವಿದ್ಯುತ್ ಸರಬರಾಜು ಕಂಪನಿ ಆರಂಭಿಸಲಾಯಿತು. 1908 ರಲ್ಲಿ ಮೊದಲ ಬಾರಿ ಅರಮನೆಗೆ ವಿದ್ಯುತ್ ಬಂತು. ಅಲ್ಲಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯಲ್ಲಿ ನಾವು 34 ಸಾವಿರ ಮೆಗಾ ವ್ಯಾಟ್ ಉತ್ಪಾದನೆ ಮಾಡುತ್ತಿರುವ ರಾಜ್ಯ ಎನ್ನುವ ಹೆಗ್ಗಳಿಕೆ ಕೇವಲ ನಮ್ಮ ರಾಜ್ಯದ್ದಾಗಿದೆ ಎಂದು ತಿಳಿಸಿದರು.

ರೈತರಿಗೆ, ಕೃಷಿಗೆ, ಪಂಪ್ ಸೆಟ್ ಗಳಿಗೆ ಹಗಲಿನಲ್ಲೂ 7 ಗಂಟೆ ಅಗತ್ಯ ವಿದ್ಯುತ್ ಸರಬರಾಜು ಮಾಡಲು ಶಕ್ತರಾಗುತ್ತೇವೆ. ಈ ಗುರಿ ಇಟ್ಟುಕೊಂಡು ಕೆಲಸಗಳು ನಡೆಯುತ್ತಿವೆ. 60 ಸಾವಿರ ಮೆಗಾವ್ಯಾಟ್ ಉತ್ಪಾದನೆ ಗುರಿ ನಾವು ತಲುಪಿದ ತಕ್ಷಣ ಇದು ಸಾಧ್ಯವಾಗಲಿದೆ ಎಂದು ಸಿಎಂ ಹೇಳಿದರು.

## ಸರಕಾರಿ ಕಚೇರಿಗಳಲ್ಲಿ ಪ್ರಿ ಪೇಯ್ಡ್ ಮೀಟರ್ ಅಳವಡಿಕೆ: ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ : ಕೆ.ಜೆ.ಜಾರ್ಜ್



ಬೆಂಗಳೂರು : ಸರಕಾರಿ ಕಚೇರಿಗಳಲ್ಲಿ ಪ್ರೀ ಪೇಯ್ಡ್ ಮೀಟರ್ ಅಳವಡಿಸುವ ಕುರಿತು ಚಿಂತನೆ ನಡೆದಿದ್ದು, ಈ ಸಂಬಂಧ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ಬುಧವಾರ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ನಡೆಸಿದ ಸಂವಾದದಲ್ಲಿ ಮಾತನಾಡಿದ ಅವರು, ಪರಿಷ್ಕೃತ ವಿತರಣಾ ವಲಯ ಯೋಜನೆ (ಆರ್‌ಡಿಎಸ್‌ಎಸ್)ಯಡಿ ಇಂಧನ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಕೇಂದ್ರ ಸರಕಾರದಿಂದ ಶೇ.60ರಷ್ಟು ಸಹಾಯಧನ ಸಿಗುವುದರ ಜೊತೆಗೆ ಸ್ಮಾರ್ಟ್ ಮೀಟರ್ ಅಳವಡಿಸಲು ಪ್ರತಿ ಮೀಟರ್‌ಗೆ 900 ರೂ.ಸಹಾಯಧನ ಸಿಗುತ್ತದೆ ಎಂದು ಹೇಳಿದರು.

ಸಹಾಯಧನವನ್ನೆ ಕೆಲವರು 900 ರೂ. ಗಳಿಗೆ ಸ್ಮಾರ್ಟ್ ಮೀಟರ್ ಸಿಗುತ್ತದೆ. ರಾಜ್ಯ ಸರಕಾರ ಹೆಚ್ಚು ಹಣ ಪಡೆಯುತ್ತಿದೆ ಎಂದು ಆರೋಪಿಸಿ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಹೈಕೋರ್ಟ್‌ನಲ್ಲಿ ಈ ಪ್ರಕರಣದ ವಿಚಾರಣೆ ನಡೆಯುತ್ತಿದೆ. ಆದುದರಿಂದ ಈ ಬಗ್ಗೆ ಹೆಚ್ಚು ಏನು ಪ್ರತಿಕ್ರಿಯಿಸುವುದಿಲ್ಲ ಎಂದು ಜಾರ್ಜ್ ತಿಳಿಸಿದರು.

ರೈತರಿಗೆ ಸೋಲಾರ್ ಪಂಪ್ ಸೆಟ್ ನೀಡುವ ಕುಸುಮ್- ಬಿ ಯೋಜನೆಯನ್ನು ರಾಜ್ಯ ಸರಕಾರ ಈಗಾಗಲೇ ಜಾರಿಗೆ ತಂದಿದೆ. ಇದರಲ್ಲಿ ಕೇಂದ್ರ ಸರಕಾರ ಶೇ.30, ರಾಜ್ಯ ಸರಕಾರ ಶೇ.50 ಹಾಗೂ ಫಲಾನುಭವಿಗಳು ಶೇ.20ರಷ್ಟು ಹಣವನ್ನು ಭರಿಸಬೇಕಾಗುತ್ತದೆ. ಅದೇ ರಿತಿ, ಪಿಎಂ ಕುಸುಮ್-ಸಿ ಯೋಜನೆ ರೈತರಿಗೆ ಅದರಲ್ಲೂ ಮುಖ್ಯವಾಗಿ ಬಯಲು ಸೀಮೆ ಭಾಗದ ರೈತರಿಗೆ ವರದಾನವಾಗಿದೆ ಎಂದು ಜಾರ್ಜ್ ತಿಳಿಸಿದರು.

ನಮ್ಮ ಸರಕಾರ ಅಧಿಕಾರಕ್ಕೆ ಬಂದ ನಂತರ 4 ಸಾವಿರ ಮೆ.ವ್ಯಾ.ವಿದ್ಯುತ್ ಉತ್ಪಾದನೆ ಮಾಡಿದ್ದೇವೆ. ಪ್ರಸ್ತುತ 35 ಸಾವಿರ ಮೆ.ವ್ಯಾ. ವಿದ್ಯುತ್ ಉತ್ಪಾದನೆ ಮಾಡುವ ಸಾಮರ್ಥ್ಯವಿದ್ದು, 2030ರ ವೇಳೆಗೆ ಇದನ್ನು 60 ಸಾವಿರ ಮೆ.ವ್ಯಾ.ಗೆ ಹೆಚ್ಚಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

## ಭಾರೀ ಮಳೆ: ಕಬಿನಿ ಜಲಾಶಯ ಭರ್ತಿಗೆ ಕ್ಷಣಗಣನೆ, ನದಿ ಪಾತ್ರದ ಜನರಿಗೆ ಪ್ರವಾಹದ ಮುನ್ನೆಚ್ಚರಿಕೆ

ಮೈಸೂರು: ಕಬಿನಿ ಜಲಾಶಯದಿಂದ 25 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡುತ್ತಿರುವುದರಿಂದ, ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಹಾಗೂ ಸುರಕ್ಷಿತ ಸ್ಥಳಕ್ಕೆ ತೆರಳುವಂತೆ ಸೂಚನೆ ಹೊರಡಿಸಲಾಗಿದೆ.

ಕೇರಳದ ವಯನಾಡು ಸೇರಿದಂತೆ ಜಲಾನಯನ ಪ್ರದೇಶದಲ್ಲಿ ಭಾರೀ ಪ್ರಮಾಣದಲ್ಲಿ ಮಳೆ ಆಗುತ್ತಿರುವುದರಿಂದ, ಜಲಾಶಯವು ಪ್ರಸ್ತುತ ಭರ್ತಿಯಾಗುವ ಹಂತದಲ್ಲಿದೆ. ಬುಧವಾರ ಪ್ರಸ್ತುತ ಕಬಿನಿ ಜಲಾಶಯಕ್ಕೆ ಒಳ ಹರಿವಿನ ಪ್ರಮಾಣ 24 ಸಾವಿರ ಕ್ಯೂಸೆಕ್?ಗೂ ಹೆಚ್ಚು ಇದೆ. ಬಿಟ್ಟು ಬಿಡದೇ ಮಳೆಯಾಗುತ್ತಿರುವುದರಿಂದ ಕಬಿನಿ ಜಲಾಶಯದಿಂದ 25 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತದೆ. ಯಾವುದೇ ಕ್ಷಣದಲ್ಲಿ ಇನ್ನೂ ಹೆಚ್ಚಿನ ಪ್ರಮಾಣದ ನೀರನ್ನು ನದಿಗೆ ಹರಿಸುವ ಸಾಧ್ಯತೆ ಇರುತ್ತದೆ. ಹಾಗಾಗಿ ಕಬಿನಿ ನದಿ ಪಾತ್ರದಲ್ಲಿರುವ ಮತ್ತು ನದಿಯ ಎರಡು ದಂಡೆಯಲ್ಲಿ ವಾಸಿಸುತ್ತಿರುವ ಜನರು ತಮ್ಮ ಆಸ್ತಿ-ಪಾಸ್ತಿ ಹಾಗೂ ಜಾನುವಾರ ರಕ್ಷಣೆಗೆ ಬಗ್ಗೆ ಮುನ್ನೆಚ್ಚರಿಕೆ ವಹಿಸಿ, ಸುರಕ್ಷಿತ ಸ್ಥಳಗಳಿಗೆ ತೆರಳಲು ಕೋರಲಾಗಿದೆ ಎಂದು ಕಬಿನಿ ಜಲಾಶಯ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಎ. ಚಂದ್ರಶೇಖರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಬಿನಿ ಜಲಾಶಯ ತುಂಬಲು ನಾಲ್ಕು ಅಡಿ ಬಾಕಿಯಿದ್ದು, ಜಲಾಶಯದ ಗರಿಷ್ಠಮಟ್ಟ 84 ಅಡಿಗಳು ಆಗಿತ್ತು. ಮುನ್ನೆಚ್ಚರಿಕಾ ಕ್ರಮವಾಗಿ ಜಯಶಯದ ನಾಲ್ಕು ಗೇಟ್?ಗಳ ಮೂಲಕ ಕಪಿಲ ನದಿಗೆ ಸುಮಾರು 25 ಸಾವಿರ ಕ್ಯೂಸೆಕ್ ನೀರನ್ನು ಬಿಡಲಾಗಿದ್ದು, ಮಳೆ ಹೆಚ್ಚಾದರೆ ಮತ್ತಷ್ಟು ನೀರನ್ನು ನದಿ ಪಾತ್ರಕ್ಕೆ ಬಿಡುವ ಬಗ್ಗೆ ಜಯಶಯದ ಮುಖ್ಯ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ನಂಜನಗೂಡು ರಸ್ತೆ ಬಂದ್ ಆಗುವ ಸಾಧ್ಯತೆ : ಕಬಿನಿ ಜಲಾಶಯದಿಂದ 25 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡುತ್ತಿರುವುದರಿಂದ, ನುಗು ಜಲಾಶಯದ ಸೇತುವೆ, ಹುಲ್ಲಹಳ್ಳಿಯ ಸೇತುವೆ ಮೇಲೆ ಭಾರೀ ವಾಹನಗಳ ಸಂಚಾರವನ್ನು ರದ್ದುಪಡಿಸುವ ಸಾಧ್ಯತೆ ಇದೆ. ಅಲ್ಲದೇ, ಇನ್ನೂ 40 ಸಾವಿರಕ್ಕೂ ಕ್ಯೂಸೆಕ್ ನೀರನ್ನು ಹೊರಬಿಟ್ಟರೆ, ಮೈಸೂರು-ಗುಂಡ್ಲುಪೇಟೆ, ಕೇರಳ, ಊಟಿ ರಸ್ತೆ ಸಂಚಾರ ಮಾಡುವ ನಂಜನಗೂಡು ಸೇತುವೆ ಮೇಲೆ ಭಾರೀ ವಾಹನಗಳ ಸಂಚಾರ ನಿರ್ಬಂಧಿಸಿ, ಬೇರೆ ಮಾರ್ಗಗಳ ಮೂಲಕ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಅಧಿಕಾರಿಗಳು ಚಿಂತಿಸಿದ್ದಾರೆ.

ಕಬಿನಿ ನೀರು ತುಂಬಿ ಹರಿದಷ್ಟು , ನದಿ ಪಾತ್ರದ ಜನರು ಭಯದಿಂದ ತಮ್ಮ ಸಂಬಂಧಿಕರ ಮನೆಗಳಿಗೆ ತೆರಳಿ, ಮಳೆಯ ಪ್ರಮಾಣ ಕಡಿಮೆ ಹಾಗೂ ಕಬಿನಿ ಜಲಾಶಯದ ಹೊರ ಹರಿವಿನ ಪ್ರಮಾಣ ಕಡಿಮೆಯಾದಾಗ ತಮ್ಮ ಮನೆಗಳಿಗೆ ಹಿಂತಿಗುರುತ್ತಾರೆ.

## ತೀವ್ರ ಅತಿಸಾರ (ಬೇದಿ) ತೊಂದರೆಗಳಿಂದ ಮಕ್ಕಳನ್ನು ರಕ್ಷಿಸಿ: ಜಿಪಂ ಸಿಇಓ ರಾಹುಲ್ ಶಿಂಧೆ ಸೂಚನೆ

ಬೆಳಗಾವಿ: ತೀವ್ರ ಅತಿಸಾರದಿಂದ ಮಕ್ಕಳ ಮರಣ ಪ್ರಮಾಣವನ್ನು ಶೂನ್ಯಕ್ಕೆ ತರುವುದನ್ನು ಗುರಿಯಾಗಿಸಿ ಅತಿಸಾರ ನಿಲ್ಲಿಸಿ ಅಭಿಯಾನ-2025 ಅನ್ನು ಕಡ್ಡಾಯವಾಗಿ ಆಚರಿಸಿ ಸಾರ್ವಜನಕರಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸಬೇಕೆಂದು ಜಿಪಂ ಸಿಇಓ ರಾಹುಲ್ ಶಿಂಧೆ ಸೂಚಿಸಿದರು.

ನಗರದ ಜಿಪಂ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿದ ಅವರು ಮಾತನಾಡಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಮಾಡಿ ಕುಂಠಿತ ಪ್ರಗತಿ ಹೊಂದಿರುವ ತಾಲ್ಲೂಕಾ ಆರೋಗ್ಯ ಅಧಿಕಾರಿಗಳಿಗೆ ಪ್ರಗತಿ ಸಾಧಿಸಿ ವರದಿಯನ್ನು ಸಲ್ಲಿಸಲು ತಿಳಿಸಿದರು.

ಜನಸಾಮಾನ್ಯರಲ್ಲಿ ವಿಶೇಷವಾಗಿ ಪೋಷಕರು ಮತ್ತು ಮಕ್ಕಳಲ್ಲಿ ಪರಿಸರ ನೈರ್ಮಲ್ಯ, ಕೈ ತೊಳೆಯುವ ಸರಿಯಾದ ವಿಧಾನ, ವೈಯಕ್ತಿಕ ಶುಚಿತ್ವ ಹಾಗೂ ಅತಿಸಾರದಿಂದ ಪೀಡಿತ ಮಕ್ಕಳಿಗೆ ತುರ್ತು ಆರೈಕೆ ಮತ್ತು ಸೂಕ್ತ ಚಿಕಿತ್ಸೆ ನೀಡುವ ಕುರಿತು ಅರಿವು ಮೂಡಿಸುವುದು ಮತ್ತು ಈ ಮೂಲಕ 0-5 ವರ್ಷದೊಳಗಿನ ಮಕ್ಕಳ ಮರಣ ಪ್ರಮಾಣವನ್ನು ಕಡಿಮೆ ಮಾಡುವ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಯಶಸ್ವಿಯಾಗಿ ಹಮ್ಮಿಕೊಂಡು ಜಿಲ್ಲೆಯಲ್ಲಿ ಯಾವುದೇ ಮಗು ಅತಿಸಾರದಿಂದ ಬಳಲದಂತೆ ನೋಡಿಕೊಳ್ಳಲು ಸಭೆಯಲ್ಲಿ ಎಲ್ಲ ಆರೋಗ್ಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದರು.

ಮಳೆಗಾಲ ಪ್ರಾರಂಭವಾಗಿರುವದರಿಂದ ಅಲ್ಲಲ್ಲಿ ನೀರು ನಿಂತು ಸೊಳ್ಳೆಗಳು ಉತ್ಪನ್ನವಾಗಿ ಕೀಟಜನ್ಯ ಸಾಂಕ್ರಾಮಿಕ ರೋಗಗಳಾದ ಡೆಂಗೀ, ಚಿಕುನ್ ಗುನ್ಯಾ, ಮಲೇರಿಯಾ ಕಾಯಿಲೆಗಳು ಹರಡಬಹುದಾಗಿದ್ದು, ಲಾರ್ವಾ ಸಮೀಕ್ಷೆಯನ್ನು ಕೈಕೊಂಡು ಸೊಳ್ಳೆ ಉತ್ಪನ್ನ ತಾಣಗಳನ್ನು ನಾಶಪಡಿಸಲು ಸಕ್ರೀಯ ಸಮೀಕ್ಷೆ ಕೈಕೊಳ್ಳಬೇಕೆಂದು ಜಿಪಂ ಸಿಇಓ ರಾಹುಲ್ ಶಿಂಧೆ ತಿಳಿಸಿದರು

ಜಿಲ್ಲೆಯಲ್ಲಿ ವಯಸ್ಕರಿಗೆ ಬಿ.ಸಿಜಿ. ಲಸಿಕೆಯನ್ನು ನೀಡಲಾಗುತ್ತಿದ್ದು, ಈ ಲಸಿಕೆಯನ್ನು 60 ವರ್ಷ ಮೇಲ್ಪಟ್ಟ ಎಲ್ಲರಿಗೂ ಹಾಗೂ 18 ವರ್ಷ ಮೇಲ್ಪಟ್ಟ ಕಳೆದ ಐದು ವರ್ಷಗಳಲ್ಲಿ ಕ್ಷಯ ರೋಗದಿಂದ



ಬಳಲಿದ ವ್ಯಕ್ತಿಗಳಿಗೆ, ಧೂಮ್ರಪಾನಿಗಳಿಗೆ, ಕ್ಷಯ ರೋಗಿಗಳ ಸಂಪರ್ಕವಿರುವವರಿಗೆ, ಮಧುಮೇಹ ರೋಗಿಗಳಿಗೆ ಹಾಗೂ ವಯಸ್ಸಿಗನುಗುಣವಾಗಿ ಕಡಿಮೆ ತೂಕ ಇರುವವರು ಬಿ.ಸಿಜಿ ಲಸಿಕೆಯನ್ನು ಪಡೆದು ಜಿಲ್ಲೆಯನ್ನು ಕ್ಷಯ ರೋಗ ಮುಕ್ತ ಜಿಲ್ಲೆಯನ್ನು ಮಾಡಲು ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಬಸವರಾಜ ಅಡವಿಮಠ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಐ.ಪಿ ಗಡಾದ ಚಿಕ್ಕೋಡಿ ಅಪರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್. ಗಡೇದ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ವಿ.ವಿ.ಶಿಂಧೆ, ಜಿಲ್ಲಾ ಕ್ಷಯ ರೋಗ ನಿಯಂತ್ರಣಾಧಿಕಾರಿ ಡಾ. ಚಾಂದನಿ ದೇವಡಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಎಸ್ ಎಸ್ ಸಾಯನ್ನವರ, ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ಗೀತಾ ಕಾಂಬಳೆ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ವಿಶ್ವನಾಥ ಭೋವಿ, ಜಿಲ್ಲಾ ರೋಗವಾಹಕ ಆಶ್ರೀತರೋಗಗಳ ನಿಯಂತ್ರಣಾ ಅಧಿಕಾರಿ ಡಾ.ವಿವೇಕ ಹೊನ್ನಳ್ಳಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ಸಂಜಯ ದೊಡಮನಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನಿಯರಿಂಗ್ ಉಪ ವಿಭಾಗದ ಎಚ್ ಅರುಣಕುಮಾರ ಹಾಗೂ ತಾಲೂಕಾ ಆರೋಗ್ಯ ಅಧಿಕಾರಿಗಳು ಮತ್ತು ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈಧ್ಯಾಧಿಕಾರಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮಳೆಹಾನಿ ಸಂತ್ರಸ್ತರಿಗೆ ಪರಿಹಾರ ಬಿಡುಗಡೆ ಮಾಡಿದ ರಾಜ್ಯ ಸರ್ಕಾರ

ಬೆಂಗಳೂರು: 2025-26ನೇ ಸಾಲಿನಲ್ಲಿ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ನಿಗದಿತ ಸಮಯಕ್ಕಿಂತ ಮೊದಲೇ ಮುಂಗಾರು ಮಳೆ ಪ್ರಾರಂಭವಾಗಿದ್ದು, ಹಲವೆಡೆ ಜನಜೀವನ ಅಸ್ತವ್ಯಸ್ಥವಾಗಿದೆ. ಹೀಗಾಗಿ ರಾಜ್ಯ ಸರ್ಕಾರ, ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ ಮನೆಗಳ ಹಾಗೂ ಮನೆಯ ಗೃಹೋಪಯೋಗಿ ವಸ್ತುಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಪರಿಹಾರ ಬಿಡುಗಡೆ ಮಾಡಿದೆ.

ನಿಯಾಮಾನುಸಾರ ಅರ್ಹತೆಯಂತೆ ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಅವರ ಪಿ.ಡಿ. ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಪರಿಹಾರ ಪಾವತಿಸಲು ಆದೇಶ ಹೊರಡಿಸಿದೆ. ಕಳೆದ ಏ. 1 ರಿಂದ 31ರ ಅವಧಿಯಲ್ಲಿ ಹಾನಿಯಾದ ಮನೆಗಳಿಗೆ ಪರಿಹಾರ ನೀಡುವಂತೆ ಜಿಲ್ಲಾಧಿಕಾರಿಗಳಿ ಆದೇಶಿಸಲಾಗಿದ್ದು, ಪೂರ್ಣ ಪ್ರಮಾಣ ಮನೆ ಕಳೆದುಕೊಂಡವರಿಗೆ 1.20 ಲಕ್ಷ ರೂ. ಹಾಗೂ ದೇವರಾಜ್ ಅರಸು ವಸತಿ ಯೋಜನೆಯಡಿ ಮನೆ ಮಂಜೂರು ಮಾಡುವಂತೆ ಸೂಚಿಸಲಾಗಿದೆ.

ಯಾವುದಕ್ಕೆ ಎಷ್ಟು ಪರಿಹಾರ

ಪೂರ್ಣ ಹಾನಿಯಾದ ಮನೆಗೆ ರೂ.1.20 ಲಕ್ಷ ರೂ. ಪರಿಹಾರ. ಜೊತೆಗೆ ದೇವರಾಜ್ ಅರಸು ವಸತಿ ಯೋಜನೆಯಡಿ ಮನೆ ಹಂಚಿಕೆ.

ಹೆಚ್ಚು ಪ್ರಮಾಣದ ಮನೆ ಹಾನಿ (ಶೇ 50% ಕ್ಕಿಂತ ಮೇಲ್ಪಟ್ಟು ಆಗೂ ಶೇ 75% ಕ್ಕಿಂತ ಕಡಿಮೆ), ಮನೆಯ ಗೋಡೆಗಳ ಕುಸಿತ ಹಾಗೂ ಮೇಲ್ಛಾವಣಿ ಹಾನಿಗೆ 50,000 ರೂ. ಪರಿಹಾರ.



ಅತೀ ಸಣ್ಣ ಪ್ರಮಾಣದ ಹಾನಿ (ಶೇ15% ಕ್ಕಿಂತ ಮೇಲ್ಪಟ್ಟು ಹಾಗೂ ಶೇ 20% ಕ್ಕಿಂತ ಕಡಿಮೆ), ಮನೆಯ ಮೇಲ್ಛಾವಣಿಯ ಹಂಚು/ಶೀಟುಗಳ, ಬಾಗಿಲು ಮತ್ತು ಕಿಟಕಿಗಳ ಹಾನಿ ಹಾಗೂ ಇನ್ನಿತರ ಸಣ್ಣ ಪುಟ್ಟ ಹಾನಿಗೆ- ರೂ 6,500. ಮಧ್ಯಮ ಪ್ರಮಾಣ ಮನೆ ಹಾನಿ (ಶೇ 20%ಕ್ಕಿಂತ ಮೇಲ್ಪಟ್ಟು ಹಾಗೂ ಶೇ 50% ಕ್ಕಿಂತ ಕಡಿಮೆ), ಮನೆಯ ಗೋಡೆಗಳಲ್ಲಿ ಬಿರುಕು/ಸಣ್ಣ ಪ್ರಮಾಣದ ಕುಸಿತಕ್ಕೆ ರೂ 25,000ರೂ. ಸರ್ಕಾರದ ಆದೇಶದಲ್ಲೇನಿದೆ?

ಅತಿವೃಷ್ಟಿ/ಪ್ರವಾಹದಿಂದ ಮನೆಯ ಗೋಡೆಗಳೊಂದಿಗೆ ಮೇಲ್ಛಾವಣಿ ಕುಸಿತದಿಂದ ಹಾನಿಯಾದ ಮನೆಗಳನ್ನು ಸಂಪೂರ್ಣ ಹಾನಿಯಾದ ಮನೆಯೆಂದು ಪರಿಗಣಿಸಲು ಸೂಚಿಸಿದೆ. ಮನೆಹಾನಿಯ ಪ್ರಮಾಣವನ್ನು ಈ ಮೇಲಿನಂತೆ ಗ್ರಾಮ ಆಡಳಿತಾಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ ಸಹಾಯಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಇವರುಗಳು ಜಂಟಿಯಾಗಿ ಸ್ಪಷ್ಟವಾಗಿ ನಿರ್ದಿಷ್ಟಪಡಿಸುವುದು. ಕಾಲಮಿತಿಯೊಳಗೆ ನಿಯಮಾನುಸಾರ ಅರ್ಹ ಸಂತ್ರಸ್ಮರಿಗೆ ಪರಿಹಾರ ಪಾವತಿಸಲು ಕ್ರವಹಿಸಲು ಸೂಚಿಸಲಾಗಿದೆ.


ಭಾಗಶಃ ಮನೆ ಹಾನಿಗಾಗಿ ರೂ.50,000 ಗಳ ವರೆಗೆ ಪಾವತಿಸಲಾಗುವ ಮನೆ ಹಾನಿ ಪರಿಹಾರ ಪಡೆಯುವ ಸಂತ್ರಸ್ಥರ ವಿವರಗಳಾದ, ಹಾನಿಯಾದ ಮನೆಯ ಜಿ.ಪಿ. ಎಸ್. ಛಾಯಾಚಿತ್ರ, ಆರ್.ಆರ್. ಸಂಖ್ಯೆ ಮತ್ತು ಆಧಾರ್ ಸಂಖ್ಯೆಯನ್ನು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲು ಜಿಲ್ಲಾಧಿಕಾರಿಗಳು ಕ್ರಮವಹಿಸತಕ್ಕದ್ದು ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಪೂರ್ಣ ಹಾನಿಯಾದ ಮನೆಗಳಿಗೆ ರಾಜ್ಯ ವಿಪತ್ತು ಪರಿಹಾರ ನಿಧಿಯ ಮಾರ್ಗಸೂಚಿಗಳನ್ವಯ ರೂ.1.20 ಲಕ್ಷ ರೂ. ಪರಿಹಾರ. ಇದರ ಜೊತೆಗೆ ಹೆಚ್ಚುವರಿಯಾಗಿ ವಸತಿ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ದೇವರಾಜ್ ಅರಸು ವಸತಿ ಯೋಜನೆಯಡಿ ಮನೆ ಹಂಚಿಕೆ ಪತ್ರವನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಖಉಖಊಅಐ ತಂತ್ರಾಂಶದ ಮೂಲಕ ವಿತರಿಸಲು ಸೂಚಿಸಿದೆ.

ಪರಿಹಾರ ಹಣ ಪಡೆದುಕೊಳ್ಳುದ್ದೇಗೆ?

ಈ ವರ್ಷದ ಪೂರ್ವ ಮುಂಗಾರು ಮತ್ತು ಮುಂಗಾರು ಹಂಗಾಮಿನಲ್ಲಿ ಬಂದ ಮಳೆಗೆ ಮನೆಯಾನಿಯಾಗಿರುವ ಫಲಾನುಭವಿಗಳು ಅಗತ್ಯ ದಾಖಲಾತಿಗಳನ್ನು ತೆಗೆದುಕೊಂಡು ನಿಮ್ಮ ಗ್ರಾಮ ಪಂಚಾಯತಿ ಅಥವಾ ಗ್ರಾಮ ಲೆಕ್ಕಾಧಿಕಾರಿ ಕಚೇರಿಗೆ ಭೇಟಿ ಅರ್ಜಿಯನ್ನು ಸಲ್ಲಿಸಬೇಕು.

## ಕಾಂಗ್ರೆಸ್ ಮಾಜಿ ಶಾಸಕ ಕಾಕಾ ಸಾಹೇಬ್ ಪಾಟೀಲ್ ನಿಧನ; ಗಣ್ಯರಿಂದ ಸಂತಾಪ



ಬೆಳಗಾವಿ: ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ನಿಪ್ಪಾಣಿ ಕ್ಷೇತ್ರದ ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಮಾಜಿ ಶಾಸಕ ಕಾಕಾ ಸಾಹೇಬ್ ಪಾಟೀಲ್ ಅವರು ಬುಧವಾರ ನಿಧನರಾಗಿದ್ದಾರೆ.

ಬೆಳಗಾವಿಯ ಕೆಎಲ್‌ಇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಕಾಕಾ ಸಾಹೇಬ್ ಪಾಟೀಲ್ ಅವರು ಚಿಕಿತ್ಸೆ ಫಲಕಾರಿಯಾಗದೆ ಇಂದು ಬೆಳಗಿನ ಜಾವ ಕೊನೆಯುಸಿರೆಳೆದಿದ್ದಾರೆ.

70 ವರ್ಷದ ಕಾಕಾ ಸಾಹೇಬ್ ಪಾಟೀಲ್ ಅವರು ಪತ್ನಿ, ಇಬ್ಬರು ಮಕ್ಕಳನ್ನು ಅಗಲಿದ್ದಾರೆ.

ರಾಜ್ಯ ಕಾಂಗ್ರೆಸ್‌ನ ಹಿರಿಯ ರಾಜಕಾರಣಿ ಕಾಕಾ ಸಾಹೇಬ್ ಪಾಟೀಲ್ ನಿಧನ ಸುದ್ದಿ ಕೇಳಿ ಕಾರ್ಯಕರ್ತರು ಆಘಾತಗೊಂಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸೇರಿದಂತೆ ಹಲವು ಗಣ್ಯರು, ಅವರ ರಾಜಕೀಯ ಮಿತ್ರರು ಸಂತಾಪ ಸೂಚಿಸಿದ್ದಾರೆ.

ನಿಪ್ಪಾಣಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕರು ಹಾಗೂ ಹಿರಿಯ ನಾಯಕರಾಗಿದ್ದ ಕಾಕಾಸಾಹೇಬ್ ಪಾಟೀಲ ಅವರ ನಿಧನ ದುಃಖವುಂಟುಮಾಡಿದೆ. ನೇರ ನಡೆ ನುಡಿ, ಜನಪರ ಕಾಳಜಿಯ ಮುತ್ಸದ್ದಿ ನಾಯಕನ ಅಗಲಿಕೆಯಿಂದ ರಾಜಕೀಯ ರಂಗ ಮಾತ್ರವಲ್ಲ, ಇಡೀ ಸಮಾಜ ಬಡವಾಗಿದೆ.

ಮೃತರ ಆತ್ಮಕ್ಕೆ ಶಾಂತಿ ದೊರಕಲಿ, ಅವರ ಕುಟುಂಬಸ್ಥರಿಗೆ ನೋವು ಭರಿಸುವ ಶಕ್ತಿ ಸಿಗಲೆಂದು ಪ್ರಾರ್ಥಿಸುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಕಾಕಾ ಸಾಹೇಬ್ ಪಾಟೀಲ್ ಅವರು 1999 ರಿಂದ 2013ರ ವರೆಗೆ ಸತತ ಚುನಾವಣೆಯಲ್ಲಿ ಗೆಲ್ಲುವ ಮೂಲಕ ನಿಪ್ಪಾಣಿ ಕ್ಷೇತ್ರದಿಂದ ಕಾಂಗ್ರೆಸ್ ಶಾಸಕರಾಗಿದ್ದರು. ಕಾಕಾ ಸಾಹೇಬ್ ಪಾಟೀಲ್ ಸಜ್ಜನ ರಾಜಕಾರಣಿ ಆಗಿದ್ದು, ನಿಪ್ಪಾಣಿಯಲ್ಲಿ ಅಪಾರ ಸಂಖ್ಯೆಯ ಕಾರ್ಯಕರ್ತರು ಹೊಂದಿದ್ದರು.

# ಸಾಧಕ ಕ್ರೀಡಾ ಪಟುಗಳಿರುವ ಸರಕಾರಿ ಶಾಲೆಗಳಿಗೆ ರೂ. 1 ಲಕ್ಷ ಪ್ರೋತ್ಸಾಹಧನ

ಧಾರವಾಡ : 2025-26 ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದಿರುವ ಕ್ರೀಡಾ ಸಂಸ್ಥೆಗಳು ಆಯೋಜಿಸುವ ತಾಲ್ಲೂಕು ಜಿಲ್ಲೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳಿಗೆ ಪ್ರೋತ್ಸಾಹವಾಗಿ ತಲಾ ರೂ.1 ಲಕ್ಷದಂತೆ ಇಲಾಖೆಯಿಂದ ಪ್ರೋತ್ಸಾಹಧನವನ್ನು ನೀಡಲು ತೀರ್ಮಾನಿಸಲಾಗಿದೆ.

ಈ ಅನುದಾನದಲ್ಲಿ ರೂ.10 ಸಾವಿರಗಳನ್ನು ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ಮತ್ತು ರೂ.90 ಸಾವಿರಗಳನ್ನು ಶಾಲೆಯ ಎಸ್.ಡಿ.ಎಂ.ಸಿ ಗೆ ಅಗತ್ಯ ಕ್ರೀಡಾ ಸಾಮಾಗ್ರಿಗಳನ್ನು ಖರೀದಿ ಮಾಡಲು ಪ್ರೋತ್ಸಾಹಧನವನ್ನು ನೀಡಲಾಗುವುದು.

ಜಿಲ್ಲೆಯ ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದಿರುವ ಕ್ರೀಡಾ ಸಂಸ್ಥೆಗಳು ಆಯೋಜಿಸುವ ತಾಲ್ಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ಹೊಂದಿರುವ ಆಸಕ್ತ ಸರ್ಕಾರಿ ಶಾಲೆಗಳು ಜೂನ್ 27, 2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಜೊತೆಗೆ ಪ್ರಶಸ್ತಿ ಪತ್ರಗಳು, ಶಾಲೆಯ ದಾಖಲೆಗಳು, ಮುಖ್ಯೋಪಾಧ್ಯಾಯರು ಮತ್ತು ಎಸ್.ಡಿ.ಎಂ.ಸಿ ಅಧ್ಯಕ್ಷರ ಜಂಟಿ ಖಾತೆಯ ಪಾಸ್ ಪುಸ್ತಕದ ನಕಲು ಹಾಗೂ ದೈಹಿಕ ಶಿಕ್ಷಕರ ಪಾಸ್ ಪುಸ್ತಕದ ನಕಲು ಇವುಗಳನ್ನು ಮುಖ್ಯೋಪಾಧ್ಯಾಯರ ಸಹಿಯೊಂದಿಗೆ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836-2447424 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ-ನಂತರದ ವಿದ್ಯಾರ್ಥಿಗಳ ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವ ಅವಧಿ ಜೂ. 30 ವರೆಗೆ ವಿಸ್ತರಣೆ

ಧಾರವಾಡ : 2024-25ನೇ ಸಾಲಿನಲ್ಲಿ ಮೆಟ್ರಿಕ ನಂತರದ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.

ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಜೂನ್ 30, 2025 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005, ಅಥವಾ **bcwd-helpline@gmail.com** ಗೆ ಭೇಟಿ ನೀಡಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂನ್ 21 ರಂದು ಅಂತರ್‌ರಾಷ್ಟ್ರೀಯ ಯೋಗ ದಿನಾಚರಣೆ

ಧಾರವಾಡ : ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ಜಿಲ್ಲಾ ಆಯುಷ್ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21, 2025 ರಂದು ಬೆಳಿಗ್ಗೆ 6:45 ಗಂಟೆಗೆ ಧಾರವಾಡದ ಡಾ. ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಸಾಮೂಹಿಕ ಯೋಗಭ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಇಲಾಖೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್. ಗಣೇಶ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್.ಖಾದ್ರಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್. ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ-ಧಾರವಾಡ ಮಹಾನಗರ ಮಹಾಪೌರರಾದ ರಾಮಪ್ಪ ಕೃಷ್ಣಪ್ಪ ಬಡಿಗೇರ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ ಮತ್ತು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ್ ಅವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ. ಎಸ್.ಘಾಳಿ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಮ್.ಹೊನಕೇರಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ ಅವರು ಭಾಗವಹಿಸುವರೆಂದು ಜಿಲ್ಲಾ ಆಯುಷ್ ಅಧಿಕಾರಿ ಗಣೇಶ ಎಸ್. ಕಬಾಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

******

# ಜೂನ್ 27 ರಂದು ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಜುಲೈ 02 ರಂದು ಡಾ. ಫ. ಗು. ಹಳಕಟ್ಟಿ ಅವರ ಜಯಂತಿ




ಧಾರವಾಡ : ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜೂನ್ 27 ರಂದು ನಾಡಪ್ರಭು ಶ್ರೀ ಕೆಂಪೇಗೌಡ ಮತ್ತು ಜುಲೈ 02 ರಂದು ಡಾ. ಫ. ಗು. ಹಳಕಟ್ಟಿ ಅವರ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ವಿಜೃಂಭಣೆಯಿಂದ ಪ್ರತಿವರ್ಷದಂತೆ ಆಚರಿಸೋಣ ಎಂದು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾಜದ ಹಿರಿಯ ಮುಖಂಡರು ಹಾಗೂ ಸಾರ್ವಜನಿಕರು ಸಭೆಯಲ್ಲಿ ಉಪಸ್ಥಿತರಿದ್ದರು.

# ಡಿಸಿಸಿ ಬ್ಯಾಂಕ್ ಅನ್ನುವದು ತಾಯಿ ಬೇರಿದ್ದಂತೆ-ಯಾಳಗಿ

ತಾಳಿಕೋಟೆ, ವಿಜಯಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ,ದ ತಾಳಿಕೋಟೆ ಶಾಖೆಯಲ್ಲಿಯೂ ಸಹ ಈ ಹಿಂದಿನಿಂದಲೂ ರೈತರಿಗೆ ಅನುಕೂಲ ಕಲ್ಪಿಸುತ್ತಾ ಸಾಗಿಬಂದಿದ್ದಲ್ಲದೇ ಎಲ್ಲ ಗ್ರಾಹಕರ ಪ್ರೀತಿಗೂ ಸಹ ಪಾತ್ರವಾಗಿದೆ ಎಂದು ವ್ಹಿಡಿಸಿಸಿ ಬ್ಯಾಂಕ್ ನಿರ್ದೇಶಕ ಬಿ.ಎಸ್.ಪಾಟೀಲ(ಯಾಳಗಿ) ಅವರು ನುಡಿದರು.



ಮಂಗಳವಾರರಂದು ಡಿಸಿಸಿ ಬ್ಯಾಂಕ್ ತಾಳಿಕೋಟೆ ಶಾಖೆಯ ವತಿಯಿಂದ ಗ್ರಾಹಕರ ಕುರಿತು ಏರ್ಪಡಿಸಲಾದ ಗ್ರಾಹಕರ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಅವರು ಕೇಂದ್ರ ಸರ್ಕಾರವಾಗಲಿ ರಾಜ್ಯ ಸರ್ಕಾರವಾಗಲಿ ರೈತರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಈ ಹಿಂದಿನಿಂದಲೂ ಸಹಾಯ ಹಸ್ತ ಕಲ್ಪಿಸುತ್ತಾ ಸಾಗಿಬಂದಿವೆ ಬ್ಯಾಂಕ್ ಅನ್ನುವದು ಯಾವಾಗಲೂ ಸಾಲಗಾರರಾಗಬಾರದು ಸಾಲದಲ್ಲಿಯೇ ಮುಳಗುವಂತಹ ಕಾರ್ಯ ರೈತಾಪಿ ಜನತೆ ಯಾಗಲಿ ಅಥವಾ ಗ್ರಾಹಕರಾಗಲಿ ಮಾಡಬಾರದೆಂದರು. ಸಾಲ ಪಡೆದಂತಹ ಹಣವನ್ನು ಅದಕ್ಕೆ ಆದಾಯ ಬರುವಂತಹ ಕಾರ್ಯಕ್ಕೆ ಉಪಯೋಗಿಸಬೇಕು ಕನಿಷ್ಠ ಆದಾಯ ಬರದಿದ್ದರೂ ಪಡೆದಂತಹ ಸಾಲಕ್ಕೆ ಸಂಬಂದಿತ ಬಡ್ಡಿಯನ್ನಾದರೂ ತುಂಬಿ ಸಾಲದ ಜೀರ್ಣೋದ್ದಾರತೆಯಲ್ಲಿ ಮುಂದುವರೆಯಬೇಕೆಂದರು. ಸಾಲ ಪಡೆಯುವಂತಹ ಗ್ರಾಹಕರು ಪಡೆದಂತಹ ಸಾಲದ ಮರುಪಾವತಿ ಮಾಡುವಂತಹ ಮಿತಿ ಲಕ್ಷದಲ್ಲಿಟ್ಟುಕೊಳ್ಳಬೇಕು ಶೇರುದಾರರ ಹಾಗೂ ಬ್ಯಾಂಕಿನ ಸಾಲಪಡೆಯುವಂತಹ ಅರ್ಹತೆಗಳ ಕುರಿತು ವಿವರಿಸಿದ ಪಾಟೀಲ ಅದಕ್ಕೆ ಬೇಕಾದಂತಹ ಅಗತ್ಯ ದಾಖಲಾತೆಗಳ ಕುರಿತು ವಿವರಿಸಿದರಲ್ಲದೇ ಬ್ಯಾಂಕಿನ ಸಂಬಂದಿಸಿದ ವ್ಯವಸ್ಥಾಪಕರೊಂದಿಗೆ ಸಿಬ್ಬಂದಿಯೊಂದಿಗೆ ರೈತರು ಎಂದಿನಂತೆ ಸಹಕಾರ ಮನೋಭಾವನೆಯೊಂದಿಗೆ ಸಾಗಿ ಸಿಗತಕ್ಕಂತಹ ಸಾಲ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದರು.

ಇನ್ನೋರ್ವ ಡಿಸಿಸಿ ಬ್ಯಾಂಕ್ ಶಾಖಾ ವ್ಯವಸ್ಥಾಪಕರಾದ ಆರ್.ಜಿ.ಹಿರೂರ ಅವರು ಮಾತನಾಡಿ ತಾಳಿಕೋಟೆ ಶಾಖೆಗೆ ಸಂಬಂದಿತ ಸುಮಾರು 8 ಪಿಕೆಪಿ-ಎಸ್ ಬ್ಯಾಂಕುಗಳು ಇದ್ದು ಅವುಗಳಲ್ಲಿ ತಾಳಿಕೋಟೆ, ನಾವದಗಿ, ಗುಂಡಕನಾಳ, ಬೊಮ್ಮನಹಳ್ಳಿ, ತುಂಬಗಿ, ಸಾಲವಾಡಗಿ, ಹರನಾಳ, ಭಂಟನೂರ ಒಳಗೊಂಡಿವೆ ಎಂದರು. ಫಾರ್ಮಹೌಸ ರೈತ ಮಿತ್ರ ಎಂಬ ಸೌಲಭ್ಯಗಳ ಕುರಿತು ವಿವರಿಸಿದ ವ್ಯವಸ್ಥಾಪಕರು ಸುಲಬ ಸಾಲ, ಸಿಸಿ ಸಾಲ, ಹೋಂ ಸಾಲ, ವೇತನ ಆಧಾರಿತ ಸಾಲಗಳ ಕುರಿತು ವಿವರಿಸಿದರಲ್ಲದೇ ಎನ್‌ಎಫ್-ಎಸ್ ಕೃಷಿ ಏತರ ಸಾಲ, ಸ್ವಸಹಾಯ ಗುಂಪು(ಎಸ್‌ಎಚ್‌ಜಿ) ಸಾಲ, ಒಳಗೊಂಡು ಬ್ಯಾಂಕಿನಲ್ಲಿರತಕ್ಕಂತಹ ಸಾಲಗಳ ಕುರಿತು ಹಾಗೂ ರೈತರಿಗೆ ಬಡ್ಡಿ ರಹಿತ ಸಾಲಗಳ ಯೋಜನೆಗಳ ಕುರಿತು ಸಹ ವಿವರಿಸಿದರು.

ಇನ್ನೋರ್ವ ಕ್ಷೇತ್ರಾಧಿಕಾರಿಯಾದ ಎಸ್.ಬಿ.ಬಿರಾದಾರ ಅವರು ಮಾತನಾಡಿ ತಾಳಿಕೋಟೆ ಭಾಗದಲ್ಲಿ ಇರತಕ್ಕಂತಹ ಪಿಕೆಪಿಎಸ್ ಶಾಖೆಗಳು 8 ಶಾಖೆಗಳಿದ್ದರೂ 7200 ಜನ ಗ್ರಾಹಕರಿದ್ದಾರೆ ಈ ಎಲ್ಲ ಶಾಖೆಗಳಿಗೆ ಸಂಬಂದಿಸಿ ತಾಳಿಕೋಟೆಯ ಡಿಸಿಸಿ ಬ್ಯಾಂಕ್ ಶಾಖೆಯು ಮುಖ್ಯ ಕಚೇರಿ ಸ್ಥಾನ ಹೊಂದಿದ್ದು ಇವೆಲ್ಲವೂ ರೈತರಿಗೆ ಸಾಲ ನೀಡಲು ಅನುಕೂಲವಾಗಿವೆ ಎಂದರು. ನಬಾರ್ಡ ಆಗಲಿ ಸೇಂಟ್ರಲ್ ಆಗಲಿ ಸ್ಟೇಟ್‌ನಿಂದಾಗಲಿ ಹಣ ನೀಡಿದರೆ ಸಾಲ ಸೌಲಭ್ಯ ನೀಡಲು ಅನುಕೂಲವಾಗಲಿದೆ ಮುಖ್ಯವಾಗಿ ಸಾಲ ಮರುಪಾವತಿ ಮಾಡಿದವರಿಗೆ ಈ ಹಿಂದಿನಕ್ಕಿಂತಲೂ ಹೆಚ್ಚಿಗೆ ಸಾಲ ಸೌಲಭ್ಯ ತೀವ್ರಗತಿಯಲ್ಲಿ ನೀಡಲಾಗುತ್ತದೆ ಎಂದರು.

ಗ್ರಾಹಕರಾದ ಚೋಕ್ಕಾವಿಯ ಸಾಹೇಬಗೌಡ ಕರಿಗೌಡರ, ಗೊಟಗುಣಕಿಂ-ಉ ಬಸನಗೌಡ ಪಾಟೀಲ ಅವರು ಡಿಸಿಸಿ ಬ್ಯಾಂಕಿನಲ್ಲಿ ದೊರೆತ್ತಿರುವ ಸಾಲ ಸೌಲಭ್ಯಗಳ ಕುರಿತು ಬ್ಯಾಂಕಿನ ಕಾರ್ಯ ವೈಖರ್ಯಗಳ ಕುರಿತು ಇನ್ನಷ್ಟು ಹೆಚ್ಚಿಗೆ ಮಾಹಿತಿ ಪಡೆಯುವದರೊಂದಿಗೆ ಮೇಚ್ಚುಗೆ ವ್ಯಕ್ತಪಡಿಸಿದರು.

ವೇದಿಕೆಯ ಮೇಲೆ ತಾಳಿಕೋಟೆ ಪಿಕೆಪಿಎಸ್ ಅಧ್ಯಕ್ಷರಾದ ಗುರಸಂಗಪ್ಪ ಕಶೆಟ್ಟಿ, ಭಂಟನೂರ ಪಿಕೆಪಿಎಸ್ ಮಾಜಿ ಅಧ್ಯಕ್ಷ ಹಣಮಗೌಡ ಬಸರಡ್ಡಿ, ಉಪಸ್ಥಿತರಿದ್ದರು. ಈ ಸಮಯದಲ್ಲಿ ಸ್ವಸಾಹಯ ಸಂಘದ ಮಹಿಳಾ ಪ್ರತಿನಿಧಿಗಳು, ಜಂಟಿ ಬದ್ರತೆ ಗುಂಪಿನವರು ಹಾಗೂ ಗ್ರಾಹಕರಾದ ಎಸ್.ಎಸ್.ಹೆಗರಡ್ಡಿ, ಕಾಶಿರಾಯಗೌಡ ಕೋನ್ಯಾಳ, ಬಸನಗೌಡ ಬಿರಾದಾರ, ರಾಮನಗೌಡ ಹೆಮ್ಮಡಗಿ, ನಿಂಗಣ್ಣ ಚಳ್ಳಗಿ, ಸಂಗನಗೌಡ ಪಾಟೀಲ, ಎಂ.ಎಸ್.ಬಸರಡ್ಡಿ, ಶಶಿಕುಮಾರ ಪಾಟೀಲ, ಬಸವಂತ್ರಾಯ ಚೌದ್ರಿ, ಹಣಮಗೌಡ ಬಿರಾದಾರ, ಶ್ರೀದೇವಿ ಬಡಿಗೇರ, ಸಾವಿತ್ರಿ ಹೂಗಾರ, ಪುಷ್ಪಾವತಿ ಬಡಿಗೇರ, ಶೃತಿ ದೇವೂರ, ಗುರುಬಾಯಿ ಬಡಿಗೇರ, ಮಾನಮ್ಮ ಮೋಟಗಿ, ಭಾಗ್ಯಶ್ರೀ ಸಾಲಂಕಿ, ಶ್ರೀದೇವಿ ಮೋಹಿತೆ, ಮೊದಲಾದವರು ಉಪಸ್ಥಿತರಿದ್ದರು.

ಎಸ್.ಬಿ.ರಾಮಗಿರಿಮಠ ಸ್ವಾಗತಿಸಿ ನಿರೂಪಿಸಿದರು.

# ಪ್ಲಾಟ ಕೊಡದ ಧಾರವಾಡದ ಸ್ವರ್ಣ ಡವಲಪರ್ಸ್‌ಗೆ ದಂಡ ವಿಧಿಸಿ ದೂರುದಾರರಿಗೆ ಪರಿಹಾರ ನೀಡಲು ಜಿಲ್ಲಾ ಗ್ರಾಹಕರ ಆಯೋಗದ ಆದೇಶ

ಧಾರವಾಡ : ಬೆಂಗಳೂರಿನ ಮಾರುತಿ ನಗರದ ನಿವಾಸಿ ಸರೋಜಾ ಸಂಪಗಾಂವ ಅವರ ಗಂಡ ಜೀವಿತಾ ಅವಧಿಯಲ್ಲಿ ಎದುರುದಾರರು ಧಾರವಾಡದ ಹಳಿಯಾಳ ರೋಡ್‌ನಲ್ಲಿ ಅಭಿವೃದ್ಧಿ ಪಡಿಸುತ್ತಿದ್ದ ಸ್ವರ್ಣ ಎನಕ್ಲೇವ್ ಪ್ರೋಜೆಕ್ಟ್‌ನಲ್ಲಿ ಪ್ಲಾಟನ್ನು ರೂ.7,65,000 ಖರೀದಿಸಿ ಕರಾರು ಒಪ್ಪಂದ ಮಾಡಿಕೊಂಡಿದ್ದರು. ಇದರ ಪೈಕಿ ದೂರುದಾರರು ರೂ.5,27,750 ಮುಂಗಡ ಹಣವಾಗಿ ಎದುರುದಾರರಿಗೆ ಪಾವತಿಸಿರುತ್ತಾರೆ. ಆದರೆ ಎದುರುದಾರರು ಆ ಪ್ಲಾಟನ್ನು ಅಭಿವೃದ್ಧಿ ಪಡಿಸದೇ ಒಂದಿಲ್ಲೊಂದು ನೆಪ ಹೇಳಿ ಮುಂದುಡುತ್ತಾ ಬಂದರು. ದೂರುದಾರರು ಸಾಕಷ್ಟು ಸಲ ಮುಂಗಡ ಹಣವನ್ನು ಮರಳಿಸುವಂತೆ ವಿನಂತಿಸಿದರೂ ಯಾವುದೇ ಪ್ರಯೋಜನ ಆಗಿರಲಿಲ್ಲ. ದೂರುದಾರರ ಅಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಎದುರುದಾರ, ಬಿಲ್ಡರ್ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ.03/05/2024 ರಂದು ಈ ದೂರನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಮಾಹಿಳಾ ಸದಸ್ಯರು, ದೂರುದಾರಳಿಂದ ರೂ. 5,27,750 ಮುಂಗಡ ಹಣ ಪಡೆದುಕೊಂಡು ಬಾಕಿ ಹಣ ಪಡೆದು ಎದುರುದಾರರು ದೂರುದಾರರಿಗೆ ಪ್ಲಾಟ್ ಖರೀದಿ ಪತ್ರ ನೋಂದಣಿ ಮಾಡಿಕೊಡಲು ವಿಫಲರಾಗಿರುವುದು ಕಂಡು ಬರುತ್ತದೆ. ಮತ್ತು ದೂರುದಾರಳಿಗೆ ಮುಂಗಡ ಹಣವನ್ನು ಹಿಂತಿರುಗಿಸದೆ ಇರುವುದು ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಎಂದು ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ. ದೂರುದಾರಳು ಸಂದಾಯ ಮಾಡಿದ ರೂ.5,27,750 ಮತ್ತು ಅದರ ಮೇಲೆ ಮುಂಗಡ ಹಣ ಪಾವತಿಸಿದ ದಿನದಿಂದ ಪೂರ್ತಿ ಹಣ ಸಂದಾಯವಾಗುವವರೆಗೆ ಶೇ. 10 ರಂತೆ ವಾರ್ಷಿಕ ಬಡ್ಡಿ ಲೆಕ್ಕ ಹಾಕಿ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ಕೊಡುವಂತೆ ಆಯೋಗ ಎದುರುದಾರರಿಗೆ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಮತ್ತು ಮಾನಸಿಕ ಹಿಂಸೆಗಾಗಿ ರೂ.50,000 ಪರಿಹಾರ ಹಾಗೂ ಈ ಪ್ರಕರಣದಖರ್ಚು ವೆಚ್ಚ ಅಂತಾ ರೂ.10,000 ನೀಡುವಂತೆ ಸ್ವರ್ಣಡವಲಪರ್ಸ್‌ನ ಮ್ಯಾನೇಜಿಂಗ್ ಪಾರ್ಟನರ್ ಆದ ರಾಜು ನಯ್ಯರ್ ಎದುರುದಾರರಿಗೆ ಆಯೋಗ ತನ್ನ ತೀರ್ಪಿನಲ್ಲಿ ಹೇಳಿದೆ.

# ಕಂದಾಯ ಇಲಾಖೆ ಕಟ್ಟಡಗಳ ತೆರವಿಗೆ ನಿರ್ಧಾರ: ಅಧಿಕಾರಿಗಳ ತಂಡ ಭೇಟಿ



ರಬಕವಿ-ಬನಹಟ್ಟಿ,ಜೂ17: ಬನಹಟ್ಟಿಯ ಹೃದಯಭಾಗದಲ್ಲಿರುವ ಕಂದಾಯ ಇಲಾಖೆಯ ಪಾಳು ಬಿದ್ದ ಕಟ್ಟಡ ತೆರವುಗೊಳಿಸುದರ ಕುರಿತು 'ಪಾಳು ಬಿದ್ದ ಸರ್ಕಾರಿ ಕಟ್ಟಡ ತೆರವು ಯಾವಾಗ?' ಎಂಬ ಶೀರ್ಷಿಕೆಯಡಿ ದಿನಪತ್ರಿಕೆಯಲ್ಲಿ ಪ್ರಕಟಗೊಂಡ ವರದಿಗೆ ಸ್ಪಂದಿಸಿದ ಕಂದಾಯ ಇಲಾಖೆ ಬುಧವಾರ ಉಪವಿಭಾಗಾಧಿಕಾರಿ ಶ್ವೇತಾ ಬೀಡಕರ ಹಾಗು ತಹಶೀಲ್ದಾರ ಗಿರೀಶ ಸ್ವಾದಿ ನೇತೃತ್ವದ ತಂಡವು ವೀಕ್ಷಣೆ ನಡೆಸಿದ ಪ್ರಸಂಗ ಜರುಗಿತು.

ತೀವ್ರ ಶಿಥಿಲಾವಸ್ಥೆ ನಂತರ ಜನವಸತಿಗೆ ಯೋಗ್ಯವಲ್ಲವೆಂದು ಸುಮಾರು 15 ವರ್ಷಗಳೇ ಕಳೆದರೂ ಇಂದಿಗೂ ಕಟ್ಟಡ ತೆರವುಗೊಳಿಸದೆ ತೀವ್ರ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಕೆಂಗಣ್ಣಿಗೆ ಇಲಾಖೆ ಗುರಿಯಾಗಿತ್ತು. ಪತ್ರಿಕೆಯ ವರದಿಗೆ ಎಚ್ಚೆತ್ತ ಅಧಿಕಾರಿಗಳ ತಂಡ ರಬಕವಿ ಹಾಗು ಬನಹಟ್ಟಿಯಲ್ಲಿರುವ ಕಂದಾಯ ಇಲಾಖೆಯ ಪಾಳು ಬಿದ್ದ ಕಟ್ಟಡ ಸ್ಥಳಕ್ಕೆ ಧಾವಿಸಿ ಸೂಕ್ತ ನಿರ್ಧಾರಕ್ಕೆ ಸಹಮತ ತೋರಿರುವದು ಸಾರ್ವಜನಿಕರಲ್ಲಿ ನೆಮ್ಮದಿ ತರುವಲ್ಲಿ ಕಾರಣವಾಗಿದೆ.

ಸ್ಥಳ ವೀಕ್ಷಣೆ ನಂತರ ಪತ್ರಿಕೆಯೊಂದಿಗೆ ಮಾತನಾಡಿದ ಉಪವಿಭಾಗಾಧಿಕಾರಿ ಶ್ವೇತಾ ಬೀಡಕರ, ಎರಡೂ ಪಟ್ಟಣಗಳಲ್ಲಿನ ಕಂದಾಯ ಇಲಾಖೆಯ ಚಾವಡಿ ನಿರ್ವಹಣೆಯಲ್ಲಿದ್ದ ಕಟ್ಟಡಗಳು ಸಂಪೂರ್ಣ ಪಾಳು ಬಿದ್ದಿದ್ದು, ಶೀಘ್ರವೇ ಕಟ್ಟಡ ತೆರವುಗೊಳಿಸುವಲ್ಲಿ ಮೇಲಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಲಾಗುವದು. ಅದರಂತೆ ಸೂಕ್ತ ಸ್ಥಳಾವಕಾಶದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ ಕಾರ್ಯಚಟುವಟಿಕೆಗಳು ನಡೆಯಲಿವೆ ಎಂದು ತಿಳಿಸಿದರು.

****

## ಜೂನ್ 30 ವರೆಗೆ ಅವಧಿ ವಿಸ್ತರಣೆ

ಬಾಗಲಕೋಟ, : ಕಳೆದ 2024-25ನೇ ಸಾಲಿನಲ್ಲಿ ಮೆಟ್ರಕ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂ.15ಕ್ಕೆ ನಿಗದಿಪಡಿಸಲಾಗಿತ್ತು. ಹೈ ಕೋರ್ಟ ಮದ್ಯಂತರ ಆದೇಶದಂತೆ ರಾಜೀವ ಗಾಂಧಿ ವಿಶ್ವವಿದ್ಯಾಲಯದ ಕೋರ್ಸಗಳಿಗೆ ಶುಲ್ಕ ಮರುಪಾವತಿಗೆ ಜೂ.30ವರೆಗೆ ಅವಧಿ ವಿಸ್ತರಿಸಲಾಗಿದೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆ ವಿಮೆ ನೋಂದಣಿ ಆರಂಭ

ಬಾಗಲಕೋಟ, : ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ-ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ರೈತರು ಅಧಿಸೂಚಿತ ಬೆಳೆಗಳಿಗೆ ನೋಂದಣಿ ಮಾಡಿಸಬೇಕಾಗಿದೆ. ಬೆಳೆಸಾಲ ಪಡೆದ ರೈತರಿಗೆ ಯೋಜನೆ ಕಡ್ಡಾಯವಾಗಿದ್ದು, ಭಾಗವಹಿಸದಿರುವ ರೈತರು ಅಂತಿಮ ದಿನಾಂಕಕ್ಕಿಂತ 7 ದಿನ ಮೊದಲು ಬ್ಯಾಂಕಗೆ ಲಿಖಿತ ಪತ್ರ ಕೊಡಬೇಕು. ಬೆಳೆಸಾಲವಿಲ್ಲದ ರೈತರಿಗೆ ಯೋಜನೆ ಐಚ್ಛಿಕ, ಜಿಲ್ಲೆಗೆ ಯುನಿವರ್ಸಲ್ ಸೊಂಪೊ ಜಿ.ಐ.ಸಿ. ವಿಮಾ ಕಂಪನಿ ಆಯ್ಕೆಯಾಗಿದೆ. ಆಹಾರ ಬೆಳೆಗಳಿಗೆ ಶೇಕಡಾ 2 ಮತ್ತು ವಾಣಿಜ್ಯ ಬೆಳೆಗಳಿಗೆ ಶೇಕಡಾ 5 ರಷ್ಟು ಕಂತು ಪಾವತಿ ಅನಿವಾರ್ಯ, ಬೆಳೆ ನಷ್ಟದ ಮಾಹಿತಿ 72 ಗಂಟೆಯೊಳಗೆ ನೀಡಬೇಕು. ಕಟಾವಿನ ನಂತರ 14 ದಿನಗಳಲ್ಲಿ ನಷ್ಟವಾದರೂ ಸಹ ಪರಿಹಾರ ಸಿಗಲಿದೆ. ನೋಂದಣಿಗೆ ಪ್ರೂಟ್ಸ್ ಎಫ್‌ಐಡಿ ಕಡ್ಡಾಯ. ಹೆಚ್ಚಿನ ಮಾಹಿತಿಗಾಗಿ **www. samrakshane.karnataka,gov.in** ಹಾಗೂ ಸಮೀಪದ ರೈತ ಸಂಪರ್ಕ ಕೇಂದ್ರ/ ತಾಲೂಕ ಕೃಷಿ / ತೋಟಗಾರಿಕೆ ಇಲಾಖೆ ಹಾಗೂ ಬೆಳೆ ವಿಮೆ ಸಂಸ್ಥೆ ಕಛೇರಿಗೆ ಸಂಪರ್ಕಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಗದಗ : 2024-25 ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ರಾಜೀವ ಗಾಂಧಿ ವಿಶ್ವ ವಿದ್ಯಾಲಯದ ಕೋರ್ಸುಗಳಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

***

# ಕಾರಾಗೃಹವಾಸಿಗಳಿಗೆ ಸಾಹಿತ್ಯ ಕಮ್ಮಟ

ಹಾವೇರಿ: : ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಕರ್ನಾಟಕ ಸಾಹಿತ್ಯ ಅಕಾಡೆಮಿ ಹಾಗೂ ಕಾರಾಗೃಹ ಇಲಾಖೆ, ಜಿಲ್ಲಾ ಕಾರಾಗೃಹ ಸಹಯೋಗದಲ್ಲಿ ಕಾರಾಗೃಹವಾಸಿಗಳಿಗೆ ಸಾಹಿತ್ಯ ಕಮ್ಮಟ ಜೂನ್ 19, 20 ಹಾಗೂ 21 ರಂದು ಹಾವೇರಿ ಜಿಲ್ಲಾ ಕಾರಾಗೃಹದಲ್ಲಿ ಆಯೋಜಿಸಲಾಗಿದೆ.

ಜೂನ್ 19 ರಂದು ಬೆಳಿಗ್ಗೆ 10-30ಕ್ಕೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕಂದರಾಜ್ ಅವರು ಉದ್ಘಾಟನೆ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ದಾವಣಗೆರೆ ಪೂರ್ವ ವಲಯ ಪೊಲೀಸ್ ಮಹಾನಿರೀಕ್ಷಕ ಡಾ.ಬಿ.ಆರ್.ರವಿಕಾಂತೇಗೌಡ, ಹಾವೇರಿ ವಿ ವಿ ಕುಲಪತಿ ಡಾ.ಸುರೇಶ ಜಂಗಮಶೆಟ್ಟಿ, ಗೊಟಗೋಡಿ ಕರ್ನಾಟಕ ಜಾನಪದ ವಿವಿ ಕುಲಸಚಿವ ಡಾ.ಸಿ.ಟಿ.ಗುರುಪ್ರಸಾದ್ ಅವರು ಭಾಗವಹಿಸಲಿದ್ದಾರೆ.

ಜಿಲ್ಲಾ ಕಾರಾಗೃಹ ಅಧೀಕ್ಷಕಿ ನಾಗರತ್ನ ವೈ ಡಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಕರಿಯಪ್ಪ ಎನ್, ಸಾಹಿತ್ಯ ಕಮ್ಮಟ ಸಂಚಾಲಕ ಗಣೇಶ ಅಮೀನಗಡ ಅವರು ಉಪಸ್ಥಿತರಿರುವರು. 'ಕರ್ನಾಟಕ' ಸಾಹಿತ್ಯ ಅಕಾಡೆಮಿ ಸದಸ್ಯ ಸಂಚಾಲಕ ಡಾ.ಮಲ್ಲಿಕಾರ್ಜುನ ಬಿ. ಮಾನ್ಪಡೆ ಅವರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ.

ಜೂನ್ 20 ರಂದು ಬೆಳಿಗ್ಗೆ 10-30ಕ್ಕೆ ನಡೆಯುವ ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಸಾಹಿತಿ ಹೆಬಸೂರ ರಂಜಾನ್ ಅವರು ಕನ್ನಡ ಕಾವ್ಯದಲ್ಲಿ ಸೌಹಾರ್ದ ನೆಲೆಗಳು, ಶಿಗ್ಗಾಂವ ಚೆನ್ನಪ್ಪ ಕುನ್ನೂರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಾ.ನಾಗರಾಜ ದ್ಯಾಮನಕೊಪ್ಪ ಅವರು ವಚನ ಸಾಹಿತ್ಯದ ಮಹತ್ವ, ಕೂನಬೇವು ಕವಿ ಹಾಗೂ ರೈತ ಚಂಸು ಪಾಟೀಲ ಅವರು ಕೃಷಿ ಬದುಕು :ಒಂದು ಸ್ವಾನುಭವ ಕಥ-'ನ ಎಂಬ ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಗೊಟಗೋಡಿ ಉತ್ಸವ ರಾಕ್ ಗಾರ್ಡ್ ಕ್ಯೂರೇಟರ್ ಡಾ.ವೇದರಾಣಿ ದಾಸನೂರ ಅವರು ಭಾಗವಹಿಸಲಿದ್ದಾರೆ.

ಜೂನ್ 21 ರಂದು ಬೆಳಿಗ್ಗೆ 10-30ಕ್ಕೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಪತ್ರಕರ್ತ ಹಾಗೂ ಲೇಖಕ ಗಣೇಶ ಅಮಿನಗಡ ಅವರು ರಂಗಚಿಕಿತ್ಸೆ ಉಪನ್ಯಾಸ ನೀಡಲಿದ್ದಾರೆ. ಗೊಟಗೋಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಟಿ.ಎಂ.ಭಾಸ್ಕರ್ ಅವರು ಸಮಾರೋಪ ನುಡಿಗಳನ್ನಾಡಲಿದ್ದಾರೆ.

ಜಿಲ್ಲಾ ಕಾರಾಗೃಹ ಅಧೀಕ್ಷಕಿ ನಾಗರತ್ನ ವೈ ಡಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಸಂಚಾಲಕ ಡಾ.ಮಲ್ಲಿಕಾರ್ಜುನ ಬಿ. ಮಾನ್ಪಡೆ ಅವರು ಉಪಸ್ಥಿತರಿರುವರು.

# ಸ್ಕೌಟ್ಸ್-ಗೈಡ್ಸ್ ಮಕ್ಕಳಿಂದ ಪರಿಸರ ದಿನಾಚರಣೆ

ಸವದತ್ತಿ:- "ಸ್ಕೌಟ್ಸ್-ಗೈಡ್ಸ್ ಎಂಬುದು ಸೇವೆಗಾಗಿ ಇರುವ ಸಂಸ್ಥೆಯಾಗಿದ್ದು ಮಕ್ಕಳಿಗೆ ಸೇವಾ ಮನೋಭಾವನೆ ಬೆಳೆಸುವ ಜೊತೆಗೆ ಪರಿಸರ ಸಂರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ, ಆದುದರಿಂದ ಪರಿಸರ ರಕ್ಷಣೆ ಮಾಡುವುದು ನಮ್ಮೆಲ್ಲರ ಹೊಣೆಯಾಗಿದೆ. ಗಿಡಮರಗಳನ್ನು ನೆಟ್ಟು ಪೋಷಿಸಬೇಕು" ಎಂದು ಕುಮಾರೇಶ್ವರ ವಿದ್ಯಾಮಂದಿರದ ಚೇರಮನ್ ಶ್ರೀಕಾಂತ ಮಿರಜಕರ ತಮ್ಮ ಅಭಿಪ್ರಾಯ ಹಂಚಿಕೊಂಡರು.



ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಸವದತ್ತಿ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಸ್ಥಳೀಯ ಸಂಸ್ಥೆ ಸವದತ್ತಿ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿ ಬೆಳಗಾವಿ ಹಾಗೂ ಶ್ರೀ ರೇಣುಕಾ ಶುಗರ್ಸ್ ಲಿಮಿಟೆಡ್ ಮುನವಳ್ಳಿ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಕುಮಾರೇಶ್ವರ ವಿದ್ಯಾಮಂದಿರ ಮುನವಳ್ಳಿಯಲ್ಲಿ "ವಿಶ್ವ ಪರಿಸರ ದಿನಾಚರಣೆ" ಮತ್ತು ಸ್ಕೌಟ್ಸ್-ಗೈಡ್ಸ್ ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಂತರ ಮಾತನಾಡಿದ ಬಿಇಓ ಮೋಹನ ದಂಡಿನ ಸ್ಕೌಟ್ಸ್-ಗೈಡ್ಸ್ ಮಕ್ಕಳಿಗೆ ಶಾಲೆಗಳಲ್ಲಿ ಹಾಗೂ ಜೀವನದಲ್ಲಿ ಶಿಸ್ತು ಕಲಿಸುವುದರ ಜೊತೆಗೆ ದೇಶಪ್ರೇಮ ಬೆಳೆಸಲು ಸಹಾಯಕಾರಿಯಾಗಿದೆ, ಜೊತೆಗೆ ಮುಂದಿನ ನೂರು ವರ್ಷಗಳ ಭವಿಷ್ಯಕ್ಕಾಗಿ ನಾವು ಪರಿಸರ ರಕ್ಷಣೆಗಾಗಿ ಸುಶಿಕ್ಷಿತರಾಗಬೇಕಾಗಿದೆ ಎಂದರು.

ಪ್ರಾಸ್ತಾವಿಕವಾಗ ಸ್ಕೌಟ್ಸ್-ಗೈಡ್ಸ್ ಕಾರ್ಯದರ್ಶಿ ಎನ್.ಎನ್.ಕಬ್ಬೂರ ಮಾತನಾಡಿದರು, ಶ್ರೀ ರೇಣುಕಾ ಶುಗರ್ಸ್ ಲಿಮಿಟೆಡ್ ಮುನವಳ್ಳಿಯ ರಾಘವೇಂದ್ರ ಕುಲಕರ್ಣಿ ತಮ್ಮ ಅಭಿಪ್ರಾಯ ಹಂಚಿಕೊಂಡರು. ಸಂಜೀವ ಕುಮಾರ ನಾಯ್ಕ, ಬಸವರಾಜ ಕಬ್ಬೂರ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ನಂತರ ವಿಶ್ವ ಪರಿಸರ ದಿನಾಚರಣೆಯ ಪ್ರಯುಕ್ತ ಮಕ್ಕಳಿಗೆ ಹಮ್ಮಿಕೊಂಡಿದ್ದ ಭಾಷಣ, ಚಿತ್ರಕಲೆ, ಪ್ರಬಂಧ, ರಂಗೋಲಿ ಸ್ಪರ್ಧೆಗಳನ್ನು ನಡೆಸಲಾಯಿತು. ಸುಮಾರು 200 ಕ್ಕಿಂತ ಹೆಚ್ಚು ಮಕ್ಕಳು ಸಮವಸ್ತ್ರದೊಂದಿಗೆ ಭಾಗವಹಿಸಿದ್ದರು. ಸ್ಕೌಟ್ಸ್-ಗೈಡ್ಸ್ ಜಿಲ್ಲಾ ಸಂಘಟಕರಾದ ಎಸ್.ಬಿ.ವಿಠ್ಠಲ್, ರಾಜಕುಮಾರ ಕುಂಬಾರ, ಇಸಿಓ ಎಸ್.ಎಸ್. ವಾಗೇರಿ, ಸಿ.ಆರ್.ಪಿಗಳಾದ ಜಿ.ಎಸ್. ಚಿಪ್ಪಲಕಟ್ಟಿ, ಎಮ್.ಎಮ್.ಮುರನಾಳ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಶಿಕ್ಷಕ ಸಂಘದ ಅಧ್ಯಕ್ಷ ಕಿರಣ ಕುರಿ, ಗೌರವಾಧ್ಯಕ್ಷ ಎಮ್.ಎಸ್. ಹೊಂಗಲ, ದೈಹಿಕ ಶಿಕ್ಷಕ ಲಕ್ಕನ್ನವರ, ನೌಕರ ಸಂಘದ ಉಪಾಧ್ಯಕ್ಷ ರವಿ ಸಣಕಲ್ಲ, ಶಿಕ್ಷಕರಾದ ಸುನಿಲ ಏಗನಗೌಡ್ರ, ಶಾಲೆಯ ಎಲ್ಲ ಸಿಬ್ಬಂದಿ ಮತ್ತು ಮಕ್ಕಳು ಭಾಗವಹಿಸಿದ್ದರು, ಸಿ.ಆರ್.ಪಿ ಎನ್.ಎ.ಹೊನ್ನಳ್ಳಿ ಕಾರ್ಯಕ್ರಮ ನಿರೂಪಿಸಿ, ಸ್ವಾಗತಿಸಿದರು, ಮುಖ್ಯ ಶಿಕ್ಷಕ ಶಂಕರ ರಾಠೋಡ ವಂದಿಸಿದರು.

# ರವೀಂದ್ರ ಪಾಟೀಲ ಬೆಳಗಾವಿ ಸಹಕಾರ ಇಲಾಖೆಯ ಉಪ ನಿಬಂಧಕರಾಗಿ ಮರು ನೇಮಕ..!

ಮೋಳೆ ;- ಕಳೆದ ವಾರ ಬೆಳಗಾವಿ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರಾಗಿ ರಂಜನಾ ಪೋಳ ಅಧಿಕಾರ ವಹಿಸಿಕೊಂಡಿದ್ದರು. ಅವರ ನೇಮಕ ಪ್ರಶ್ನಿಸಿ, ಹಿಂದಿನ ಉಪ ನಿಬಂಧಕ ರವೀಂದ್ರ ಪಾಟೀಲ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಅವರ ಬೇಡಿಕೆಯನ್ನು ಪುರಸ್ಕರಿಸಿದ ಹೈಕೋರ್ಟ್ ಸೋಮವಾರ ದಿ.17 ರಂದು ರವೀಂದ್ರ ಪಾಟೀಲ ಅವರನ್ನು ಉಪ ನಿಬಂಧಕರಾಗಿ ಮರು ನೇಮಕ ಮಾಡುವಂತೆ ಆದೇಶ ಹೊರಡಿಸಿದೆ.

ರವೀಂದ್ರ ಪಾಟೀಲ ಮೂಲತಃ ಕಾಗವಾಡ



ತಾಲೂಕಿನ ಜುಗೂಳ ಗ್ರಾಮದ ನಿವಾಸಿಯಾಗಿದ್ದಾರೆ, ಬೆಳಗಾವಿಯ ಸಹಕಾರ ಸಂಘಗಳ ಕಚೇರಿಯಲ್ಲಿ ಬುಧವಾರ ದಿ.19 ರಂದು ಉಪ ನಿಬಂಧಕರಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

## ವಿಶ್ವ ರಕ್ತದಾನಿಗಳ ದಿನಾಚರಣೆ-ರಕ್ತದಾನ ಶಿಬಿರ

ಹಾವೇರಿ: : ವಿಶ್ವ ರಕ್ತದಾನಿಗಳ ದಿನಾಚರಣೆ ಹಾಗೂ ರಕ್ತದಾನ ಶಿಬಿರ ಕಾರ್ಯಕ್ರಮ ಜೂನ್ 19 ರಂದು ಬೆಳಿಗ್ಗೆ 11 ಗಂಟೆಗೆ ಹಾವೇರಿ ನಗರದ ಶ್ರೀ ಭಗತ್‌ಸಿಂಗ್ ಪದವಿ ಪೂರ್ವ ಮತ್ತು ಪದವಿ ಮಹಾವಿದ್ಯಾಲಯದಲ್ಲಿ ಜರುಗಲಿದ್ದು, ಆಸಕ್ತರು ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಬಹುದು.

ರಕ್ತದಾನದ ಕುರಿತು ಜಾಗೃತಿ ಜಾಥಾ 10-30ಕ್ಕೆ ಶ್ರೀ ಭಗತ್‌ಸಿಂಗ್ ಪದವಿ ಪೂರ್ವ ಮತ್ತು ಪದವಿ ಮಹಾವಿದ್ಯಾಲಯದಿಂದ ಹೊಸಮನಿ ಸಿದ್ದಪ್ಪ ವೃತ್ತದವರೆಗೆ ಜರುಗಲಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಚೆ ಇಲಾಖೆ ಪಿಂಚಣಿ ಅದಾಲತ್

ಹಾವೇರಿ: : ಹಾವೇರಿ ಅಂಚೆ ವಿಭಾಗದ ಅಂಚೆ ಇಲಾಖೆಯ ಪಿಂಚಣಿದಾರರಿಗೆ ಪಿಂಚಣಿ ಅದಾಲತ್ ಜೂನ್ 20 ರಂದು ಬೆಳಿಗ್ಗೆ 11-30ಕ್ಕೆ ಹಾವೇರಿ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಅಂಚೆ ಸೇವೆಯಿಂದ ನಿವೃತ್ತರಾದ ನೌಕರರ ಪಿಂಚಣಿ ಮತ್ತು ಇತರೆ ನಿವೃತ್ತ ಸೌಲಭ್ಯಗಳ ಹಾಗೂ ಕುಟುಂಬ ಪಿಂಚಣಿದಾರರ ಅಹವಾಲುಗಳೇನಾದರೂ ಇದ್ದಲ್ಲಿ ಅವುಗಳನ್ನು ಅದಾಲತ್‌ನಲ್ಲಿ ಆಲಿಸಲಾಗುವುದು. ಗ್ರಾಮೀಣ ಅಂಚೆ ಸೇವಕರು ಮತ್ತಿತರರಿಗೆ ಈ ಅದಾಲತ್ತನಲ್ಲಿ ಪಾಲ್ಗೊಳ್ಳಲು ಅವಕಾಶವಿಲ್ಲ. ಪಿಂಚಣಿ ಅದಾಲತ್ತನಲ್ಲಿ ಹಾಜರಾಗುವವರಿಗೆ ಯಾವುದೇ ತಹರದ ಭತ್ಯೆ ನೀಡಲಾಗುವುದಿಲ್ಲ.

ಅದಾಲತ್‌ನಲ್ಲಿ ತೀರ್ಮಾನಿಸುವ ಅಹವಾಲುಗಳಿದ್ದಲ್ಲಿ ಲಿಖಿತವಾಗಿ ದಿನಾಂಕ19-06-2025 ರೊಳಗಾಗಿ ಅಂಚೆ ಅಧೀಕ್ಷಕರು, ಹಾವೇರಿ ಅಂಚೆ ವಿಭಾಗ, ಹಾವೇರಿ-581110 ಈ ವಿಳಾಸಕ್ಕೆ ಸಲ್ಲಿಸಬೇಕು ಎಂದು ಹಾವೇರಿ ಅಂಚೆ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೋತ್ಸಾಹಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಹಾವೇರಿ: : ಪ್ರಸಕ್ತ 2025-26ನೇ ಸಾಲಿಗೆ ಸೆರೆಬ್ರಲ್ ಪಾಲ್ಸಿ, ಮಸ್ಕ್ಯುಲರ್ ಡಿಸ್ಟ್ರೋಫಿ, ಪಾರ್ಕಿನ್ಸನ್ಸ್ ಮತ್ತು ಮಲ್ಟಿಪಲ್ ಸ್ಕ್ಲೆರೋಸೊಸ್, ಆಟಿಸಂ, ಬೌದ್ಧಿಕ ವಿಕಲತೆ, ಬಹುವಿಧ ಅಂಗವಿಕಲತೆ(ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಪ್ರತಿ ಮಾಹೆ ರೂ. ಒಂದು ಸಾವಿರ ಪ್ರೋತ್ಸಾಹಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ವಿಕಲತೆಯ ಪ್ರಮಾಣ ಶೇ.75 ಮತ್ತು ಅದಕ್ಕಿಂತ ಹೆಚ್ಚಾಗಿರಬೇಕು, ವಿಕಲತೆ ದೃಢೀಕರಿಸುವ ವೈದ್ಯಕೀಯ ಪ್ರಮಾಣಪತ್ರ, ಯುಡಿಐಡಿ ಕಾರ್ಡ್ , ಆರೈಕೆದಾರರ ಹಾಗೂ ವಿಕಲಚೇತನರ ಇತ್ತೀಚಿನ ಎರಡು ಜಂಟಿ ಭಾವಚಿತ್ರ, ಸಕ್ಷಮ ಪ್ರಾಧಿಕಾರದಿಂದ ಪಡೆದ ವಾಸಸ್ಥಳ ಪ್ರಮಾಣಪತ್ರ, ಆರೈಕೆದಾರರ ಹಾಗೂ ವಿಕಲಚೇತನರ ಆಧಾರ್ ಕಾರ್ಡ್, ಆರೈಕೆದಾರರ ರಾಷ್ಟ್ರೀಕೃತ ಬ್ಯಾಂಕಿನ ಉಳಿತಾಯ ಖಾತೆ ಅಥವಾ ಅಂಚೆ ಕಚೇರಿಯ ಉಳಿತಾಯ ಖಾತೆ ವಿವರದೊಂದಿಗೆ ಅರ್ಜಿಯನ್ನು ದಿನಾಂಕ 18-07-2025ರೊಳಗಾಗಿ ಆಯಾ ತಾಲೂಕಿನ ಎಂ.ಆರ್.ಡಬ್ಲ್ಯೂಗಳಿಗೆ ಸಲ್ಲಿಸಬೇಕು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತಾಲೂಕು ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಂ.ಆರ್. ಡಬ್ಲೂಗಳಾದ ಬ್ಯಾಡಗಿ-ನಾಗರಾಜ ಅಗಸನಹಳ್ಳಿ ಮೊ.9900554583, ಶಿಗ್ಗಾಂವ-ಸಿದ್ದಪ್ಪ ಮಸಳಿ ಮೊ.9008032497, ಹಾವೇರಿ- ಲಕ್ಷ್ಮವ್ವ ಈಳಗೇರ ಮೊ.9632052188, ಹಾನಗಲ್-ಶೇಖಪ್ಪ ಹುಲ್ಲತ್ತಿ ಮೊ.7760374425, ಸವಣೂರ-ಶಿವಪ್ಪ ಯರೇಶಿಮಿ ಮೊ.9632441802, ಹಿರೇಕೆರೂರ-ಸುರೇಶ ಅಜ್ಜಪ್ಪನವರ ಮೊ.9986252108, ರಾಣೇಬೆನ್ನೂರು-ತಿಪ್ಪೇಶ ಗಾಡಿ ಮೊ.9481343768 ಅವರನ್ನು ಸಂಪರ್ಕಿಸಲು ಕೋರಲಾಗಿದೆ.

## ಜುಲೈ 12 ರಂದು ರಾಷ್ಟ್ರೀಯ ಲೋಕ ಅದಾಲತ್

ಹಾವೇರಿ: ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಜುಲೈ 12 ರಂದು ರಾಷ್ಟ್ರೀಯ ಲೋಕ ಅದಾಲತ್ ಜರುಗಲಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶೈಲಜಾ ಎಚ್.ವಿ. ಅವರು ತಿಳಿಸಿದ್ದಾರೆ.

ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ತಿತಿತಿ. ಇಟಚಿ.ಇಚಿಡಿ.ಟುಛಿ.ಎಟ ಅಥವಾ ಸಹಾಯವಾಣಿ ಸಂಖ್ಯೆ15100 ಸಂಪರ್ಕಿಸಲು ಕೋರಲಾಗಿದೆ.

## ನಾಳೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ವಿಜಯಪುರ : ಕೆಪಿಟಿಸಿಎಲ್ ವತಿಯಿಂದ 110ಕೆವ್ಹಿ ಬೇಗಳ ಮೊದಲನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ಕೈಗೊಳ್ಳುವುದರಿಂದ 110/11 ಕೆವ್ಹಿ ವಿವಿ ಕೇಂದ್ರ, ಕೆಐ-ಎಡಿಬಿ, ಭೂತನಾಳ, ಜುಮನಾಳ, ವಿಜಯಪುರ ನಗರ, ಮತ್ತು 33/11 ಕೆವ್ಹಿ ಹೊನ್ನುಟಗಿ, ನಾಗಠಾಣ, ತಿಡಗುಂದಿ ಹಾಗೂ 220/110 ಕೆವ್ಹಿ ಸ್ವೀಕರಣಾ ಕೇಂದ್ರ ವಿಜಯಪುರದಿಂದ ಹೊರಗುವ ಎಲ್ಲ 11 ಕೆವ್ಹಿ ವಿದ್ಯುತ್ ಮಾರ್ಗಗಳಿಗೆ ಜೂ.20ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ಹಾಸ್ಯಕೂಟದ ಮದುವೆ ಹಾಸ್ಯ ಒಡಪುಗಳು ಕಾರ್ಯಕ್ರಮ

## ಒಡಪುಗಳೆಂದರೆ ಹಾಲು ಜೇನು ಕಲ್ಲುಸಕ್ಕರೆ ಇದ್ದಂತೆ: ಪ್ರೊ. ಎಂ.ಎಸ್. ಇಂಚಲ



ಬೆಳಗಾವಿ 3- ಹೆಣ್ಮಕ್ಕಳ ಒಡಪುಗಳೆಂದರೆ ಹಾಲು ಜೇನು ಇದ್ದಂತೆ ಅದರಂತೆ ಪುರಷರು ಹೇಳುವ ಒಡಪುಗಳೆಂದರೆ ಕಲ್ಲು ಸಕ್ಕರೆ ಇದ್ದಂತೆ. ಪುರುಷರು ಹೇಳುವ ಒಡಪುಗಳು ಸ್ವಲ್ಪ ಒರಟೆಂದು ಅನ್ನಿಸಿದರೂ ಇಲ್ಲಿ ಸಕ್ಕರೆ ಸಿಹಿಯಿರುತ್ತದೆ. ಒಗಟು ಮತ್ತು ಒಡಪು ಹೀಗೆ ಎರಡು ಪ್ರಕಾರಗಳಿದ್ದು ಒಗಟು ಅಂದರೆ ಪದ್ಯ ಅಥವಾ ಗದ್ಯ ಎರಡೂ ರೂಪಗಳಲ್ಲಿಯೂ ಇರುತ್ತವೆ. ಒಡಪುಗಳು ಅಲಂಕಾರಿಕವಾದಂತಹ ವರ್ಣಾತ್ಮಕದಿಂದ ಕೂಡಿರುತ್ತವೆ ಎಂದು ಹಿರಿಯ ಕವಿ ಪ್ರೊ. ಎಂ. ಎಸ್. ಇಂಚಲ ಇಂದಿಲ್ಲಿ ಹೇಳಿದರು.

ನಗರದ ಹಾಸ್ಯಕೂಟ ಮತ್ತು ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಇವರ ಸಂಯುಕ್ತ ಆಶ್ರಯದಲ್ಲಿ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ "ಮದುವೆ ವಿನೋದ ಒಡಪುಗಳು" ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಪ್ರೊ. ಇಂಚಲ ಅವರು ಮೇಲಿನಂತೆ ಅಭಿಪ್ರಾಯ ಪಟ್ಟರು.

ಮುಂದೆ ಮಾತನಾಡುತ್ತ ಪ್ರೊ ಇಂಚಲ ಅವರು ಗ್ರಾಮೀಣ ಜನರ ಒಡಪುಗಳಲ್ಲಿ ಕನ್ನಡ ಭಾಷೆಯ ಅಭಿಮಾನವನ್ನು ನಾವು ಕಾಣುತ್ತೇವೆ ಎಂಬುದನ್ನು ಉದಾಹರಣೆ ಸಮೇತವಾಗಿ ತಮ್ಮ ಮಾತುಗಳಲ್ಲಿ ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಉಪನ್ಯಾಸಕರಾದ ಪ್ರೊ. ಅ.ಬ. ಇಟಗಿಯವರು, ದಾಂಪತ್ಯ ಜೀವನದಲ್ಲಿ ಕಾಲಿಡುತ್ತಿದ್ದ ಮದುಮಗ ಮತ್ತು ಮದುವಣಗಿತ್ತಿ ಮಧ್ಯ ನಾಚಿಕೆ ಸ್ವಭಾವವಿರುವುದು ಸಹಜ. ಹುಡುಗಿಯ ಬಾಯಿಯಿಂದ ಒಡಪನ್ನು ಹಾಕಿ ಹುಡುಗನ ಹೆಸರನ್ನು ಅದರಂತೆ ಹುಡುಗನ ಬಾಯಿಯಿಂದ ಒಡಪನ್ನು ಹಾಕಿ ಹುಡುಗಿಯ ಹೆಸರನ್ನು ಕೇಳುವುದರ ಮೂಲಕ ನಗೆ ವಾತಾವರಣ ನಿರ್ಮಿಸುತ್ತಿದ್ದರು. ಸಂತೋಷ ಪಡುತ್ತಿದ್ದರು ಎಂದು ಹೇಳಿ ಕೆಲ ವಿನೋದ ಒಡಪುಗಳನ್ನು ಹೇಳುವುದರ ಮೂಲಕ ರಂಜಿಸಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ನಗೆಮಾತುಗಾರ ಜಿ. ಎಸ್. ಸೋನಾರ ಒಗಟು ಮೆದುಳಿಗೆ ಕಸರತ್ತನ್ನು ಕೊಟ್ಟರೆ ಮದುವೆ ಸಂಭ್ರಮದಲ್ಲಿ ಹೇಳುವ ಒಡಪು ಮನರಂಜನೆಯನ್ನು ನೀಡುತ್ತವೆ.. ಗಂಡ ಹೆಂಡಿರ ನಡುವಿನ ಸಾಮರಸ್ಯವನ್ನು ಈ ಒಡಪುಗಳು ಹೆಚ್ಚಿಸುತ್ತವೆ.ಇತ್ತೀಚೆಗೆ ಇವು ಮರೆಯಾಗುತ್ತಿದ್ದು. ಇವುಗಳನ್ನು ನೆನಪಿಸುವುದಕ್ಕಾಗಿಯೇ ಹಾಸ್ಯಕೂಟ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದು ಹೇಳಿದರು.

ಕೇಂದ್ರ ಉಗ್ರಾಣ ನಿವೃತ್ತ ಅಧಿಕಾರಿ ಕೀರ್ತಿನಾಥ ಮುಳಗುಂದ ಪ್ರಾಯೋಜಕತ್ವವನ್ನು ವಹಿಸಿಕೊಂಡಿದ್ದರು. ಲೇಖಕಿ ಶ್ರೀಮತಿ ಸುನಂದಾ ಹಾಲಭಾವಿ, ಸಾಹಿತಿ ಎ.ಎ. ಸನದಿ, ಶ್ರೀಮತಿ ಶೈಲಜಾ ಕುಲಕರ್ಣಿ, ಬರೆಹಗಾರ್ತಿ ಶ್ರೀಮತಿ ರಾಜೇಶ್ವರಿ ಹಿರೇಮಠ, ಪಾಂಡುರಂಗ ಮಾರಿಹಾಳ ಮದುವೆಯಲ್ಲಿ ವಿನೋದ ಒಗಟುಗಳನ್ನು ಹಂಚಿಕೊಂಡು ಜನರನ್ನು ರಂಜಿಸಿದರು. ತಾನಾಜಿ ನಿರೂಪಿಸಿದರು.

## ಕೊಪ್ಪಳ ಜಿಲ್ಲಾ ಪಂಚಾಯತ ನೂತನ ಸಿಇಓ ಆಗಿ ವರ್ಣಿತ್ ನೇಗಿ ಅಧಿಕಾರ ಸ್ವೀಕಾರ

ಕೊಪ್ಪಳ. ಕೊಪ್ಪಳ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ವರ್ಣಿತ್ ನೇಗಿ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ನಿರ್ಗಮಿತ ಸಿಇಓ ರಾಹಲ್ ರತ್ನಂ ಪಾಂಡೇಯ ಅವರು ನೂತನ ಸಿಇಓ ಅವರಿಗೆ ಅಧಿಕಾರಿ ಹಸ್ತಾಂತರಿದರು.

2019 ರ ಐಎಎಸ್ ಬ್ಯಾಚ್‌ನ ಅಧಿಕಾರಿಯಾದ ವರ್ಣಿತ್ ನೇಗಿ ಅವರು ಮೂಲತಃ ಛತ್ತೀಸಗಡ ರಾಜ್ಯದವರಾಗಿದ್ದಾರೆ. ಅವರು ಮೊದಲು ತಮ್ಮ ಪ್ರೋಬೇಷನರಿ ಅವಧಿಯನ್ನು ಕೊಪ್ಪಳದಲ್ಲಿ ಮುಗಿಸಿದ ನಂತರ ಮೈಸೂರು ಜಿಲ್ಲೆಯ ಹುಣಸೂರಿನಲ್ಲಿ ಸಹಾಯಕ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿ ನಂತರ ಮೈಸೂರು ಆಡಳಿತ ತರಬೇತಿ ಸಂಸ್ಥೆ(ಎ.ಟಿ.ಐ) ನಲ್ಲಿ ಜಂಟಿ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸಿರುತ್ತಾರೆ.

ಬೆಂಗಳೂರಿನ ಗ್ರಾಮಾಂತರ ಜಿಲ್ಲೆ ಹಾಗೂ ಕೊಡಗು ಜಿಲ್ಲೆಯ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ ನಂತರ ಕೆ.ಎಚ್.ಡಿ.ಸಿ ಹುಬ್ಬಳ್ಳಿಯ




ಎಂ.ಡಿ ಆಗಿ ಕರ್ತವ್ಯ ನಿರ್ವಸಿದ ಅವರು ಸದ್ಯ ಕೊಪ್ಪಳ ಜಿಲ್ಲೆಯ ನೂತನ ಸಿಇಓ ಆಗಿ ಅಧಿಕಾರ ಸ್ವೀಕರಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಹಾಗೂ ಜಿಲ್ಲಾ ಪಂಚಾಯತನ ವಿವಿಧ ಶಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕೊಪ್ಪಳ: ನಿವೇದಿತಾ ಪ್ರೌಢಶಾಲೆಯಲ್ಲಿ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮ




ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 17 ರಂದು ಕೊಪ್ಪಳ ನಗರ ಪ್ರದೇಶದ ಹಮಾಲರ ಕಾಲೋನಿಯಲ್ಲಿರುವ ನಿವೇದಿತಾ ಪ್ರೌಢಶಾಲೆಯಲ್ಲಿ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಕಾಂತ ಹೆಚ್.ಹೆಚ್. ಅವರು ಮಾತನಾಡಿ, ಜೂನ್ 16 ರಿಂದ 31 ರವರೆಗೆ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಲುಷಿತ ನೀರು/ಆಹಾರ ಸೇವನೆಯಿಂದ, ಕೈತೊಳೆಯದೇ ಊಟ ಮಾಡುವುದರಿಂದ ಅತಿಸಾರ ಭೇದಿ ಉಂಟಾಗುತ್ತದೆ. ಅತಿಸಾರ ಭೇದಿಯಿಂದ ನಿಮ್ಮ ಮಕ್ಕಳನ್ನು ರಕ್ಷಿಸಲು ಸಾಬೂನು ಮತ್ತು ನೀರಿನಿಂದ ಕೈಗಳನ್ನು ಚೆನ್ನಾಗಿ ತೊಳೆಯಬೇಕು. ಕುಡಿಯಲು ಶುದ್ಧವಾದ ಮತ್ತು ಸುರಕ್ಷಿತ ನೀರನ್ನೇ ಬಳಸಬೇಕು. ನಿಮ್ಮ ಮನೆಯ ಪರಿಸರವನ್ನು ಶುಚಿಯಾಗಿಟ್ಟುಕೊಳ್ಳಬೇಕು, ಕಡ್ಡಾಯವಾಗಿ ಎಲ್ಲರೂ ಶೌಚಾಲಯ ಬಳಸಬೇಕು. ಮಕ್ಕಳಿಗೂ ಸಹ ಶೌಚಾಲಯ ಬಳಸುವ ರೂಢಿ ಮಾಡಬೇಕು. ನವಜಾತ ಶಿಶುಗಳಿಗೆ 06 ತಿಂಗಳವರೆಗೆ ಕೇವಲ ತಾಯಿಯ ಎದೆ ಹಾಲು ನೀಡಬೇಕು. 06 ತಿಂಗಳ ನಂತರ ಪೂರಕ ಪೌಷ್ಠಿಕ ಆಹಾರ ನೀಡಬೇಕು. ಮಕ್ಕಳಿಗೆ ಪೋಷಕಾಂಶಗಳನ್ನು ಒಳಗೊಂಡ ಪೂರಕ ಆಹಾರ ನೀಡಬೇಕೆಂದು ತಿಳಿಸಿದರು. ವಿದ್ಯಾರ್ಥಿಗಳು ಈ ವಿಷಯದ ಕುರಿತು ತಮ್ಮ ಮನೆಯಲ್ಲಿ ತಿಳಿಸಿ, ಅತಿಸಾರಭೇದಿ ನಿಯಂತ್ರಣ ಮಾಡುವಲ್ಲಿ ತಮ್ಮ ಸಹಕಾರ ನೀಡಿ ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.

ಶಾಲಾ ಮುಖ್ಯೋಪಾಧ್ಯಾಯರಾದ ನಿತೀಶ್ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಹಮ್ಮಿಕೊಳ್ಳುವ ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿವೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಗ್ರಾಮಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ತಿಳಿಸಿದರು.

ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀನಿವಾಸ ಸ್ವಾಗತಿಸಿದರು. ನಮ್ಮ ಕ್ಲಿನಿಕ್‌ನ ವಿಜಯ ಇವರು ವಂದಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಕರು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ, ಯಶಸ್ವಿಗೊಳಿಸಿದರು.

## ಕೊಪ್ಪಳ: ನಮ್ಮ ಕ್ಲಿನಿಕ್ ನಲ್ಲಿ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮ



ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 16 ರಂದು ಕೊಪ್ಪಳ ನಗರ ಪ್ರದೇಶದ ಹಮಾಲರ ಕಾಲೋನಿಯಲ್ಲಿರುವ ನಮ್ಮ ಕ್ಲಿನಿಕ್‌ನಲ್ಲಿ ಅತಿಸಾರಭೇದಿ ನಿಯಂತ್ರಣ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ॥ ಪ್ರಕಾಶ ವಿ. ಅವರು ಮಾತನಾಡಿ, ಪ್ರಪಂಚದಲ್ಲಿ ಅತಿಸಾರ ಭೇದಿಯಿಂದ 5 ವರ್ಷದೊಳಗಿನ ಮಕ್ಕಳ ಮರಣವನ್ನು ಸೊನ್ನೆಗೆ(0) ತರುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಕಲುಷಿತ ನೀರು/ಆಹಾರ ಸೇವನೆಯಿಂದ, ಕೈತೊಳೆಯದೇ ಊಟ ಮಾಡುವುದರಿಂದ ಅತಿಸಾರ ಭೇದಿ ಉಂಟಾಗುತ್ತದೆ. ಅತಿಸಾರ ಭೇದಿಯಿಂದ ಮಕ್ಕಳನ್ನು ರಕ್ಷಿಸಲು ಸಾಬೂನು ಮತ್ತು ನೀರಿನಿಂದ ಕೈಗಳನ್ನು ಚೆನ್ನಾಗಿ ತೊಳೆಯಬೇಕು. ಕುಡಿಯಲು ಶುದ್ಧವಾದ ಮತ್ತು ಸುರಕ್ಷಿತ ನೀರನ್ನೇ ಬಳಸಬೇಕು. ನಿಮ್ಮ ಮನೆಯ ಪರಿಸರವನ್ನು ಶುಚಿಯಾಗಿಟ್ಟುಕೊಳ್ಳಬೇಕು, ಕಡ್ಡಾಯವಾಗಿ ಎಲ್ಲರೂ ಶೌಚಾಲಯ ಬಳಸಬೇಕು. ಮಕ್ಕಳಿಗೂ ಸಹ ಶೌಚಾಲಯ ಬಳಸುವ ರೂಢಿ ಮಾಡಬೇಕು ಎಂದು ಹೇಳಿದರು.

ನವಜಾತ ಶಿಶುಗಳಿಗೆ 06 ತಿಂಗಳವರೆಗೆ ಕೇವಲ ತಾಯಿಯ ಎದೆ ಹಾಲು ನೀಡಬೇಕು. 06 ತಿಂಗಳ ನಂತರ ಪೂರಕ ಪೌಷ್ಠಿಕ ಆಹಾರ ನೀಡಬೇಕು. ಮಕ್ಕಳಿಗೆ ಪೋಷಕಾಂಶಗಳನ್ನು ಒಳಗೊಂಡ ಪೂರಕ ಆಹಾರ ನೀಡಬೇಕು, ಲಸಿಕೆ ಹಾಕಿಸಬೇಕು ಮತ್ತು ವಿಟಮಿನ್-ಎ ಪೂರಕ ದ್ರಾವಣ ಕೊಡಬೇಕು. ಮಕ್ಕಳಿಗೆ ಅತಿಸಾರ ಭೇದಿ ಉಂಟಾದಾಗ ಒಆರ್‌ಎಸ್ ದ್ರಾವಣ ಮತ್ತು ಝಿಂಕ್ ಮಾತ್ರೆಯನ್ನು ವಯಸ್ಸಿಗನುಗುಣವಾಗಿ ಕೊಡಬೇಕು ಒಆರ್‌ಎಸ್ ದ್ರಾವಣ ಜೀವಜಲವಾಗಿದ್ದು ತಪ್ಪದೇ ನೀಡುವಂತೆ ಕರೆ ನೀಡಿದರು. ಅತಿಸಾರ ಭೇದಿ ಉಂಟಾದರೆ ಯಾವುದೇ ಕಾರಣಕ್ಕೂ ನಿರ್ಲಕ್ಷ ಮಾಡಬಾರದು. ಹತ್ತಿರದ ಸರಕಾರಿ ಆಸ್ಪತ್ರೆ ಹಾಗೂ ಆಶಾ ಕಾರ್ಯಕರ್ತೆ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳನ್ನಾಗಲಿ, ಆರೋಗ್ಯ ಸಿಬ್ಬಂದಿಗಳನ್ನು ಭೇಟಿ ಮಾಡಲು ತಿಳಿಸಿದರು. ನಮ್ಮ ಕ್ಲಿನಿಕ್ ವೈದ್ಯಾಧಿಕಾರಿಗಳಾದ ಡಾ॥ಅಕ್ಷತಾ ಇವರು ತಾಯಿಯ ಎದೆ ಹಾಲಿನ ಮಹತ್ವದ ಬಗ್ಗೆ ಹಾಗೂ ಮಕ್ಕಳ ಆರೈಕೆ ಕುರಿತು ವಿವರವಾಗಿ ಮಾತನಾಡಿದರು. ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಪ್ರಾಥಮಿಕ ಆರೋಗ್ಯ ಸುಕರ್ಕ್ಷಾಧಿಕಾರಿ ಸವಿತಾ ಇವರು ಒಆರ್‌ಎಸ್ ದ್ರಾವಣ ತಯಾರಿಸುವ ಮತ್ತು ಉಪಯೋಗಿಸುವ ಬಗ್ಗೆ ಪ್ರಾತ್ಯಕ್ಷಿಕೆ ತೋರಿಸಿದರು.

ಕಾರ್ಯಕ್ರಮದಲ್ಲಿ ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ॥ ರಾಮಾಂಜನೇಯ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಾಧಿಕಾರಿಗಳಾದ ಡಾ॥ ಮಹೇಶ ಉಮಚಗಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ, ಜಿಲ್ಲಾ ಕಾರ್ಯಕ್ರಮ ಸಲಹೆಗಾರರಾದ ಜೈಹಿಂದ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಶುಶ್ರೂಷಣಾಧಿಕಾರಿಗಳು, ಆಶಾ/ಅಂಗನವಾಡಿ ಕಾರ್ಯಕರ್ತೆಯರು, ಗರ್ಭಿಣಿಯರು, ಬಾಣಂತಿಯರು, ತಾಯಂದಿರು ಮತ್ತು ನಮ್ಮ ಕ್ಲಿನಿಕ್/ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳು, ನಾಗರೀಕರು ಭಾಗವಹಿಸಿದ್ದರು.

## ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ: ಅಧಿಕಾರೇತರ ಸದಸ್ಯರ ನೇಮಕ



ಬೆಳಗಾವಿ, ಪತ್ರಕರ್ತರಾದ ಲೂಯಿಸ್ ಅಂಥೋಣಿ ರೋಡ್ರಿಗ್ಸ್ ಸೇರಿದಂತೆ ಒಟ್ಟು ಆರು ಜನರನ್ನು ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಗೆ ಅಧಿಕಾರೇತರ ಸದಸ್ಯರನ್ನಾಗಿ ನೇಮಿಸಿ ರಾಜ್ಯ ಅಲ್ಪಸಂಖ್ಯಾತರ ಆಯೋಗವು ಆದೇಶಿಸಿದೆ. ಬೆಳಗಾವಿ ನಗರದ ಶಾಹಿದ್ ಎಂ ಮೆಮನ್, ಮೊಹಮ್ಮದ್ ಇಕ್ಬಾಲ್ ಕಿಲ್ಲೇದಾರ್, ನಿಯಾಜ್ ಸೌದಾಗರ್, ಲೂಯಿಸ್ ಅಂಥೋಣಿ ರೋಡ್ರಿಗ್ಸ್, ಎಸ್.ಪರ್ಮಿಂದರ್ ಸಿಂಗ್ ಭಾಟಿಯಾ, ವಿನೋದ್ ಸುರೇಂದ್ರ ಅಲಿಯಾಸ್ ಕೋಮಾಲಣ್ಣ ದೊಡ್ಡನ್ನವರ ಅವರುಗಳನ್ನು ಅಧಿಕಾರೇತರ ಸದಸ್ಯರನ್ನಾಗಿ ನೇಮಕ ಮಾಡಲಾಗಿರುತ್ತದೆ.

***

### ಆರ್.ಡಿ.ಪಿ.ಆರ್ ಇಲಾಖೆ ಅಧಿಕಾರಿ-ಸಿಬ್ಬಂದಿಗಳಿಗೆ

## ಒತ್ತಡ ನಿರ್ವಹಣೆ ಕಾರ್ಯಾಗಾರ ಹಾಗೂ ಆರೋಗ್ಯ ತಪಾಸಣಾ ಶಿಬಿರ



ವಿಜಯಪುರ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ-ನೌಕರರು ನಿರಂತರವಾಗಿ ಶ್ರಮಿಸಿ, ಗ್ರಾಮೀಣ ಜನರಿಗೆ ಸೌಲಭ್ಯ ಒದಗಿಸಲು ಕಾರ್ಯನಿರ್ವಹಿಸುತ್ತಿದ್ದು, ಒತ್ತಡದ ಕಾರ್ಯನಿರ್ವಹಣೆ ಮಧ್ಯದಲ್ಲಿಯೇ ತಮ್ಮ ವೈಯಕ್ತಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಕರೆ ನೀಡಿದರು. ಜಿಲ್ಲಾ ಪಂಚಾಯಿತಿ ವಿಜಯಪುರ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಜಯಪುರ ಇವರ ಸಹಯೋಗದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ಅಧಿಕಾರಿ, ನೌಕರರ ಮತ್ತು ಸಿಬ್ಬಂದಿಗಳಿಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಆರೋಗ್ಯ ತಪಾಸಣೆ ಹಾಗೂ ಒತ್ತಡ ನಿರ್ವಹಣೆ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕರ್ತವ್ಯದ ಸಂದರ್ಭದಲ್ಲಿ ಹಲವಾರು ಸವಾಲುಗಳು ಎದುರಾಗುತ್ತವೆ. ಅವುಗಳಿಗೆ ಯಾವುದೇ ಒತ್ತಡಕ್ಕೊಳಗಾಗದೇ, ಸಮಾಧಾನವಾಗಿ ನಿಭಾಯಿಸಬೇಕು. ಸಾರ್ವಜನಿಕರಿಗೆ ವಿವಿಧ ಯೋಜನೆಗಳ ಸೌಲಭ್ಯಗಳನ್ನು ತುರ್ತಾಗಿ ಒದಗಿಸುವ ಒತ್ತಡಗಳಿರುತ್ತವೆ. ಅಂತಹ ಸಂದರ್ಭಗಳಲ್ಲಿ ತಾಳ್ಮೆಯಿಂದ ನಿಭಾಯಿಸುವ ಗುಣಗಳನ್ನು ಅಳವಡಿಸಿಕೊಳ್ಳಬೇಕು. ಅಂದಾಗ ಮಾತ್ರ ಬರುವ ಸಮಸ್ಯೆಗಳನ್ನು ಎದುರಿಸಲು ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯವಾಗುತ್ತದೆ ಎಂದು ಅವರು ಹೇಳಿದರು. ಸದಾ ಒತ್ತಡದಲ್ಲಿಯ ಕಾರ್ಯನಿರ್ವಹಿಸುವ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿ, ನೌಕರರ ಮತ್ತು ಸಿಬ್ಬಂದಿಗಳ ಆರೋಗ್ಯದ ಹಿತದೃಷ್ಟಿಯಿಂದ ವಿಶೇಷ ಕಾಳಜಿಯೊಂದಿಗೆ ಒತ್ತಡ ನಿರ್ವಹಣೆ ಕಾರ್ಯಾಗಾರ ಹಾಗೂ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಂಡಿದ್ದು, ಆರೋಗ್ಯದ ಕುರಿತು ಯಾವುದೇ ಸಮಸ್ಯೆಗಳಿದ್ದಲ್ಲಿ ಭಯ ಪಡದೇ ಮುಕ್ತವಾಗಿ ವೈದ್ಯರೊಂದಿಗೆ ಮಾತನಾಡಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಿ. ಒಂದೆಡೆ ಕಛೇರಿ ಕೆಲಸ, ಇನ್ನೊಂದು ಕಡೆ ಮನೆ ಕೆಲಸ, ಮಕ್ಕಳು, ಕುಟುಂಬದ ಹಿರಿಯರ ಬಗ್ಗೆ ಗಮನ ಹರಿಸುತ್ತಾ ನಮ್ಮ ಆರೋಗ್ಯದ ಕಡೆಗೆ ಗಮನಹರಿಸಿರುವುದಿಲ್ಲ. ಇವೆಲ್ಲವುದರ ಜೊತೆಗೆ ಕಛೇರಿ ಕೆಲಸ ನಿಭಾಯಿಸಬೇಕು. ಮಲ್ಟಿಟಾಸ್ಕ್ (ಒಣಟಣುಣಚಿಞ) ಮಾಡಬೇಕು ಎಂದರೆ ಮನಸ್ಸು, ದೇಹ ಎರಡೂ ಸದೃಢವಾಗಿರಬೇಕು. ಆದ್ದರಿಂದ ಎಲ್ಲರೂ ತಮ್ಮ ಆರೋಗ್ಯದ ಕಡೆ ಗಮನ ಹರಿಸುವಂತೆ ಅವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿಗಳಾದ ಡಾ.ವಿಜಯಕುಮಾರ ಆಜೂರ, ಸಹಾಯಕ ಕಾರ್ಯದರ್ಶಿಗಳಾದ ಅನುಸೂಯಾ ಚಲವಾದಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ॥ ಸಂಪತ್ ಗುಣಾರಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳಾದ ಡಾ॥ ಅರ್ಚನಾ ಕುಲಕರ್ಣಿ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳಾದ ಡಾ॥ ಅಪ್ಪಾಸಾಹೇಬ ಇನಾಮದಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಅಧ್ಯಕ್ಷರಾದ ಸಿ. ಜಿ. ಪಾರೆ, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ತಾಲೂಕು ಪಂಚಾಯತಿ, ಗ್ರಾಮ ಪಂಚಾಯತಿ ಮಟ್ಟದ ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳುಉಪಸ್ಥಿತರಿದ್ದರು.

## ನೂತನ ಜಿಲ್ಲಾಧಿಕಾರಿ ಸಂಗಪ್ಪ ಎಂ. ಅಧಿಕಾರ ಸ್ವೀಕಾರ

ಬಾಗಲಕೋಟ : : ಬಾಗಲಕೋಟೆ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಸಂಗಪ್ಪ ಎಂ. ಬುಧವಾರ ಅಧಿಕಾರ ಸ್ವೀಕರಿಸಿದರು. ನಿಕಟಪೂರ್ವ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರು ನೂತನ ಜಿಲ್ಲಾಧಿಕಾರಿಗಳಿಗೆ ಪುಷ್ಪ ನೀಡಿ ಸ್ವಾಗತಿಸುವ ಮೂಲಕ ಅಧಿಕಾರವನ್ನು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶೀಧರ ಕುರೇರ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ ಸೇರಿದಂತೆ ಆಯಾ ತಾಲೂಕಿನ ತಹಶೀಲ್ದಾರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಪುಷ್ಪ ಅರ್ಪಿಸಿ ನೂತನ ಜಿಲ್ಲಾಧಿಕಾರಿಯನ್ನು ಸ್ವಾಗತಿಸಿದರು.

ನೂತನ ಜಿಲ್ಲಾಧಿಕಾರಿಗಳು ಬಾಗಲಕೋಟೆ ಜಿಲ್ಲೆ ಬೀಳಗಿ ತಾಲೂಕಿನವರಾಗಿದ್ದು, ಪ್ರಾಥಮಿಕ ಶಿಕ್ಷಣವನ್ನು ಬೀಳಗಿ, ಮುಧೋಳ, ಬಾಗಲಕೋಟೆಯಲ್ಲಿ ಮುಗಿಸಿದ್ದಾರೆ. ಮಾಧ್ಯಮಿಕ ಹಾಗೂ ಕಾಲೇಜು ಶಿಕ್ಷಣವನ್ನು ಬಾಗಲಕೋಟೆ ಬಸವೇಶ್ವರ ಮಹಾವಿದ್ಯಾಲಯದಲ್ಲಿ ಪಡೆದು ಎಂ.ಎಸ್.ಸಿ ಮೈಕ್ರೋ ಬಯಾಲಜಿಯನ್ನು ಬೆಂಗಳೂರಿನ ಜಿ.ಕೆ.ವಿ.ಕೆ ಮಹಾವಿದ್ಯಾಲಯದಲ್ಲಿ ಮುಗಿಸಿದ್ದಾರೆ.

2007ರಲ್ಲಿ ವಿಶೇಷ ಭೂಸ್ವಾಧೀನ ಅಧಿಕಾರಿಯಾಗಿ (ಎಸ್.ಎಲ್.ಓ) ಮುನಿರಾಬಾದ್, ಮೈಬೂನ ನಗರ ರೈಲ್ವೆ ಯೋಜನೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ. 2009ರಲ್ಲಿ ಗುಲಬರ್ಗಾದ ಉಪವಿಭಾಗಾಧಿಕಾರಿ, ಬೆಂಗಳೂರಿನ ಕೆಐಡಿಬಿ ವಿಶೇಷ ಭೂಸ್ವಾಧೀನ ಅಧಿಕಾರಿಯಾಗಿ



ಕಾರ್ಯನಿರ್ವಹಿಸಿ, ನಂತರ ಬಿಬಿಎಂಪಿ ಚುನಾವಣಾ ವಿಭಾಗದ ಉಪವಿಭಾಗ ಅಧಿಕಾರಿಯಾಗಿ, ಬೆಂಗಳೂರಿನ ಆರ್‌ಟಿಐ ಕಾರ್ಯದರ್ಶಿಗಳಾಗಿ ಕಾರ್ಯನಿರ್ವಹಿಸಿದ್ದಾರೆ. ಕೋಲ್ಹಾರ ಜಿಲ್ಲೆಯ ಅಪರ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸಿ, ನಂತರ 2014ರಲ್ಲಿ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಾಗಿ ಸಹ ಕೆಲಸ ನಿರ್ವಹಿಸಿದ್ದಾರೆ. ಬೆಂಗಳೂರಿನ ಬುಡಕಟ್ಟು ಕಲ್ಯಾಣ ಇಲಾಖೆಯ ನಿರ್ದೇಶಕರಾಗಿ, 2016ರಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಹಾಗೂ ಬೆಂಗಳೂರು ನಗರ ಹೆಚ್ಚುವರಿ (ಪ್ರಭಾರ) ಜಿಲ್ಲಾಧಿಕಾರಿಗಳಾಗಿ ಕಾರ್ಯನಿರ್ವಹಿಸಿದ್ದಾರೆ. ನಂತರ ಕಿಯೋನಿಕ್ಸ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾಗಿ, ಸುವರ್ಣ ಆರೋಗ್ಯ ಟ್ರಸ್ಟ್‌ನ ಕಾರ್ಯನಿರ್ವಾಹಕ ನಿರ್ದೇಶಕರಾಗಿ ಕಾರ್ಯನಿರ್ವಹಿಸಿ, ಸದ್ಯ ಬಾಗಲಕೋಟೆ ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

## ಜೂ.20 ಮತ್ತು 21 ರಂದು ಅಂಚೆ ಕಚೇರಿ ವ್ಯವಹಾರ ಸ್ಥಗಿತ

ಕೊಪ್ಪಳ : ಭಾರತೀಯ ಅಂಚೆ ಇಲಾಖೆಯ ಆದೇಶದಂತೆ ಜೂನ್ 23 ರಂದು ಕೊಪ್ಪಳ ಪ್ರಧಾನ ಅಂಚೆ ಕಚೇರಿಯ ಮತ್ತು ಅದರ ವ್ಯಾಪ್ತಿಯ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಹೊಸ ತಂತ್ರಾಂಶ(ಂಕಖಿ 2.0) ಅಳವಡಿಕೆ ಜಾರಿಯಾಗುತ್ತಿರುವ ಹಿನ್ನೆಲೆಯಲ್ಲಿ ಪೂರ್ವ ಸಿದ್ದತೆಗಾಗಿ ಜೂ.20 ಮತ್ತು 21 ರಂದು ಕೊಪ್ಪಳ ಪ್ರಧಾನ ಅಂಚೆ ಕಚೇರಿ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಎಲ್ಲಾ ರೀತಿಯ ವ್ಯವಹಾರ, ವಹಿವಾಟುಗಳು ಸ್ಥಗಿತಗೊಳ್ಳಲಿವೆ.

ಹೊಸ ತಂತ್ರಾಂಶ ಜಾರಿಯಾಗುತ್ತಿರುವ ಹಿನ್ನೆಲೆಯಲ್ಲಿ ಪೂರ್ವ ಸಿದ್ದತೆಗಾಗಿ ಮೇಲೆ ತಿಳಿಸಿದ ದಿನಾಂಕಗಳಂದು ಕೊಪ್ಪಳ ಜಿಲ್ಲೆಯ ಅಡಿಯಲ್ಲಿ ಬರುವ ಎಲ್ಲಾ ಅಂಚೆ ಕಚೇರಿಗಳಲ್ಲಿ ಕಾರ್ಯನಿರ್ವಹಣೆ ಸ್ಥಗಿತಗೊಳ್ಳಲಿದ್ದು, ಮೇಲೆ ತಿಳಿಸಿದ ಎರಡು ದಿನಗಳಲ್ಲಿ ಯಾವುದೇ ವಹಿವಾಟುಗಳು ಇರುವುದಿಲ್ಲ. ಜೂನ್ 23 ರಿಂದ ಕೊಪ್ಪಳ ಜಿಲ್ಲೆಯ ಎಲ್ಲಾ ಅಂಚೆ ಕಚೇರಿಗಳಲ್ಲಿ ಸೇವೆ ಲಭ್ಯವಿರುತ್ತದೆ. ಗ್ರಾಹಕರು ಸಹಕರಿಸಬೇಕೆಂದು ಕೊಪ್ಪಳ ಅಂಚೆ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ

ಕೊಪ್ಪಳ : ಕೊಪ್ಪಳದ ಭಾಗ್ಯನಗರ ನಿವಾಸಿಯಾದ ಬಸವರಾಜ ಸಿದ್ದನಗೌಡ ಬುಡ್ಡನಗೌಡ್ರು ಎಂಬ 50 ವರ್ಷದ ವ್ಯಕ್ತಿಯು 2024 ರ ಫೆಬ್ರವರಿ 21 ರಿಂದ ಕಾನೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 41/2024 ಕಲಂ: ಮನುಷ್ಯ ಕಾಣೆ ಅಡಿ ಪ್ರಕರಣ ದಾಖಲಾಗಿದೆ.

ವ್ಯಕ್ತಿಯ ಚಹರೆ: ವ್ಯಕ್ತಿಯು 5.2 ಅಡಿ ಎತ್ತರವಿದ್ದು, ಸಾದಾಕಪ್ಪು ಮೈಬಣ್ಣ, ತೆಳುವಾದ ಮೈಕಟ್ಟು, ಉದ್ದಮೂಗು, ಕೋಲುಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ನೀಲಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಲುಂಗಿ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕೊಪ್ಪಳ ಕಂಟ್ರೋಲ್ ರೂಂ.08539-230100, 230222, ನಗರ ಠಾಣೆ ಪಿಎಸ್‌ಐ: 9480803745, ನಗರ ಠಾಣೆ: 08539-220333 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಕೊಪ್ಪಳ ನಗರ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

## ಜುಲೈ 12 ರಂದು ರಾಷ್ಟ್ರೀಯ ಲೋಕ ಅದಾಲತ್

# ರಾಜೀ ಸಂಧಾನದ ಮೂಲಕ ತ್ವರಿತ ಇತ್ಯರ್ಥಕ್ಕೆ ಅವಕಾಶ



ಗದಗ : ಜಿಲ್ಲೆಯಲ್ಲಿ ಜುಲೈ 12 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದ್ದು ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಶ್ರೀಮತಿ ನಾಗವೇಣಿ ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಬುಧವಾರ ( ಜೂನ್ 18 ) ರಾಷ್ಟ್ರೀಯ ಲೋಕ ಅದಾಲತ್ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮತ್ತು ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು ಹಾಗೂ ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ ಇಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದರು.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚಿನಂತೆ ಒಟ್ಟು 15 ಬೆಂಚಗಳನ್ನು ರಚಿಸಿದ್ದು ಗದಗ ಜಿಲ್ಲೆಯಲ್ಲಿ ಒಟ್ಟು 20411 ವಿವಿಧ ಚಾಲ್ತಿ ಪ್ರಕರಣಗಳಿದ್ದು ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 2280 ಪ್ರಕರಣಗಳನ್ನು ಗುರುತಿಸಿದ್ದು ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟ–ರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿರುತ್ತದೆ ಎಂದರು.

ಪಕ್ಷಗಾರರು ನ್ಯಾಯಾಲಯಗಳಲ್ಲಿರುವ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ. ಕಳೆದ ಮಾರ್ಚ್–2025 ರಂದು ಜರುಗಿದ ಲೋಕ ಅದಾಲತ್‌ನಲ್ಲಿ 3749 ಚಾಲ್ತಿ ಪ್ರಕರಣಗಳನ್ನು ಹಾಗೂ 29199 ವ್ಯಾಜ್ಯಪೂರ್ವ ಪ್ರಕರಣಗಳನ್ನು ಸೇರಿ ಒಟ್ಟು 32948 ಪ್ರಕರಣಗಳ್ನು ರಾಜೀ ಮೂಲಕ ಇತ್ಯರ್ಥಪಡಿಸಿದೆ. ಇದರಲ್ಲಿ ವಿಶೇಷವಾಗಿ 09 ಕೌಟುಂಬಿಕ ಪ್ರಕರಣಗಳನ್ನು ಪುನಃ ಒಂದು ಗೂಡಿಸಿ ಕಳುಹಿಸಲಾಗಿದೆ ಎಂದರು.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು, ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾ–ರಿಗಳು, ಇಲಾಖೆಗಳವರು ಜುಲೈ 12 ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಶ್ರೀಮತಿ ನಾಗವೇಣಿ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ ಮಾತನಾಡಿ ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜೀ ಮಾಡಿಕೊಳ್ಳಲು ಸೂಕ್ತ ಮಾರ್ಗದರ್ಶನ ಮಾಡಲಾಗುವುದು. ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯದ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ ಎಂದರು.

## ಕಾರ್ಯನಿರ್ವಾಹಕ ಅಧಿಕಾರಿ ಶಾಲೆಗೆ ಭೇಟಿ



ಗದಗ : ಶಿರಹಟ್ಟಿ ತಾಲ್ಲೂಕಿನ ಛಬ್ಬಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಶಾಲೆಗಳಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ಭೇಟಿ ನೀಡಿದರು. ಶಾಲೆಯೊಂದರಲ್ಲಿ ವಿದ್ಯಾರ್ಥಿಗಳೊಂದಿಗೆ ಮಧ್ಯಾಹ್ನದ ಬಿಸಿಯೂಟ ಸವಿದರು. ಛಬ್ಬಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಅವರು ಶಾಲಾ ಮಕ್ಕಳ ಜೊತೆಗೆ ಊಟ ಮಾಡಿದರು. ಇದೇ ವೇಳೆ ಆಹಾರದ ಗುಣಮಟ್ಟ, . ಆಹಾರ ದಾನ್ಯಗಳ ಗುಣಮಟ್ಟ, ಬಿಸಿ ಊಟದ ಕೊಠಡಿ, ಖಆಒಅ ಖಾತೆಗಳ ವಿವರ ಇತ್ಯಾದಿ ಪರಿಶೀಲನೆ ನಡೆಸಿದರು ನಂತರ ಮಕ್ಕಳೊಂದಿಗೆ ಕೆಲಕಾಲ ಕಳೆದರು. ಈ ವೇಳೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಾಲಾ ಶಿಕ್ಷಕರು ಗ್ರಾಮ ಪಂಚಾಯಿತಿ ಸಿಬ್ಬಂದಿ ಇದ್ದರು.

## ಬಸ್ ತಂಗುದಾಣ ನಿರ್ಮಾಣ ಕಾಮಗಾರಿಗೆ ಚಾಲನೆ



ರಾಯಬಾಗ: ಪ್ರಯಾಣಿಕರ ಅನುಕೂಲಕ್ಕಾಗಿ ಬೇಡಿಕೆ ತಕ್ಕಂತೆ ತಂಗುದಾಣವನ್ನು ನಿರ್ಮಿಸಲಾಗುತ್ತಿದೆ ಎಂದು ಶಾಸಕ ಡಿ.ಎಮ್.ಐಹೊಳೆಯವರು ಹೇಳಿದರು.

ಬುಧವಾರ ಪಟ್ಟಣದ ಶ್ರೀನಗರ ಹಾಗೂ ತಾಲೂಕಿನ ಮೇಖಳಿ ಗ್ರಾಮದ ಆದರ್ಶ ವಿದ್ಯಾಲಯ ಹತ್ತಿರ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಾದ ತಲಾ 5 ಲಕ್ಷ ರೂ. ಅನುದಾನದಲ್ಲಿ ಬಸ್ ತಂಗುದಾಣ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಗುತ್ತಿಗೆದಾರ ಗುಣಮಟ್ಟದಿಂದ ತಂಗುದಾಣ ನಿರ್ಮಾಣ ಮಾಡಬೇಕು ಎಂದು ಸೂಚಿಸಿದರು.

ಜಿ.ಪಂ.ಎಇಇ ಎಸ್.ಎಸ್.ಹೊಸಮನಿ, ಪಿ.ಎ.ನಾಯಿಕ, ಸಂಜು ಒಡೆಯರ, ಸದಾಶಿವ ಘೊರ್ಪಡೆ, ಸಂಗಣ್ಣ ದತ್ತವಾಡೆ, ಚಿದಾನಂದ ಚೌಗಲಾ, ಪುಂಡಲೀಕ ಪೂಜಾರಿ, ವಸಂತ ಲಬ್ಬೆ, ಬಸು ನಾಯಿಕ, ಸೋಮು ಭಜಂತ್ರಿ, ಸುನಿಲ ಕಿಚಡೆ, ಸದಾನಂದ ಹಳಿಂಗಳಿ, ನಾರಾಯಣ ಮೇತ್ರಿ, ಪಾಪು ಶೇಲಾರ, ಅಶೊಕ ಹೊಸಮನಿ, ಕೆಂಚಪ್ಪ ಧರ್ಮಟ್ಟಿ, ಸುರೇಶ ಮಾಳಿ, ಪರಶುರಾಮ ಪುಜೇರಿ, ಸುಭಾಸ ಕಾಂಬಳೆ, ರಿತೇಶ ಅವಳೆ, ಮಹಾದೇವ ಹೊಸಮನಿ, ವಿಠಲ ಪೂಜಾರಿ, ಮುರಸಿದ್ದ ನಾಯ್ಕು, ನೇಹಲ ಮಾಳಿ ಸೇರಿ ಅನೇಕರು ಇದ್ದರು.

****

# ಎರಡು ದಿನಗಳ ಸಂಯೋಜಿತ ಪದವಿಗಳ ಕುರಿತು ಕಾರ್ಯಾಗಾರ



ಮುದ್ದೇಬಿಹಾಳ; ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಪದವಿ ಶಿಕ್ಷಣದಿಂದ ಸರಕಾರಿ ಹುದ್ದೆಗಳನ್ನು ಪಡೆಯಲು ಸಾಧ್ಯವಿಲ್ಲ ಹೀಗಾಗಿ ನಮ್ಮ ಭಾಗದ ವಿದ್ಯಾರ್ಥಿಗಳಿಗೆ ಪದವಿ ಶಿಕ್ಷಣದೊಂದಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗೆ ನುರಿತ ಕೆಎಎಸ್ ಐಎಎಸ್ ತರಬೇತುದಾರರಿಂದ ಸಂಪೂರ್ಣ ಮಾಹಿತಿಯನ್ನು ಒದಗಿಸಲು ಎರಡು ದಿನದ ಉಚಿತ ಕಾರ್ಯಾಗಾರವನ್ನು ಅಭ್ಯುದಯ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಅಭ್ಯುದಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಶಿಕ್ಷಣ ಪ್ರೇಮಿ ಮಲ್ಲಿಕಾರ್ಜುನ ಮದರಿ ಹೇಳಿದರು ಮಂಗಳವಾರ ಹೂಳ್ಕರ ಬಡಾವಣೆಯ ಅಭ್ಯುದಯ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಜೂ 19 ಹಾಗೂ20 ಎರಡು ದಿನಗಳ ಸಂಯೋಜಿತ ಪದವಿಗಳ ಕು–ರಿತು ಕಾರ್ಯಾಗಾರವನ್ನು ಧಾರವಾಡ ವಿಶ್ವವಿದ್ಯಾಲಯದ ನಿವೃತ್ತ ಕುಲಪತಿ ಡಾ.ಹೆಚ್ ಬಿ ವಾಲಿಕಾರ ಅವರ ಮಾರ್ಗದರ್ಶನದಲ್ಲಿ ನಡೆಯಲಿದೆ ಹೆಚ್ಚಿನ ಸಂಖ್ಯೆಯಲ್ಲಿ ಪದವಿ ಹಾಗೂ ಪಿಯುಸಿ ವಿದ್ಯಾರ್ಥಿಗಳು ಭಾಗವಹಿಸಿಬೇಕು ಎಂದು ಮನವಿ ಮಾಡಿಕೊಂಡರು ಎರಡು ದಿನದ ಕಾರ್ಯಾಗಾರ ಬೆಳಗ್ಗೆ 10:30 ರಿಂದ ಸಂಜೆ 5:30 ವರಗೆ ನಡೆಯಲಿದೆ.


ನಮ್ಮ ಭಾಗದ ವಿದ್ಯಾರ್ಥಿಗಳು ಧಾರವಾಡ ಬೆಂಗಳೂರುಗೆ ಹೋಗಿ ತರಬೇತಿಯನ್ನು ಪಡೆಯಲು ಕಷ್ಟಸಾಧ್ಯ ಹೀಗಾಗಿ ಈ ವರ್ಷದಿಂದ ನಮ್ಮ ಸಂಸ್ಥೆಯಲ್ಲಿ ಪದವಿ ವ್ಯಾಸಂಗದ ಜೊತೆಗೆ ಆನ್ಲೈನ್ ಸ್ಮಾರ್ಟ್ ಕ್ಲಾಸ್ ಗಳ ಮೂಲಕ ಪ್ರತಿನಿತ್ಯ ನಿಗದಿತ ಸಮಯದಲ್ಲಿ ಕ್ಲಾಸ್ ಗಳು ನುರಿತ ಶಿಕ್ಷಣ ತಜ್ಞರು ಹೇಳುತ್ತಾರೆ.

ವಿಶೇಷ ತರಬೇತಿ; ರಾಜ್ಯ ಮತ್ತು ಕೇಂದ್ರ ಸರಕಾರದ ಹುದ್ದೆಗಳಾದ ಕೆಎಎಸ್ ,ಐಎಎಸ್,ಎಸ್ ಡಿಎ ,ಎಫ್ ಡಿ ಎ, ಪೊಲೀಸ್, ಪಿಎಸ್ಐ, ಬ್ಯಾಕಿಂಗ್, ಆರ್ ಆರ್ ಬಿ, ಎಸ್ಎಸ್ಸಿ ,ಐಐಟಿ ಜಾಮ್ ಸೇ–ರಿದಂತೆ ಇತರೆ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತದೆ.

ಪತ್ರಿಕಾಗೋಷ್ಠಿಯಲ್ಲಿ ಲೆಕ್ಕ ವ್ಯವಸ್ಥಾಪಕ ಬಸವರಾಜ ಬಿಜ್ಜೂರ, ಆಡಳಿತ ಅಧಿಕಾರಿ ಬಿ ಜಿ ಬಿರಾದಾರ, ಪ್ರಾಂಶುಪಾಲ ಆರ್ ಎಸ್ ಜಡಗಿ, ಎಂ ಎಂ ಧನ್ನೂರ, ಪ್ರಶಾಂತ ಬಿರಾದಾರ, ಎಸ್ ರಂಗಸ್ವಾಮಿ, ವಿರೇಶ ಹೂಲಿಕೇರಿ, ರವಿ ಚಲವಾದಿ, ಬಸವರಾಜ ಗೂಡಲಮನಿ ಭಾಗವಹಿಸಿದ್ದರು.

****

# ಯೋಗದಿಂದ ಆರೋಗ್ಯ




ಜೂನ್ 21 ಅವಿಸ್ಮರಣೀಯ ದಿನ. ಅಂದು ಇಡೀ ಜಗತ್ತು ಯೋಗಮಯವಾಗುತ್ತದೆ. ವಿಶ್ವಸಂಸ್ಥೆಯು 11.12.2014 ರಂದು ನಡೆದ ಸಾಮಾನ್ಯ ಸಭೆಯಲ್ಲಿ 'ಅಂತರಾಷ್ಟ್ರಿಯ ಯೋಗ ದಿನ'ವನ್ನು ಜೂನ್ 21 ರಂದು ಅಚರಿಸಬೇಕೆಂದು ತೀರ್ಮಾನಿಸಿತು. ಅಂದಿನಿಂದ ಪ್ರತಿವರ್ಷ ಜೂನ್ 21 ರಂದು ಜಾಗತಿಕ ಮಟ್ಟದಲ್ಲಿ ಅಂತರಾಷ್ಟ್ರಿಯ ಯೋಗದಿನವೆಂದು ಆಚರಿಸಲಾಗುತ್ತದೆ. ಈ ವರ್ಷದ ಧ್ಯೇಯ "ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ" ಆಗಿದ್ದು, ಆಂಧ್ರಪ್ರದೇಶದ ವಿಶಾಖಾಪಟ್ಟಣದಲ್ಲಿ ಮಾನ್ಯ ಪ್ರಧಾನ ಮಂತ್ರಿ ಭಾಗಿಯಾಗಲಿದ್ದಾರೆ. ಜೂನ್ 21 'ಗ್ರೀಷ್ಮ ಸಂಕ್ರಾಂತಿ'ಯ ದಿನ, ಸೂರ್ಯ ಉತ್ತರ ದಿಕ್ಕಿನಿಂದ ಪೂರ್ವ ದಿಕ್ಕಿಗೆ ಚಲಿಸುವ ಸಮಯ. ಈ ಕಾರ್ಯಸಾಧನೆಯಲ್ಲಿ ಭಾರತದ ಪ್ರಧಾನ ಮಂತ್ರಿಗಳಾದ ಸನ್ಮಾನ್ಯ ನರೇಂದ್ರ ಮೋದಿಯವರ ಪ್ರೇರಣೆ ಬಹಳ ಮುಖ್ಯವಾದುದು. 175 ರಾಷ್ಟ್ರಗಳು ಯೋಗ ದಿನಕ್ಕೆ ತಮ್ಮ ಸಹಮತಿಯನ್ನು ಸೂಚಿಸಿವೆ. ಯೋಗ ದಿನಾಚರಣೆಗೆ ಕೇಂದ್ರ ಸರ್ಕಾರ, ಆಯುಷ್ ಮಂತ್ರಾಲಯ, ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ಮತ್ತು ಅನೇಕ ಸಂಘ ಸಂಸ್ಥೆಗಳು ಕೈ ಜೋಡಿಸಿವೆ. ಭಾರತ ತಪೋಭೂಮಿ, ಯೋಗಿಗಳ ತಾಣ, ಆಧ್ಯಾತ್ಮದಲ್ಲಿ ವಿಶ್ವದ ದಾ–ರಿದೀಪವೆಂದು ಪ್ರಸಿದ್ಧವಾಗಿದೆ.

'ಯೋಗ' ಎನ್ನುವ ಶಬ್ದದ ಉಗಮ ಸಂಸ್ಕೃತದ "ಯುಜ್"ನಿಂದ ಆಗಿದೆ. "ಯುಜ್" ಎಂದರೆ ಜೋಡಿಸು, ಕೂಡಿಸು, ಸಂಬಂಧಿಸು ಎಂದರ್ಥ. ಪತಂಜಲಿ ಮಹರ್ಷಿಗಳ ಪ್ರಕಾರ 'ಯೋಗಃಚಿತ್ತವೃತ್ತಿ ನಿರೋಧಃ' ಯೋಗವೆಂದರೆ ಮನಸ್ಸಿನ ಚಂಚಲ ವೃತ್ತಿಗಳನ್ನು ನಿರೋಧಿಸುವುದು." ವಸಿಷ್ಠ ಮಹರ್ಷಿಗಳು "ಮನ: ಪ್ರಶಮನೋಪಾಯಃ ಯೋಗಃ ಇತಿ ಅಭಿಧೀಯತೆ" ಮನಸ್ಸನ್ನು ಪ್ರಶಾಂತಗೊಳಿಸುವ ಸುಂದರ ಉಪಾಯವೇ ಯೋಗವೆಂದು ಹೇಳಿದ್ದಾರೆ. "ಯೋಗಃ ಸಮತ್ವಂ ಉಚ್ಚತೇ' ಯೋಗವೆಂದರೆ ಕಾರ್ಯವ್ಯವಹಾರದಲ್ಲಿ ಸಮಭಾವ, ಸಮಚಿತ್ತವಾಗಿರುವುದು. ಸ್ತುತಿ–ನಿಂದನೆ, ಮಾನ–ಅಪಮಾನ, ಸುಖ–ದುಃಖ, ನೋವು–ನಲಿವು ಇತರೆ ಪರಿಸ್ಥಿತಿಗಳಲ್ಲಿ ಸಮಭಾವವನ್ನು ಹೊಂದುವುದೇ ಯೋಗವೆಂದು ಭಗವದ್ಗೀತೆ ಹೇಳುತ್ತದೆ.

ಯೋಗವೆಂದರೆ ಕೆಲವರು ಪ್ರಾಣಾಯಾಮ ಅಥವಾ ಯೋಗಾಸನವೆಂದು ತಿಳಿದಿದ್ದಾರೆ. ಆದರೆ ಯೋಗವು ಆತ್ಮನ ಚಂಚಲ ಮನಸ್ಸನ್ನು ಏಕಾಗ್ರಗೊಳಿಸಬಲ್ಲ ಮನೋವ್ಯಾಯಾಮವಾಗಿದೆ. ಅದೇನೇ ಇರಲಿ ಯೋಗವೆಂದರೆ ಸರ್ವ ಮನೋವೃತ್ತಿಗಳ ಮೇಲೆ ಪ್ರಭುತ್ವವನ್ನು ಸ್ಥಾಪಿಸುವುದು.

ವರ್ತಮಾನ ಸಮಯದಲ್ಲಿ ಯೋಗದಲ್ಲಿ ಹಠಯೋಗ, ಸನ್ಯಾಸಯೋಗ, ಭಕ್ತಿಯೋಗ, ಕರ್ಮಯೋಗ, ಜ್ಞಾನಯೋಗ, ರಾಜಯೋಗ, ಶುಭಯೋಗ, ಲಾಭಯೋಗ, ಯೋಗಾ–ಯೋಗ ಇತ್ಯಾದಿ ಅನೇಕ ಪ್ರಕಾರಗಳು ಇವೆ.

ಎಲ್ಲಾ ವಿಜ್ಞಾನಗಳಿಗಿಂತ ಭಿನ್ನವಾದ ಇನ್ನೊಂದು ವಿಜ್ಞಾನವಿದೆ. ಅದುವೇ ಯೋಗವಿಜ್ಞಾನ. ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಇದನ್ನು ಪ್ರಾಯೋಗಿಕವಾಗಿ ಕಲಿಸಲಾಗುತ್ತದೆ. ಈ ಸಂಸ್ಥೆಯ ಅಂಗಸಂಸ್ಥೆಯಾದ 'ರಾಜಯೋಗ ಶಿಕ್ಷಣ ಮತ್ತು ಸಂಶೋಧನೆ ಪ್ರತಿಷ್ಠಾನ'ವು ಯೋಗ–ವಿಜ್ಞಾನವನ್ನು ಪ್ರಚಾರ ಮತ್ತು ಪ್ರಸಾರ ಮಾಡುವ ಕಾರ್ಯದಲ್ಲಿ ನಿರತವಾಗಿದೆ. ಇಲ್ಲಿ ಧರ್ಮ, ಜಾತಿ, ಮತ, ವಯಸ್ಸು. ವರ್ಣಭೇದವಿಲ್ಲದೆ ಸರ್ವರಿಗೂ ಯೋಗ




ಶಿಕ್ಷಣವನ್ನು ಉಚಿತವಾಗಿ ಕಲಿಸಲಾಗುತ್ತದೆ. ಈ ಯೋಗವಿಜ್ಞಾನವು ಮನಸ್ಸು, ಬುದ್ಧಿ, ಸಂಸ್ಕಾರ, ಸ್ವಭಾವ, ವ್ಯವಹಾರ ಚಾರಿತ್ರ್ಯ ಇತ್ಯಾದಿಗಳಿಗೆ ಸಂಬಂಧಿಸಿದೆ. ಇಲ್ಲಿ ಆತ್ಮ ಮತ್ತು ಪರಮಾತ್ಮನ ನಡುವೆ ಸರ್ವಪ್ರಕಾರದ ಸಂಬಂಧವು ಹೇಗೆ ಜೋಡಿಸಬೇಕು ಎಂಬುದನ್ನು ತಿಳಿಸಲಾಗುತ್ತದೆ. ಈ ಸಂಬಂಧಗಳಲ್ಲಿ ತಂದೆ, ಶಿಕ್ಷಕ, ಗುರುವಿನ ಸಂಬಂಧ ಅತಿ ಮುಖ್ಯ. ಆತ್ಮನಾಗಿ ಪರಮಾತ್ಮನ ಜೊತೆ ಮನನ, ಚಿಂತನೆ, ಮಿಲನ ಮಾಡಿದಾಗ ಯೋಗಿಯು ಮಗ್ನಾವಸ್ಥೆಯನ್ನು ತಲುಪುತ್ತಾನೆ. ಸ್ವಯಂ ಪರಮಾತ್ಮನೇ ಕಲಿಸುವ ರಾಜಯೋಗವು ಅತ್ಯಂತ ಸರಳ ಹಾಗೂ ಸಹಜ. ಇದರಲ್ಲಿ ಮಾನವನ ಪ್ರವೃತ್ತಿಗಳ ಪರಿವರ್ತನೆ ಮತ್ತು ಶುದ್ಧೀಕರಣವಾಗಿ ಅವನ ಆಹಾರ–ವ್ಯವಹಾರಗಳು ಸುಧಾರಣೆಗೊಂಡು, ಸಂಸ್ಕಾರಗಳು ಸತೋಪ್ರಧಾನವಾಗುತ್ತವೆ. ಹಾಗಾಗಿ ಸಾಮಾನ್ಯ ಮಾನವನು ದೇವ–ಮಾನವನಾಗುತ್ತಾನೆ. ಯೋಗವೆಂಬ ಈ ವಿಜ್ಞಾನವು ಮನುಷ್ಯನ ಉದ್ವೇಗಗಳನ್ನು ನಿಯಂತ್ರಿಸುತ್ತದೆ. ಅವನ ವಿಚಾರಗಳನ್ನು ವ್ಯವಸ್ಥಿತ ಹಾಗೂ ಸರಳಿತಗೊಳಿಸುತ್ತದೆ. ಈ ವಿಜ್ಞಾನದಿಂದ ವ್ಯಕ್ತಿಯ ಮಾನಸಿಕ ಏಕಾಗ್ರತೆಯ ಶಕ್ತಿಯು ಹೆಚ್ಚುತ್ತದೆ. ಅಪಾರ ಶಾಂತಿಯ ಅನುಭವ ಆಗುತ್ತದೆ. ಪರಮಾತ್ಮನ ದಿವ್ಯಗುಣಗಳಾದ ಶಾಂತಿ, ಪವಿತ್ರತೆ, ಆನಂದ, ದಯೆ, ಸುಖ, ಪ್ರೇಮ ಇತರೆ ದಿವ್ಯಗುಣಗಳ ಅನುಭವ ಆಗುತ್ತದೆ. ಅವನ ವರ್ತನೆಯಲ್ಲಿ ಪರಿವರ್ತನೆಯಾಗಿ ಮನಸ್ತಾಪ, ಈರ್ಷೆ–ದ್ವೇಷ, ಕ್ರೋಧ ಇತರೆ ವಿಕಾರಿಗುಣಗಳು ದೂರವಾಗುತ್ತವೆ. ಅವನ ಮನಸ್ಸಿನಲ್ಲಿ ಉದ್ವೇಗಗಳ ಜ್ವಾಲಾಮುಖಿ ಸ್ಫೋಟಗೊಳ್ಳುವುದಿಲ್ಲ. ಮಾನಸಿಕ ಚಿಂತೆ ಇರುವುದಿಲ್ಲ. ಏಕರಸ ಸ್ಥಿತಿ ಅಥವಾ ಆನಂದದ ಸ್ಥಿತಿ ಅವನದಾಗಿರುತ್ತದೆ.

### ಆರೋಗ್ಯವೆ ಭಾಗ್ಯ

ನಿಮ್ಮ ಮನಸ್ಸು ಹೇಗೆ ಯೋಚಿಸುತ್ತದೆಯೋ ಹಾಗೆಯೇ ತಾವು ತಯಾರಾಗುವಿರಿ. ಅದಕ್ಕೋಸ್ಕರ ಯಾವಾಗಲೂ ತಮ್ಮನ್ನು ತಾವು ರೋಗಿಗಳು ಎಂದು ತಿಳಿದುಕೊಳ್ಳಬೇಡಿ. ನಾನು ಸದಾ ಸ್ವಸ್ಥನಾಗಿದ್ದೇನೆ ಎಂದು ತಿಳಿದುಕೊಳ್ಳಿರಿ, ನಿಮ್ಮ ಕಷ್ಟಗಳು ಸಂಪೂರ್ಣವಾಗಿ ದೂರವಾಗುವವು. ನವಜೀವನವು ನಿಮಗೆ ಖಂಡಿತ ಸಿಗುವುದು. ದು:ಖವು ಬಿರುಗಾಳಿಯ ಸಮಾನ ಬಂದರೂ ಸುಖಸಾಗರ ಭಗವಂತನು ನಿಮ್ಮ ಜೊತೆಯಲ್ಲಿ ಸದಾ ಇದ್ದಾನೆ. ನಿಮ್ಮ ಅದೃಷ್ಟವನ್ನು ನೋಡಿಕೊಂಡು ಹರ್ಷಿತರಾಗಿರಿ. ದೇಹವನ್ನು ಮರೆತು ತಮ್ಮನ್ನು ತಾವು ಆತ್ಮ ಎಂದು ತಿಳಿದು, ಮನಸ್ಸನ್ನು ಶಿವ ಪರಮಾತ್ಮನ ಜೊತೆಯಲ್ಲಿ ಜೋಡಿಸಿರಿ. ಶರೀರದ ಖಾಯಿಲೆಗೆ ಔಷಧಿಯು ಎಷ್ಟು ಅಗತ್ಯವೋ, ಮನಸ್ಸಿಗೆ ಭವರೋಗವೈದ್ಯನಾದ ಪರಮಾತ್ಮನ ಸ್ಮೃತಿಯು ಅಷ್ಟೇ ಅವಶ್ಯ. ಪ್ರತಿಶ್ವಾಸದಲ್ಲಿಯೂ ಶಿವ ಪರಮಾತ್ಮನ ನೆನಪು ಇದ್ದರೆ ಯಾವುದೇ ರೋಗಗಳು ತಮ್ಮ ಪ್ರಭಾವವನ್ನು ತೋರಲಾರವು. ಮನಸ್ಸನ್ನು ಅಚಲವಾಗಿ ಇಟ್ಟುಕೊಂಡರೆ, ನಿರೋಗಿ ಕಾಯವನ್ನು ಪ್ರಾಪ್ತಿ ಮಾಡಿ ಕೊಳ್ಳಬಹುದು. ನಿಮ್ಮಲ್ಲಿರುವ ಧೈರ್ಯವವನ್ನು ಕಳೆದುಕೊಳ್ಳದೇ ನಿರ್ಭಯವಾಗಿರಬಹುದು. ಸದಾ ಹರ್ಷಿತವಾಗಿರಬಹುದು. ಆಗ ಯಾವುದೇ ಕಷ್ಟಗಳಿದ್ದರೂ ಸಹ ಪಾರು ಮಾಡುವಿರಿ. ಜ್ಞಾನದೀಪವನ್ನು ಮನಸ್ಸಿನಲ್ಲಿ ಬೆಳಗಿಸಿಕೊಂಡು ಪ್ರತಿಯೊಂದು ಸಮಸ್ಯೆಯನ್ನು ಆಟವೆಂದು ತಿಳಿದುಕೊಂಡು ನಡೆಯಿರಿ. ಗೌರವ– ಅಗೌರವ, ಜಯ–ಅಪಜಯ ಎಲ್ಲದರಲ್ಲಿಯೂ ನಿಮ್ಮ ಮನಸ್ಸನ್ನು ಉಲ್ಲಾಸ–ಉತ್ಸಾಹದಲ್ಲಿ ಸ್ಥಿರವಾಗಿಟ್ಟುಕೊಳ್ಳಿರಿ. ಮನಸ್ಸಿನಿಂದ ಸದಾ ಶಿವ ಪರಮಾತ್ಮನನ್ನು ನೆನಪು ಮಾಡಿರಿ.

ವಿಶ್ವ ಆರೋಗ್ಯ ಸಂಸ್ಥೆಯು 'ಸಂಪೂರ್ಣ ಶಾರೀರಿಕ, ಮಾನಸಿಕ, ಸಾಮಾಜಿಕ, ಆರೋಗ್ಯವೇ ಆರೋಗ್ಯವೆಂದು ಸಾರಿದೆ. ಕೇವಲ ರೋಗಗಳಿಲ್ಲದಿರುವಿಕೆ ಪರಿಪೂರ್ಣ ಆರೋಗ್ಯವಲ್ಲ' ಎಂದು ವ್ಯಾಖ್ಯಾನಿಸಿದೆ. ಯೋಗದಿಂದ ಆರೋಗ್ಯ ಭಾಗ್ಯ ಪಡೆಯುವುದು ಸಹಜವಾಗಿದೆ. ಬ್ರಹ್ಮಾಕುಮಾರಿ ಸಂಸ್ಥೆಯು ಜೂನ್ ತಿಂಗಳಲ್ಲಿ ಅಂತರಾಷ್ಟ್ರಿಯ ಮಟ್ಟದಲ್ಲಿ ಅನೇಕ ಕಾರ್ಯಯೋಜನೆಗಳನ್ನು ರೂಪಿಸಿದೆ. ದೇಶ ವಿದೇಶಗಳಲ್ಲಿರುವ 8500 ಶಾಖೆಗಳಲ್ಲಿ ಯೋಗ ಶಿಬಿರ, ಯೋಗಾಸನ, ವಿಚಾರಗೋಷ್ಠಿ, ಚರ್ಚೆ ಮುಂತಾದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಯೋಗಾಸನ ಮತ್ತು ರಾ–ಜಯೋಗ ಅಭ್ಯಾಸ ಮಾಡುವುದಕ್ಕಾಗಿ ಈಶ್ವರೀಯ ವಿಶ್ವವಿದ್ಯಾಲಯಕ್ಕೆ ತಮ್ಮೆಲ್ಲರಿಗೂ ಹಾರ್ದಿಕ ಸ್ವಾಗತ.

**ವಿಶ್ವಾಸ ಸೋಹೋನಿ ಬ್ರಹ್ಮಾಕುಮಾರಿ ಮೀಡಿಯಾ ವಿಂಗ್**
**9483937106**

### ಸಹಜ ರಾಜಯೋಗದಿಂದಾಗುವ ಆರೋಗ್ಯದ ಲಾಭಗಳು:

1) ಯೋಗಾವಸ್ಥೆಯಲ್ಲಿ ಶ್ವಾಸೋಚ್ಛ್ವಾಸ ನಿಧಾನವಾಗಿ ನಡೆಯುವುದರಿಂದ ಯೋಗಿಯು ವಿಶ್ರಾಂತಿ ಹಾಗೂ ನೆಮ್ಮದಿಯ ಅನುಭವ ಪಡೆಯುವನು.
2) ಯೋಗಾವಸ್ಥೆಯಲ್ಲಿ ಹೃದಯದಲ್ಲಿ ರಕ್ತ ಸಂಚಾರ ನಿಯಮಿತವಾಗಿ ನಿರ್ದಿಷ್ಟವಾಗಿ ಕಡಿಮೆಯಾಗುವುದರಿಂದ ಹೃದಯಕ್ಕೆ ಸಾಕಷ್ಟು ವಿಶ್ರಾಂತಿ ದೊರೆಯುತ್ತದೆ.
3) ಯೋಗಾವಸ್ಥೆಯಲ್ಲಿ ಯೋಗಿಯ ಶರೀರದಲ್ಲಿ ಸಂಚರಿಸುವ ರಕ್ತದಲ್ಲಿ ಲ್ಯಾಕ್ಟಿಕ್ ಆಮ್ಲದ ಅಂಶವು ಶೀಘ್ರವಾಗಿ ಕೆಳಮಟ್ಟಕ್ಕೆ ಬರುವುದರಿಂದ ಸಂಪೂರ್ಣ ಶಾಂತಿಯ ಅನುಭವವಾಗುವುದಲ್ಲದೇ ಎಲ್ಲಾ ಪ್ರಕಾರದ ಉದ್ವೇಗ ಹಾಗೂ ನಿರುತ್ಸಾಹದಿಂದ ಮುಕ್ತಿ ಲಭಿಸಿ, ನರಮಂಡಲಕ್ಕೆ ಶಕ್ತಿಯು ದೊರೆಯುವುದಲ್ಲದೇ ಯಾವುದೇ ರೀತಿಯ ನರಗಳಿಗೆ ಸಂಬಂಧಿಸಿದ ರೋಗವು ನಿವಾರಣೆಯಾಗುತ್ತದೆ.
4) ಯೋಗಾವಸ್ಥೆಯಲ್ಲಿ ಮಾನಸಿಕ ಉದ್ವೇಗ ದೂರವಾಗುವುದರಿಂದ ಮಾನವನ ತ್ವಚೆಯಲ್ಲಿ ಅಸಾಧಾರಣ ರೋಗ ನಿರೋಧಕಶಕ್ತಿಯು ಪ್ರಫುಲ್ಲಿತವಾಗುವುದರಿಂದ ಯೋಗಿಯು ಉಲ್ಲಾಸಭರಿತನಾಗುವನು.
5) ಹೃದಯವಿಕಾರ, ರಕ್ತದೊತ್ತಡ. ಮಾನಸಿಕ ಅಶಾಂತಿ, ಅರೆಹುಚ್ಚು, ಕ್ರೋಧ, ಕಾಮ, ಮಾನಸಿಕ ಭಯದಿಂದ ಉಂಟಾದ ರೋಗಗಳೂ ಸಹ ಯೋಗದಿಂದ ಓಡಿ ಹೋಗುತ್ತವೆ.
6) ಯೋಗ ವಿಜ್ಞಾನವು ಮನುಷ್ಯನ ಉದ್ವೇಗಗಳನ್ನು ನಿಯಂತ್ರಿಸಿ, ಅವನ ವಿಚಾರಗಳನ್ನು ವ್ಯವಸ್ಥಿತವಾಗಿಡುತ್ತದೆ.
7) ಯೋಗದ ಫಲವಾಗಿ ನಾವು ಗಹನ ಶಾಂತಿಯ ಅನುಭವ ಮಾಡುತ್ತೇವೆ, ಆಗ ಕೊರ್ಟಿಕೋಸ್ಟಿರಾಯಿ ಗ್ರಂಥಿಯ ಅಂತಃಸ್ರಾವದ ಪ್ರಮಾಣವು ಕಡಿಮೆಯಾಗಿ ಆರೋಗ್ಯಕ್ಕೆ ಅತ್ಯಂತ ಸಹಾಯಕಾರಿಯಾಗುತ್ತದೆ. ಅದು ನಮಗೆ ಪೆಪ್ಟಿಕ್ ಅಲ್ಸರ್, ರಕ್ತದೊತ್ತಡ. ಮಧುಮೇಹದಂತಹ ರೋಗಗಳಿಂದ ದೂರವಿಡುತ್ತದೆ. ಅಲ್ಲದೇ ರೋಗ ಪ್ರತಿರೋಧಕ ಶಕ್ತಿ ಹೆಚ್ಚಾಗುತ್ತದೆ.
8) ವೈಜ್ಞಾನಿಕವಾಗಿ ಹೇಳುವುದಾದರೆ ಯೋಗಿಯು ಏಕರಸ ಮತ್ತು ಅಂತರ್ಮುಖತೆ ಹಾಗೂ ಹರ್ಷಿತಮುಖತೆಯ ಸ್ಥಿತಿಯಲ್ಲಿ ಸದಾಕಾಲಕ್ಕೆ ಇರುವುದರಿಂದ ಅವನ ಮಾನಸಿಕ ಹಾಗೂ ಶಾರೀರಿಕ ಕ್ರಿಯೆಗಳಲ್ಲಿ ಅಸಾಧಾರಣ ಬದಲಾವಣೆಗಳಾಗಿ ನಿರೋಗಿ, ದೀರ್ಘಾಯುವಾಗಿ ತೃಪ್ತಿಮಯ ಜೀವನವನ್ನು ಪಡೆಯುವನು.
9) ದುಃಖ, ರೋಗ, ಅಧೈರ್ಯ, ಆಸೆ, ಕಾಮ, ಕ್ರೋಧ, ಲೋಭ, ಮೋಹ, ಅಹಂಕಾರಗಳಾದ ಎಲ್ಲಾ ಮನೋರೋಗಗಳನ್ನು ಶಾಶ್ವತವಾಗಿ ನಿರ್ಮೂಲನೆ ಮಾಡಿ, ಶುದ್ಧ ಸಂಕಲ್ಪದಿಂದ ಸದಾ ಇರಲು ಅತಿ ಸುಲಭವಾದ ಏಕೈಕ ಮಾರ್ಗವೇ ಸಹಜ ರಾಜಯೋಗವಾಗಿದೆ.
10) ಯೋಗದಿಂದ ಯೋಗಿಯು ಅತಿನಿದ್ದೆ, ಆಲಸ್ಯ, ಭಯ, ವ್ಯಕ್ತಿದ್ವೇಷ, ಜಾತಿ, ಮತ, ಲಿಂಗಭೇದ, ವಯೋಭೇದಗಳನ್ನು ನಿರ್ಮೂಲನೆ ಮಾಡಿ ಪ್ರೇಮ, ದಯೆ, ಕರುಣೆ, ಪವಿತ್ರತೆಯಿಂದ ಸಂಪನ್ನನಾಗಿ ಕಮಲಪುಷ್ಪದಂತೆ ಅನಾಸಕ್ತನಾಗಿ ಇರಬಲ್ಲನು.

### ಮಾಜಿ ಶಾಸಕ ಕಾಕಾಸಾಹೇಬ್ ಪಾಟೀಲ್ ನಿಧನಕ್ಕೆ ಸಂತಾಪ ಸೂಚಿಸಿದ ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ನಿಪ್ಪಾಣಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕರು ಮತ್ತು ನನ್ನ ಆತ್ಮೀಯ ಸ್ನೇಹಿತ ಕಾಕಾಸಾಹೇಬ ಪಾಟೀಲ್ ಅವರ ನಿಧನದಿಂದ ನನಗೆ ತೀವ್ರ ಆಘಾತವಾಗಿದೆ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಸಂತಾಪ ಸೂಚಿಸಿದ್ದಾರೆ.

ಜನಸಾಮಾನ್ಯರ ಹಿತರಕ್ಷಣೆಗಾಗಿ ತಮ್ಮ ಜೀವನವನ್ನು ಸಮರ್ಪಿಸಿದ್ದ ಕಾಕಾಸಾಹೇಬ್ ಪಾಟೀಲ್ ಅವರು ಜನಪ್ರಿಯ ನಾಯಕರಾಗಿದ್ದರು. ಅವರ ಅಗಲಿಕೆ ನಮ್ಮ ಪಕ್ಷಕ್ಕೆ ಮತ್ತು ಸಮಾಜ-ಕ್ಕೆ ತುಂಬಲಾರದ ನಷ್ಟವಾಗಿದೆ. ಅವರ ಕುಟುಂಬ ಸದಸ್ಯರಿಗೆ ಮತ್ತು ಅಭಿಮಾನಿಗಳಿಗೆ ಈ ದುಃಖದ ಸಮಯದಲ್ಲಿ ಧೈರ್ಯ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಈ ದುಃಖದಲ್ಲಿ ನಾನೂ ನಿಮ್ಮೊಂದಿಗೆ ನಿಂತಿದ್ದೇನೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾರ್ಯನಿರ್ವಾಹಕ ಅಧಿಕಾರಿ ಶಾಲೆಗೆ ಬೇಟಿ

ಗದಗ : ಶಿರಹಟ್ಟಿ ತಾಲ್ಲೂಕಿನ ಛಬ್ಬಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಶಾಲೆಗಳಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ಭೇಟಿ ನೀಡಿದರು. ಶಾಲೆಯೊಂದರಲ್ಲಿ ವಿದ್ಯಾರ್ಥಿಗಳೊಂದಿಗೆ ಮಧ್ಯಾಹ್ನದ ಬಿಸಿಯೂಟ ಸವಿದರು.

ಛಬ್ಬಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಅವರು ಶಾಲಾ ಮಕ್ಕಳ ಜೊತೆಗೆ ಊಟ ಮಾಡಿದರು. ಇದೇ ವೇಳೆ ಆಹಾರದ ಗುಣಮಟ್ಟ, . ಆಹಾರ ದಾನ್ಯಗಳ ಗುಣಮಟ್ಟ, ಬಿಸಿ ಊಟದ ಕೊಠಡಿ, ಖಆಬಆ ಖಾತೆಗಳ ವಿವರ ಇತ್ಯಾದಿ ಪರಿಶೀಲನೆ ನಡೆಸಿದರು ನಂತರ ಮಕ್ಕಳೊಂದಿಗೆ ಕೆಲಕಾಲ ಕಳೆದರು. ಈ ವೇಳೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಾಲಾ ಶಿಕ್ಷಕರು ಗ್ರಾಮ ಪಂಚಾಯಿತಿ ಸಿಬ್ಬಂದಿ ಇದ್ದರು.

### ಜೂ.20 ಮತ್ತು 21 ರಂದು ಅಂಚೆ ವ್ಯವಹಾರ ಸ್ಥಗಿತ

ಕಾರವಾರ, -ಅಂಚೆ ಇಲಾಖೆಯು ಪ್ರಸಕ್ತ ಉಪಯೋಗಿಸುತ್ತಿರುವ ಸಾಫ್ಟ್‌ವೇರ್ ಅನ್ನು ಬದಲಾವಣೆ ಮಾಡುತ್ತಿದ್ದು ಹೊಸ ಸಾಫ್ಟ್‌ವೇರ್ ಅಳವಡಿಕೆಯ ಪ್ರಕ್ರಿಯೆಯು ಕಾರವಾರ ಪ್ರಧಾನ ಅಂಚೆ ಕಚೇರಿಯ ಅಡಿಯಲ್ಲಿ ಬರುವ ಉಪ ಅಂಚೆ ಕಚೇರಿ ಮತ್ತು ಶಾಖಾ ಅಂಚೆ ಕಚೇರಿಗಳಲ್ಲಿ ಜೂ.20 ಮತ್ತು 21 ವರೆಗೆ ನಡೆಯಲಿದ್ದು, ಆ ದಿನಗಳಲ್ಲಿ ಯಾವುದೇ ರೀತಿಯ ಅಂಚೆ ವ್ಯವಹಾರ ವಹಿವಾಟುಗಳನ್ನು ಸ್ಥಗಿ-ತಗೊಳಿಸಲಾಗಿದೆ.

ಕಾರವಾರ ತಾಲೂಕಿನ ಕೈಗಾ, ಕದ್ರಾ, ಅಸೋಟಿ, ಅಂಗಡಿ, ಹಳಗಾ, ಮಾಜಾಳಿ, ಸದಾಶಿವಗಡ, ಕಡವಾಡ, ಹಬ್ಬುವಾಡ, ನಂದನಗದ, ಕೋಡಿಬಾಗ, ಬೈಲ್, ಕಾರವಾರ ಪ್ರಧಾನ ಅಂಚೆ ಕಚೇರಿ, ಚೆಂಡಿಯಾ, ನವಲ್ ಬೇಸ್, ಕಾರವಾರ ಮಾರ್ಕೆಟ್ ಮತ್ತು ಅಂಕೋಲಾ ತಾಲ್ಲೂಕಿನ ಅಂಕೋಲಾ, ಶೆಟಗೇರಿ, ವಂದಿಗೆ, ಬೇಲೇಕೇರಿ, ಅವರ್ಸಾ ಅಂಚೆ ಕಚೇರಿ ಮತ್ತು ಇವುಗಳ ಅಡಿ ಬರುವ ಶಾಖಾ ಅಂಚೆ ಕಚೇರಿಗಳಲ್ಲಿ ಎರಡು ದಿನಗಳ ಎಲ್ಲಾ ಕೆಲಸ ಕಾರ್ಯಗಳು ಸ್ಥಗಿತಗೊಳ್ಳಲಿದ್ದು ಅಂಚೆ ಗ್ರಾಹಕರು ಸಹಕರಿಸುವಂತೆ ಕಾರವಾರ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳೆ ಕಾಣೆ

ಕಾರವಾರ, : ಮಿಸ್ಬಾ ಮತೀನ ಪಾಶಾ (24 ವರ್ಷ) ಸಾ. ಗುತ್ತಿಗೇರಿಗಲ್ಲಿ ಹಳಿಯಾಳ ಶಹರ ಹಾಲಿ ಜಂಬಾಲಗಲ್ಲಿ ಹಳಿಯಾಳ ಇವರು ದಿನಾಂಕ: 17-09-2024 ರಂದು ಬೆಳಗ್ಗೆ 9 ಗಂಟೆಗೆ ಹಳಿಯಾಳ ಶಹರದ ಬಸ್‌ಸ್ಟಾಂಡ್ ರೋಡ್‌ನಲ್ಲಿರುವ ಪದ್ಮಾವತಿ ಹೋಟೆಲ್‌ನಲ್ಲಿ ಕೆಲಸಕ್ಕೆ ಹೋದವಳು ಹೋಟೆಲ್ ಮಾಲೀಕರ ಬಳಿ ಬಸ್ ನಿಲ್ದಾಣದ ಹತ್ತಿರ ಹೋಗಿ ಬರುವುದಾಗಿ ಹೇಳಿ ಹೋದವರು ವಾಪಸ್ ಕೆಲಸಕ್ಕೂ ಬಾರದೇ ಮನೆಗೂ ಹೋಗದೆ ಸಂಬಂಧಿಕರ ಮನೆಗೂ ಹೋಗದೆ ಎಲ್ಲಿಯೋ ಹೋಗಿ ಕಾಣೆಯಾಗಿರುತ್ತಾಳೆ.

ಈ ಮಹಿಳೆಯ ಬಗ್ಗೆ ಮಾಹಿತಿ ಇದ್ದಲ್ಲಿ ಪೋಲಿಸ್ ಉಪನಿರೀಕ್ಷಕರು ಹಳಿಯಾಳ ಪೊಲೀಸ್ ಠಾಣೆಯ ದೂ.ಸಂ. 08284-220133, ಮೊ:9480805265 ಸಂಪರ್ಕಿಸುವಂತೆ ಹಳಿಯಾಳ ಪೊಲೀಸ್ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಲ್ಕ ಮರುಪಾವತಿ ಕಾರ್ಯಕ್ರಮ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೊಪ್ಪಳ : ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಒದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು, 2024-25 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಕಾರ್ಯಕ್ರಮಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಅವಧಿಯನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿ ಮೇರೆಗೆ ಹೈಕೋರ್ಟ್ ಮಧ್ಯಂತರ ಆದೇಶದಂತೆ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಕೋರ್ಸುಗಳಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮಕ್ಕೆ ಮಾತ್ರ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲಾಗಿದೆ.

ಅರ್ಜಿಯನ್ನು **https://ssp.postmatric.karnataka.gov.in** ಮೂಲಕ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ **https://bcwd.karnataka.gov.in** ಭೇಟಿ ನೀಡಬಹುದು, ಇಲಾಖಾ ಸಹಾಯವಾಣಿ: 8050770005, ಇ-ಮೇಲ್: **bcwdhelpline@gmail.com**, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: **postmatrichelp@karnataka.gov.in** ಮತ್ತು ದೂ.ಸಂ: 1902 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಕಾರ್ಯಕ್ರಮ



ಬೆಳಗಾವಿ, : ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಳಗಾವಿ ಕರ್ನಾಟಕ ರಾಜ್ಯರಕ್ತ ಚಾಲನಾ ಪರಿಷತ್, ಬೆಂಗಳೂರ ಜಿಲ್ಲಾ ಏಡ್ಸ್ ನಿರೋಧಕ ಮತ್ತು ನಿಯಂತ್ರಣ ಘಟಕ, ಬೆಳಗಾವಿ ಆಹಾರ ಸುರಕ್ಷತೆ ಹಾಗೂ ಔಷಧ ನಿಯಂತ್ರಣ ಇಲಾಖೆ, ಬಿಮ್ಸ್ ರಕ್ತ ಕೇಂದ್ರ, ಬೆಳಗಾಂವ ರಕ್ತ ಕೇಂದ್ರ, ಕೆ.ಎಲ್.ಇ. ಡಾ ಪ್ರಭಾಕರ ಕೋರೆ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರ, ಹಾಗೂ ಸುವರ್ಣ ಕರ್ನಾಟಕ ರಕ್ತ ಕೇಂದ್ರಗಳ ಸಂಘಟನೆ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ (ಜೂ.17) ನೆಹರು ನಗರದಲ್ಲಿನ ಕೆ.ಎಲ್.ಇ ಆಸ್ಪತ್ರೆಯ, ಉ+1 ಅನುಭವ ಮಂಟಪದ ಸಭಾಂಗಣದಲ್ಲಿ "ವಿಶ್ವ ರಕ್ತದಾನಿಗಳ ದಿನಾಚರಣೆ" ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ ಶಿಂಧೆ ಮಾತನಾಡಿ ಯುವಕ/ಯುವತಿಯರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವಂತೆ ತಿಳಿಸಿದರು. ಮೇಲಿಂದ ಮೇಲೆ ಇಂತಹ ಶಿಬಿರಗಳನ್ನು ಪ್ರತಿ ತಾಲೂಕಾ ಮತ್ತು ಹೋಬಳಿ ಮಟ್ಟದಲ್ಲಿ ಮಾಡಬೇಕು ಎಂದು ಕರೆ ನೀಡಿದರು.

ಪ್ರೋಬೇಶನರಿ, ಆಯ್.ಎ.ಎಸ್. ಅಧಿಕಾ-ರಿಗಳಾದ ಆಭಿನವ ಜೈನ್ ಅವರು ಮಾತನಾಡಿ ರಕ್ತದಾನ ಮಹತ್ವದ ಕಿರುಚಿತ್ರವನ್ನು ತಯಾರಿಸಿ ಸಾಮಾಜಿಕ ಜಾಲತಾಣಗಳ ಮೂಲಕ ಬಿತ್ತರಿಸಿ ಸಾರ್ವಜನಿಕರಲಿ ಅರಿವು ಮೂಡಿಸುವಂತೆ ಕರೆ ನೀಡಿದರು. ಕೆ.ಎಲ್.ಇ. ಡಾ: ಪ್ರಭಾಕರ ಕೋರೆ ವೈದ್ಯಕೀಯ ಸಂಶೋಧನಾ ಕೇಂದ್ರ & ಆಸ್ಪತ್ರೆ, ಬೆಳಗಾವಿಯ ವೈದ್ಯಕೀಯ ನಿರ್ದೇಶಕರಾದ ಡಾ: ಕರ್ನಲ್ ಎಂ ದಯಾನಂದ ಅವರು ಮಾತನಾಡಿ ರಕ್ತದಾನ ಶ್ರೇಷ್ಠದಾನ ರಕ್ತದಾನ ಮಾಡುವದರಿಂದ ದಾನಿಯ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಯಾಗಲು ಪ್ರಚೋದನೆಯಾಗುತ್ತದೆ ಮತ್ತು ದೇಹದಲ್ಲಿ ಹೊಸ ರಕ್ತದ ಚಾಲನೆಯಿಂದ ಕಾರ್ಯತ್ಪರತೆ ಜ್ಞಾಪಕ ಶಕ್ತಿ ವೃದ್ಧಿಯಾಗುತ್ತದೆ. ರಕ್ತದಲ್ಲಿ ಕೊಬ್ಬಿನಂಶ ಕಡಿಮೆ ಮಾಡಲು ಸಹಾಯವಾಗುತ್ತದೆ. ಎಲ್ಲ 18 ರಿಂದ 48 ವಯಸ್ಸಿನವರು ವರ್ಷದಲ್ಲಿ 3 ಸಲ ರಕ್ತದಾನ ಮಾಡಬಹುದೆಂದು ತಿಳಿಸಿದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ: ಚಾಂದನಿ ಜಿ ದೇವಡಿ, ಪ್ರಾಸ್ತಾವಿಕವಾಗಿ ಮಾತನಾಡಿ ಜಿಲ್ಲೆಯಲ್ಲಿ 15 ರಕ್ತ ಕೇಂದ್ರಗಳಿದ್ದು, ಅವುಗಳ ಮೂಲಕ 2024-25 ನೇ ಸಾಲಿನಲ್ಲಿ ಒಟ್ಟು 48247 ರಕ್ತದ ಯೂನಿಟ್ಸ್‌ಗಳನ್ನು ಸಂಗ್ರಹಿಸಲಾಗಿದೆ. ಇದರಲ್ಲಿ 16 ರಕ್ತ ಕೇಂದ್ರಗಳ ಮೂಲಕ 622 ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ. ಅವುಗಳ ಮೂಲಕ 31940 ರಕ್ತದ ಯೂನಿಟ್ಸ್‌ಗಳನ್ನು ಸಂಗ್ರಹಿಸಲಾಗಿದೆ. ಇದಲ್ಲದೇ ಜಿಲ್ಲೆಯಲ್ಲಿ 11 ರಕ್ತ ಸಂಗ್ರಹಣಾ ಘಟಕಗಳಿದ್ದು ಅದರಲ್ಲಿ 09 ರಕ್ತ ಸಂಗ್ರಹಣಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ, ಜಿಲ್ಲಾ ಪಂಚಾಯತ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಪ್ರತಿ ತಿಂಗಳು ಗ್ರಾಮ ಪಂಚಾಯತ ಮಟ್ಟದಲ್ಲಿ 10-15 ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದ್ದು, ಇದು ರಾಜ್ಯದಲ್ಲಿಯೇ ವಿನೂತನ ಕಾರ್ಯಕ್ರಮವಾಗಿದೆ ಎಂದು ತಿಳಿಸಿದರು.

ಬೆಳಗಾವಿ ಕೆ.ಎಲ್.ಇ. ಆಸ್ಪತ್ರೆ ಚಿಕ್ಕ ಮಕ್ಕಳ ತಜ್ಞರಾದ ಡಾ. ಸುಜಾತಾ ಜಾಲಿ ಇವರು ತಲೆಸ್ಮೀಯಾ ರೋಗದ ಬಗ್ಗೆ ಮಾತನಾಡಿ ತಲೆಸ್ಮೀಯಾ ರೋಗಿಗಳಿಗೆ ನಿಯಮಿತವಾಗಿ ಹಾಗೂ ನಿರಂತರವಾಗಿ ರಕ್ತದ ಅವಶ್ಯಕತೆ ಇರುವದರಿಂದ ಹೆಚ್ಚು ಹೆಚ್ಚು ರಕ್ತ ದಾನಿಗಳು ಮುಂದೆ ಬಂದು ರಕ್ತದಾನ ಮಾಡಬೇಕು ಹಾಗೂ ಸರ್ಕಾರಿ/ಸರ್ಕಾರೇತರ ಸಂಘ ಸಂಸ್ಥೆಗಳಿಂದ ರಕ್ತದಾನ ಶಿಬಿರಗಳನ್ನು ಆಯೋಜಿಸಲು ವಿನಂತಿಸಿಕೊಂಡರು.

ಇದೇ ಸಂದರ್ಭದಲ್ಲಿ ಜೆ.ಎನ್.ಎಮ್.ಸಿ. ಯುವರೆಡ್ ಕ್ರಾಸ್ ಘಟಕದ ವತಿಯಿಂದ ರಕ್ತದಾನಿಗಳ ಮಾಹಿತಿ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು ಮತ್ತು ಅತೀ ಹೆಚ್ಚು ಸಲ ರಕ್ತದಾನ ಮಾಡಿದ ರಕ್ತದಾನಿಗಳಾದ ಸಾಜೀದ ಎಂ ಶೇಖ, ಎಮ್ ಆದಿಪ್ರಕಾಶ, ಗಜಾನನ ಗವಣಿ, ಸುನಂದಾ ಕಿತ್ತಳೆ, ಅಮೀತ ಅನಂತ ಹೇರಕರ, ಮಹಮ್ಮದ ಹನೀಫ್ ಸಿದ್ದೀಖಿ ರವರಿಗೆ ಸನ್ಮಾನಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕು.ಕ. ಅಧಿಕಾರಿಗಳು ಡಾ. ಆಯ್.ಪಿ. ಗಡಾದ, ಪ್ರಾಚಾರ್ಯರಾದ ಡಾ ಎನ್.ಎಮ್ ಮಹಾಂತಶೆಟ್ಟಿ, ಮಲ್ಲಿಕಾರ್ಜುನ್ ಕೆ.ಎಸ್, ಉಪ ಔಷಧ ನಿಯಂತ್ರಕರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ರಘುರಾಮ್, ಡಾ:- ಎಸ್ ವಿ ವೀರಗಿ, ಡಾ: ಶ್ರೀದೇವಿ ಭೂಬತಿ, ಗಿರೀಶ ಬುಡರಕಟ್ಟಿ, ಡಾ: ಬಿ.ಎನ್. ತುಕ್ಕಾರ, ಡಾ: ಮಾಧವ ಪ್ರಭು, ಡಾ: ಅವಿನಾಶ ಕವಿ,ಸಿ ಜಿ ಅಗ್ನಿಹೋತ್ರಿ ಹಾಗೂ ಇತರೆ ರಕ್ತ ಕೇಂದ್ರದ ಪದಾಧಿಕಾರಿಗಳು ಹಾಗೂ ಕೆ.ಎಲ್.ಇ. ಸಂಸ್ಥೆಯ ವೈದ್ಯಕೀಯ ಸಿಬ್ಬಂದಿಯವರು ಮತ್ತು ವಿದ್ಯಾರ್ಥಿ/ವಿದ್ಯಾರ್ಥಿನಿಯರು ಜಿಲ್ಲಾ ಏಡ್ಸ್ ನಿರೋಧಕ & ನಿಯಂತ್ರಣ ಘಟಕ, ಬೆಳಗಾವಿ ಹಾಗೂ ಎನ್.ಟಿ.ಇ.ಪಿ. ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

### ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳ ಸೂಚನೆ

## ಡಾ. ಫ.ಗು.ಹಳಕಟ್ಟಿ ಹಾಗೂ ಹಡಪದ ಅಪ್ಪಣ್ಣ ಜಯಂತಿಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ- ಸಿದ್ರಾಮೇಶ್ವರ



ಕೊಪ್ಪಳ : ಜಿಲ್ಲಾ ಕೇಂದ್ರದಲ್ಲಿ ಜುಲೈ ಮಾಹೆಯಲ್ಲಿ ಡಾ. ಫ.ಗು ಹಳಕಟ್ಟಿ ಹಾಗೂ ಹಡಪದ ಅಪ್ಪಣ್ಣನವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಬುಧವಾರ ಜಿಲ್ಲಾಧಿಕಾ-ರಿಗಳ ಕಛೇರಿ ಸಭಾಂಗಣದಲ್ಲಿ ಕೆಂಪೇಗೌಡ, ಡಾ. ಫ.ಗು ಹಳಕಟ್ಟಿ ಹಾಗೂ ಹಡಪದ ಅಪ್ಪಣ್ಣನವರ ಜಯಂತಿ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಡಾ. ಫ.ಗು ಹಳಕಟ್ಟಿ ಜಯಂತಿ: ಜಿಲ್ಲಾ ಮಟ್ಟದಲ್ಲಿ ಡಾ. ಫ.ಗು ಹಳಕಟ್ಟಿ ಜಯಂತಿಯನ್ನು ಜುಲೈ 2 ರಂದು ಹಮ್ಮಿಕೊಳ್ಳಲಾಗುವುದು. ಅಂದು ಬೆಳಿಗ್ಗೆ 8.30ಕ್ಕೆ ಕುಷ್ಟಗಿ ರಸ್ತೆಯಲ್ಲಿರುವ ಡಾ. ಫ.ಗು ಹಳಕಟ್ಟಿ ವೃತ್ತದಲ್ಲಿ ಪುಷ್ಪಾರ್ಚನೆ ಕಾರ್ಯಕ್ರಮ ಜರುಗಲಿದೆ. ನಂತರ 10.30 ಗಂಟೆಗೆ ನಗರದ ಸಾಹಿತ್ಯ ಭನವದಲ್ಲಿ ನಡೆಯಲಿರುವ ವೇದಿಕೆ ಸಮಾರಂಭದಲ್ಲಿ ಡಾ. ಫ.ಗು ಹಳಕಟ್ಟಿ ಭಾವಚಿತ್ರಕ್ಕೆ ಪೂಜೆ, ವಿಶೇಷ ಉಪನ್ಯಾಸ ಸೇ-ರಿದಂತೆ ಇತರೆ ಕಾರ್ಯಕ್ರಮಗಳು ಜರುಗಲಿವೆ ಎಂದು ಹೇಳಿದರು.

ಹಡಪದ ಅಪ್ಪಣ್ಣ ಜಯಂತಿ: ಸಮಾಜದ ಮುಖಂಡರ ಕೋರಿಕೆಯ ಮೇರೆಗೆ ಕೊಪ್ಪಳ ಜಿಲ್ಲಾ ಮಟ್ಟದ ಹಡಪದ ಅಪ್ಪಣ್ಣನವರ ಜಯಂತಿ ಆಚರಣೆಯನ್ನು ಜುಲೈ 10ರ ಬದಲಿಗೆ ಜುಲೈ 22ಕ್ಕೆ ಆಯೋಜಿಸಲಾಗುವುದು. ಅಂದು ಬೆಳಿಗ್ಗೆ 8.30ಕ್ಕೆ ಹಡಪದ ಅಪ್ಪಣ್ಣನವರ ಭಾವಚಿತ್ರದ ಮೇರವಣಿಗೆಯು ನಗರದ ಗಡಿಯಾರ ಕಂಬದ ಹತ್ತಿರವಿರುವ ಅಕ್ಕಮಹಾದೇವಿ ದೇವಸ್ಥಾನದ ಆವರಣದಿಂದ ಆರಂಭಗೊಂಡು ಸಾಹಿತ್ಯ ಭವನದವರೆಗೆ ಜರುಗಲಿದೆ. ಬಳಿಕ 10.30 ಗಂಟೆಗೆ ಸಾಹಿತ್ಯ ಭವನದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಪೂಜೆ, ಹಡಪದ ಅಪ್ಪಣ್ಣನವರ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ನಡೆಯಲಿದೆ ಎಂದರು.

ಡಾ. ಫ.ಗು ಹಳಕಟ್ಟಿ ಹಾಗೂ ಹಡಪದ ಅಪ್ಪಣ್ಣನವರ ಜಯಂತಿ ಸಮಾರಂಭಗಳ ದಿನದಂದು, ಸಾಹಿತ್ಯ ಭವನ, ಡಾ. ಫ.ಗು ಹಳಕಟ್ಟಿ ವೃತ್ತ ಮತ್ತು ರಸ್ತೆ ಸ್ವಚ್ಛತೆಗೆ ಕ್ರಮ ಕೈಗೊಳ್ಳಿ. ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳಬೇಕು. ಈ ಜಯಂತಿಗಳ ದಿನದಂದು ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳು, ಗ್ರಾಮ ಪಂಚಾಯತ್ ಮತ್ತು ಇತರೆ ಕಛೇರಿಗಳಲ್ಲಿ ಆಚರಿಸುವಂತಾಗಬೇಕು. ಜಿಲ್ಲಾ ಮಟ್ಟದ ಜಯಂತಿ ಆಚರಣೆ ಕಾರ್ಯಕ್ರಮಕ್ಕಾಗಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಕೆಂಪೇಗೌಡ ಜಯಂತಿಯನ್ನು ಜೂನ್ 27 ರಂದು ಸರಳವಾಗಿ ಆಚರಿಸುವ ಕುರಿತು ಸಭೆಯಲ್ಲಿ ನಿರ್ಧರಿಸಲಾಯಿತು. ಅಂ-ದು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಅವರಿಗೆ ಗೌರವ ನಮನ ಸಲ್ಲಿಸಬೇಕು ಎಂದು ಹೇಳಿದರು.

ಕಾರ್ಯಕ್ರಮಗಳ ಯಶಸ್ವಿಗೆ ವಿವಿಧ ಸಮಾಜದ ಮುಖಂಡರು, ಸಾರ್ವಜನಿಕರು ಸಹಕರಿಸಬೇಕು ಎಂದು ಅಪರ ಜಿಲ್ಲಾಧಿಕಾ-ರಿಗಳು ಹೇಳಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ಮರಬನಳ್ಳಿ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ.ಬಸವರಾಜ, ಬಸವ ಅನುಯಾಯಿಗಳಾದ ಗವಿಸಿದ್ದ ಕೊಪ್ಪಳ, ಈರಣ್ಣ ಕೊರಳಳ್ಳಿ, ಹನುಮಂತ ಕಲಮಂಗಿ, ಶೇಖರ ಇಂಗಳದಾಳ, ಶರಣಬಸವ ಪಾಟೀಲ್, ಗುಡದಪ್ಪ ಹಡಪದ, ವೀರಣ್ಣ ಸಂಕ್ಲಾಪುರ, ಈಶ್ವರಪ್ಪ ದಿನ್ನಿ, ಹಡಪದ ಅಪ್ಪಣ್ಣ ಸಮಾಜದ ಮುಖಂಡರಾದ ಹನುಮಂತಪ್ಪ ಈಶ್ವರಪ್ಪ, ಮಂಜುನಾಥ ಹಡಪದ, ಶವುಕುಮಾರ ಕಾರಟಗಿ, ಮೌನೇಶ ಕೊಪ್ಪಳ, ದ್ಯಾಮಣ್ಣ ಮದಿನೂರ, ಈಶಪ್ಪ ಮುದ್ದಾಬಳ್ಳಿ, ವೀರುಪಾಕ್ಷಪ್ಪ ಮ್ಯಾದ್ನೇರಿ, ಬಸವರಾಜ್ ಇಟಗಿ, ಶರಣಪ್ಪ ಇಟಗಿ, ಗವಿಸಿದ್ದಪ್ಪ ಮಾದಿನೂರ, ಮುತ್ತಣ್ಣ ಬೆಣ-ಕಲ್, ಬಸವರಾಜ್ ಉಣಿಸಿಹಾಳ್, ಅಂ-ದಪ್ಪ, ವೀರುಪಾಕ್ಷ ದೊಡ್ಡಮನಿ, ಗವಿಸಿದ್ದಪ್ಪ ಕಾಟ್ರಳ್ಳಿ, ಶಂಕ್ರಪ್ಪ ಹಡಪದ, ಈರಣ್ಣ ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

## ಬ್ಯಾರೇಜ ಕಂ ಬ್ರಿಡ್ಜ ನಿರ್ಮಾಣ ಕಾಮಗಾರಿ ಭೂಮಿ ಪೂಜೆ



ಯರಗಟ್ಟಿ: ಈ ಭಾಗದ ರೈತರು ತಮ್ಮ ಹೊಲಗಳಿಗೆ ಸಂಚರಿಸಲು ಹಾಗೂ ಅಂತರ್ಜಲ ಮಟ್ಟ ಹೆಚ್ಚಳವಾಗಿ ರೈತರ ಕೃಷಿ ಚಟುವಟಿಕೆಗಳಿಗೆಈ ಬ್ಯಾರೇಜನಿಂದ ಅನುಕೂಲವಾಗಲಿದೆ ಎಂದು ಶಾಸಕ ವಿಶ್ವಾಸ ವೈದ್ಯ ಹೇಳಿದರು.

ಸಮೀಪದ ಜಾಲಿಕಟ್ಟಿ ಜೀವಾಪೂರ ಸಂಪರ್ಕಿಸುವ ರಸ್ತೆಗೆ ಮಂಗಳವಾರ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಡಿ ಸುಮಾರು 1.50 ಕೋಟಿ ರೂ. ಮೊತ್ತದ ಬ್ಯಾರೇಜ ಕಂ ಬ್ರಿಡ್ಜ ನಿರ್ಮಾಣ ಕಾಮಗಾರಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಯರಗಟ್ಟಿ ಭಾಗದ ಜನರಿಗೆ ಸಂಪೂರ್ಣ ನೀರಾವರಿ ಸೌಲಭ್ಯ ಕಲ್ಪಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಕೆಎಂಎಫ ನಿರ್ದೇಶಕ ಶಂಕರ ಇಟ್ನಾಳ ಮಾತನಾಡಿ, ಸರ್ಕಾರ ಗ್ಯಾರಂಟಿ ಯೋಜನೆಗಳ ಜತೆಗೆ ಅಭಿವೃದ್ಧಿ ಕಾರ್ಯ ಮಾಡಲಾಗುತ್ತಿದ್ದು ಗುಣಮಟ್ಟದ ಜತೆಗೆ ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣ ಗೊಳಿಸಿ ಎಂದು ಗುತ್ತಿಗೆದಾರರಿಗೆ ಸೂಚಿಸಿದರು. ಶಾಸಕ ವಿಶ್ವಾಸ ವೈದ್ಯ ಅವರನ್ನು ಗ್ರಾಮಸ್ಥರು, ಕಾರ್ಯಕರ್ತರು ಸನ್ಮಾನಿಸಿದರು.

ಮುಖಂಡ ವೆಂಕಣ್ಣ ಯರಡ್ಡಿ, ಕಲ್ಮೇಶ ಬಾಲರಡ್ಡಿ, ಮುತ್ತನಗೌಡ ನಾಯ್ಕರ, ಪುಟ್ಟು ಅರಳಿಕಟ್ಟಿ, ಬಸವರಾಜ ಗಿರೆಡ್ಡಿ, ರಮೇಶ ಅರಳಿಕಟ್ಟಿ, ಶಾಶಪ್ಪ ಗೋಪಾಳಿ, ಪ್ರವೀಣ ಯರಡ್ಡಿ, ಬಸು ತಳವಾರ, ಹನಮಂತ ಅರೇಬೆಂಚಿ, ಪ್ರಕಾಶ ಚೌರೆಡ್ಡಿ, ಶಿವನಗೌಡ ನಾಯ್ಕರ, ಶಂಕರ ಹುಬ್ಬಳ್ಳಿ, ತಿಪ್ಪಣ್ಣ ಕಡಬಿ, ಮಲನಾಯ್ಕ ನಾಯ್ಕರ, ಬಸವರಾಜ ಬನಪ್ಪನವರ, ಬಸಯ್ಯ ಅಟಿಗಲ್ಲ, ಸದಾ ಕುರಿ, ಮಹಾದೇವಯ್ಯ ಪೂಜೇರ, ಶಶಿಧರ ತಳವಾರ ಸುಭಾನಿ ಕುದರಿ, ಮಹಾಂತೇಶ ಉಪ್ಪಿನ, ಬಸನಾಯ್ಕ ಚಿಕಾಕಿ, ಪಡೆಪ್ಪ ನರಿ, ಆರ್. ಕೆ.ಪಟಾತ, ಪ್ರಕಾಶ ಮುರಗೋಡ ಸೇರಿದಂತೆ ಕಾರ್ಯಕರ್ತರು ಇದ್ದರು.

## ಎನ್‌ಎಂಎಂಎಸ್ ವಿದ್ಯಾರ್ಥಿವೇತನಕ್ಕೆ ಎನ್‌ಎಸ್‌ಪಿನಲ್ಲಿ ಅರ್ಜಿ ಸಲ್ಲಿಸಲು ಅವಕಾಶ

ವಿಜಯಪುರ : ಪ್ರಸಕ್ತ 2025-26ನೇ ಸಾಲಿನಲ್ಲಿ ಎನ್‌ಎಂಎಂಎಸ್ ವಿದ್ಯಾರ್ಥಿ ವೇತನಕ್ಕಾಗಿ ನ್ಯಾಶನಲ್ ಸ್ಕಾಲರಶಿಪ್ ಪೋರ್ಟಲ್(ಎನ್-ಎಸ್‌ಪಿ)ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

2025-26ನೇ ಸಾಲಿನಲ್ಲಿ ಫ್ರೆಶ್ ಹಾಗೂ ರಿನಿವಲ್ ವಿದ್ಯಾರ್ಥಿಗಳು ಎನ್‌ಎಸ್‌ಪಿಯಲ್ಲಿ ಅರ್ಜಿಗಳನ್ನು ಸಲ್ಲಿಸಲು ರಜಿಸ್ಟ್ರೇಶನ್ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. (ಓಟಿಆರ್) 14 ಡಿಜಿಟ್ ನಂಬರ್ ಪ್ರತಿ ವಿದ್ಯಾರ್ಥಿಗೂ ನೀಡಲಾಗುವವ ಒಂದು ಅನನ್ಯ ಸಂಖ್ಯೆಯಾಗಿದ್ದು, ಇದು ವಿದ್ಯಾರ್ಥಿಯ ನ್ಯಾಶನಲ್ ಸ್ಕಾಲಶಿರ್ಪ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಅನ್ವಯವಾಗುತ್ತದೆ. ಎನ್‌ಎಂಎಂ-ಎಸ್ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾಗಿರುವ ರಿನಿವಲ್ ವಿದ್ಯಾರ್ಥಿಗಳಿಗೆ ಎನ್‌ಎಸ್‌ಪಿನಲ್ಲಿ ನೊಂದಾಯಿತ ಮೊಬೈಲ್‌ಗೆ ಎಸ್‌ಎಂ-ಎಸ್ ಮೂಲಕ ರೆಫರನ್ಸ್-ಓಟಿಆರ್ ಸಂಖ್ಯೆ ಕಳುಹಿಸಲಾಗುವುದಿಲ್ಲ. ಫ್ರೆಶ್ ವಿದ್ಯಾರ್ಥಿಗಳಿಗೆ ಎಸ್‌ಎಸ್‌ಎಸ್ ಮೂಲಕ ರೆಫರನ್ಸ್ ಐಡಿ ಅಥವಾ ಓಟಿಆರ್ ಸಂಖ್ಯೆಯನ್ನು ಕಳುಹಿಸಲಾಗುವುದಿಲ್ಲ. ಆದ್ದರಿಂದ ಎನ್‌ಎಸ್‌ಪಿನಲ್ಲಿ ಮೊದಲ ಸಲ ಅರ್ಜಿ ಸಲ್ಲಿಸುತ್ತಿರುವ (ಫ್ರೆಶ್) 2ಎಫ್ ನ್ಯಾಶನಲ್ ಸ್ಕಾಲರ್‌ಶಿಪ್ ಪೋರ್ಟಲ್ ಸ್ಟೂಡೆಂಟ್ ಲಾಗಿನ್ ಗದ್ದದ ನೋ ಯುವರ್ ಓಟಿಆರ್ ಎಂಬ ಆಯ್ಕೆಯನ್ನು ಬಳಸಿ ಓಟಿಆರ್ ಅಥವಾ ರೆಫರನ್ಸ್ ಸಂಖ್ಯೆಯನ್ನು ಪಡೆದುಕೊಳ್ಳಬೇಕಾಗುತ್ತದೆ.

ಪ್ರಸಕ್ತ 2025-26ನೇ ಸಾಲಿನಲ್ಲಿ ಎನ್-ಎಸ್‌ಪಿನಲ್ಲಿ ಅರ್ಜಿ ಸಲ್ಲಿಸಲು ಫೇಸ್ ಅಥೆಂಟಿ-ಕೇಶನ್ ಕಡ್ಡಾಯವಾಗಿದ್ದು, ಆಧಾರನಲ್ಲಿರುವ ಮಾಹಿತಿಗಳನ್ನು ಸರಿಪಡಿಸುವುದರೊಂದಿಗೆ ಇತ್ತೀಚಿನ ಭಾವಚಿತ್ರವನ್ನು ಕಡ್ಡಾಯವಾಗಿ ಅಪಡೇಟ್ ಮಾಡಿಸುವುದು, ಆಧಾರನಲ್ಲಿ ಅತಿ ಚಿಕ್ಕ ವಯಸ್ಸಿನ ಫೋಟೋಗಳಿರುವುದ-ರಿಂದ ಫೇಸ್ ಅಥೆಂಟಿಕೇಶನ್ ಎರರ್ ಎಂದು ಕಾಣಿಸಿಕೊಳ್ಳುತ್ತದೆ. ಈ ಕುರಿಂತೆ ಹೆಚ್ಚಿನ ಮಾಹಿತಿಗಾಗಿ ಡಯಟ್ ನೋಡಲ್ ಅಧಿಕಾರಿ ಶ್ರೀಮತಿ ಕೆ.ಹೆಚ್.ಹಕೀಮ ಮೊ: 9481706605 ಸಂಖ್ಯೆಗೆ ಸಂಪರ್ಕಿಸುವಂತೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ತಿ ಆಭಾ ಜನಜಾತಿಯ ಗ್ರಾಮ ಉತ್ಕರ್ಷ್ ಅಭಿಯಾನ



ಸತ್ತಿಗೇರಿ : ದೂರದೃಷ್ಟಿಯ ಕೇಂದ್ರ ಪುರಸ್ಕೃತ ಬುಡಕಟ್ಟು ಕಲ್ಯಾಣ ಯೋಜನೆಯ ಧರ್ತಿ ಆಭಾ ಜನಜಾತಿಯ ಗ್ರಾಮ ಉತ್ಕರ್ಷಅಭಿಯಾನ ಯೋಜನೆಯಡಿ ತಾಲೂಕಿನ ಹಿಂದುಳಿದ ಗುಡುಮಕೇರಿ ಸೇ-ರಿದಂತೆ ಹಲವು ಗ್ರಾಮಗಳನ್ನು ಆಯ್ಕೆ ಮಾಡಿದ್ದು, ಈ ಗ್ರಾಮಗಳ ಸರ್ವಾಗೀಣ ವಿಕಾಸಕ್ಕೆ ಯೋಜನೆ ರೂಪಿಸಿ, ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕ ಅಧಿಕಾರಿಗಳಾದ ಆರ್. ಆರ್. ಕುಲಕರ್ಣಿ ಅವರು ಹೇಳಿದರು.

ಅವರು ಸೋಮವಾರ ಗುಡುಮಕೇರಿ ಗ್ರಾಮದ ಸಿದ್ಧಾರೂಢ ದೇವಸ್ಥಾನದ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಕೇಂದ್ರ ಸರ್ಕಾರವು ಈ ಯೋಜನೆಯಡಿ ಪರಿಶಿಷ್ಟ ಪಂಗಡದ ಜನಾಂಗದ ಸದಸ್ಯರನ್ನು ಸಮಾಜದ ಮುಖ್ಯವಾಹಿನಿಗೆ ಕರೆತರುವ ಪ್ರಯತ್ನ ಇದಾಗಿದ್ದು, ಪರಿಶಿಷ್ಟ ಪಂಗಡದ ಜನಾಂಗದ ಬಹುಸಂಖ್ಯಾತರು ವಾಸಿಸುವ ಗ್ರಾಮಗಳಲ್ಲಿ ಸಮಗ್ರ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲಾಗುವುದಲ್ಲದೇ ಮೂಲಭೂತ ಸೌಕರ್ಯ, ಆರೋಗ್ಯ, ಶಿಕ್ಷಣ ಮತ್ತು ಜೀವನೋಪಾಯ ಕೌಶಲ್ಯಗಳ ಕು-ರಿತು ಕಾರ್ಯಕ್ರಮಗಳನ್ನು ಆಯೋಜಿಸಿ, ಅನುಷ್ಠಾನಗೊಳಿಸಲಾಗುವದು ಎಂದರು.

ಆಯ್ಕೆಗೊಂಡ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು ಕೂಡಲೇ ಗ್ರಾಮದ ಅಗತ್ಯತೆಗಳ ಪಟ್ಟಿಮಾಡಿ, ಕೈಗೊಳ್ಳಬಹುದಾದ ಕ್ರಮಗಳು ಹಾಗೂ ಸಾಧಕ-ಬಾದಕಗಳ ಬಗ್ಗೆ ಮಾಹಿತಿ ಹೊಂದಿದ್ದು, ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ತಕ್ಷಣದ ಮಾಹಿತಿ ನೀಡುವಂತೆ ಸೂಚಿಸಿದ ಅವರು, ಅಗತ್ಯವಿರುವೆಡೆಗಳಲ್ಲಿ ಅಂಗನವಾಡಿ ಕೇಂದ್ರಗಳು, ಶಾಲೆಗಳ ಆರಂಭಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದರು.

ಸಂಬಂಧಿಸಿದ ತಾಲೂಕುಗಳ ತಹಶೀಲ್ದಾರರು ಅಲ್ಲಿನ ಗ್ರಾಮಸ್ಥರಿಗೆ ತ್ವರಿತವಾಗಿ ಜಾತಿ ಪ್ರಮಾಣಪತ್ರಗಳನ್ನು, ಸಂಬಂಧಿಸಿದ ಕಂದಾಯ ಇಲಾಖೆಯ ಅಧಿಕಾರಿಗಳು ಆದ-ಾರ ಕಾರ್ಡಗಳನ್ನು ಮಾಡಿಸಿಕೊಡಬೇಕು.

ಅದಕ್ಕಾಗಿ ಇಲಾಖಾಧಿಕಾರಿಗಳು ಒಂದು ದಿನಾಂಕವನ್ನು ನಿಗಧಿಗೊಳಿಸಿ, ಗ್ರಾಮಸ್ಥ-ರಿಗೆ ಮುಂಚಿತವಾಗಿ ತಿಳಿಸಿ, ಗ್ರಾಮಕ್ಕೆ ಖುದ್ದು ಭೇಟಿ ನೀಡಿ, ಅಲ್ಲಿನ ಅಗತ್ಯತೆಗಳನ್ನು ಒದಗಿಸಿ ಬರುವಂತೆ ಸೂಚಿಸಿದರು.

ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವುದು, ಶಾಲೆಗಳಿರುವಲ್ಲಿ ಅಲ್ಲಿನ ಶೌಚಾಲಯ, ಶಾಲಾ ಕಾಂಪೌಂಡ ನಿರ್ಮಾಣಕ್ಕೆ ಕ್ರಮ, ರಸ್ತೆ ಸಂಪರ್ಕ ಸೌಲಭ್ಯ ಕಲ್ಪಿಸಲು ಅಡಚಣೆ ಇದ್ದಲ್ಲಿ ಕ್ರಿಯಾಯೋಜನೆ ತಯಾರಿಸಿ, ಸಲ್ಲಿಸುವಂತೆ ಲೋಕೋಪಯೋಗಿ ಇಲಾಖೆಯ ಅಭಿಯಂತರರಿಗೆ ಸೂಚಿಸಿದ ಅವರು, ಅಲ್ಲಿನ ನಿವಾಸಿಗಳ ಆರೋಗ್ಯ ಸುಧಾರಣೆಗಾಗಿ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾ-ರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ, ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದ ಮೇಲ್ವಿಚಾರಕರಾದ ಶ್ರೀಮತಿ ಆಶಾ ಪರೀಟ, ಗ್ರಾ. ಪಂ ಕಾರ್ಯದರ್ಶಿ ಎಸ್. ಎಸ್. ತೋಟದ, ಗ್ರಾ. ಪಂ. ಸದಸ್ಯರಾದ ಶಿವಾನಂದ ಪುಡಕಲಕಟ್ಟಿ, ಮಲ್ಲವ್ವ ಸಿದ್ರಾಮಪ್ಪಗೋಳ, ರೇಣುಕಾ ಪಾಟೀಲ, ಗ್ರಾ. ಪಂ. ಸಿಬ್ಬಂದಿಯಾದ ಚಂದ್ರು ಪಾಟೀಲ, ಸ್ಥಳೀಯ ನಿವಾಸಿಗಳಾದ ವಾಚಪೆ ಗುಡುಮಕೇರಿ, ಭೀಮಪ್ಪ ಪಾಟೀಲ, ಫಕ್ಕೀರಪ್ಪ ಮಾದನ್ನವರ, ಹನುಮಂತ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

****

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಶುಲ್ಕ ಮರುಪಾವತಿ ಸೌಲಭ್ಯದ ದಿನಾಂಕ ವಿಸ್ತರಣೆ

ಬೆಳಗಾವಿ, 2024-25 ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗಿತ್ತಿರುವ "ಶುಲ್ಕ ಮರುಪಾವತಿ" ಕಾರ್ಯಕ್ರಮದ ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.

ಅರ್ಜಿ ಸಲ್ಲಿಸಲು 15-06-2025 ಕೊನೆಯ ದಿನವಾಗಿತ್ತು. ಆದರೆ ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ದಿನಾಂಕ ವಿಸ್ತರಿಸಲು ಮನವಿ ಸಲ್ಲಿಸಲಾಗಿದ್ದು, ಜೂನ್.30, 2025 ರವರೆಗೆ ರಾಜೀವ ಗಾಂಧಿ ವಿಶ್ವವಿದ್ಯಾಲಯದ ಕೋರ್ಸುಗಳಿಗೆ ಮಾತ್ರ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿರುತ್ತದೆ. ಆನ್‌ಲೈನ್ **https://ssp.postmatric.karnataka.**ರಠಠ.ಎಟ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8050770005 ಗೆ ಅಥವಾ ಕಛೇ-ರಿಯ ಇಮೇಲ್: **bcwdhelpline@gmail.com** ಅಥವಾ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಇಮೇಲ್: **postmatrichelp@karnataka.gov.in** ಹಾಗೂ ಸಹಾಯವಾಣಿ ಸಂಖ್ಯೆ: 1902 ಗೆ ಸಂಪರ್ಕಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಚೆ ಗ್ರಾಹಕರ ಗಮನಕ್ಕೆ

ಬೆಳಗಾವಿ, : ಭಾರತೀಯ ಅಂಚೆ ಇಲಾಖೆಯು ಭಾರತಾದ್ಯಾಂತ ಎ.ಪಿ.ಟಿ 2.0 ಎಂಬ ಹೊಸ ತಂತ್ರಾಂಶವನ್ನು ಜಾ-ರಿಗೊಳಿಸುತ್ತಿದೆ. ಆದ ಕಾರಣ ಭಾರತೀಯ ಅಂಚೆ ಇಲಾಖೆಯ ಆದೇಶದಂತೆ ಜೂನ್ 23, 2025 ರಂದು ಬೆಳಗಾವಿಯ ಪ್ರಧಾನ ಅಂಚೆ ಕಛೇರಿ ಹಾಗೂ ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲ ಉಪ ಹಾಗೂ ಶಾಖಾ ಅಂಚೆ ಕಛೇರಿಗಳಲ್ಲಿ ಮತ್ತು ಬೈಲ್‌ಹೊಂಗಲ್, ರಾಮದುರ್ಗದ ಪ್ರಧಾನ ಅಂಚೆ ಕಛೇರಿ ಮತ್ತು ಅದರ ವ್ಯಾಪ್ತಿಯ ಎಲ್ಲ ಉಪ ಹಾಗೂ ಶಾಖಾ ಅಂಚೆ ಕಛೇರಿಗಳಲ್ಲಿ ಜೂನ್ 26. 2025 ರಂದು ಎ.ಪಿ.ಟಿ 2.0 ಎಂಬ ತಂತ್ರಾಂಶ ಅಳವಡಿಕೆ ಜಾರಿಯಾಗುತ್ತಿದೆ.

ಇದರ ಪೂರ್ವ ಸಿದ್ಧತೆಗಾಗಿ ಭಾರತೀಯ ಅಂಚೆ ಇಲಾಖೆಯ ಆದೇಶದಂತೆ ಬೆಳಗಾವಿ ಮತ್ತು ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿರುವ ಅಂಚೆ ಕಛೇರಿಗಳಿಗೆ , ಉಪ ಹಾಗೂ ಶಾಖಾ ಕಛೇ-ರಿಗಳಲ್ಲಿ ಜೂನ್ 20 ರಿಂದ ಜೂನ್ 21 ರ ವರೆಗೆ ಎಲ್ಲಾ ರೀತಿಯ ವ್ಯವಹಾರ ವಹಿವಾಟುಗಳು ಸ್ಥಗಿತಗೊಳ್ಳಲಿವೆ ಹಾಗೂ ಜೂನ್ 23, 2025 ರಿಂದ ಸೇವೆಗಳು ಪುನರಾರಂಭಿಸುತ್ತವೆ.

ಬೈಲಹೊಂಗಲ, ಕಿತ್ತೂರು, ಯರಗಟ್ಟಿ, ಸವದತ್ತಿ ಮತ್ತು ರಾಮದುರ್ಗ ತಾಲೂಕಿನ ವ್ಯಾಪ್ತಿಯಲ್ಲಿರುವ ಅಂಚೆ ಕಛೇರಿಗಳು ಮತ್ತು ಉಪ ಹಾಗೂ ಶಾಖಾ ಅಂಚೆ ಕಛೇರಿಗಳಲ್ಲಿ ಜೂನ್ 24 ರಿಂದ ಜೂನ್ 25 ರ ವರೆಗೆ ಎಲ್ಲಾ ರೀತಿಯ ವ್ಯವಹಾರ, ವಹಿವಾಟುಗಳು ಸ್ಥಗಿತಗೊಳ್ಳಲಿದ್ದು, ಜೂನ್ 26, 2025 ರಿಂದ ಸೇವೆಗಳು ಪುನರಾರಂಭಿಸುತ್ತವೆ.

ಪರಿವರ್ತನಾ ಅವಧಿಯಲ್ಲಿ ಮೌಲ್ಯಯುತ ಗ್ರಾಹಕರು ಅಂಚೆ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಅಂಚೆ ಕಛೇರಿಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ರಾಯಬಾಗ.ತಾಲೂಕಿನ ನಾಗರಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವನಮಹೋತ್ಸವ ಕಾರ್ಯಕ್ರಮ ಜರುಗಿತು ಈ ಸಂದರ್ಭದಲ್ಲಿ ಶಾಲೆಯ ಪ್ರಧಾನ ಗುರುಗಳಾದ ಟಿ ಎಲ್ ಸುತಾರ, ಸಹ ಶಿಕ್ಷಕರಾದ ಆರ್ ಎಚ್ ಕಡ್ಯಾಗೋಳ, ವಿ ಆರ್ ಮೇಖಳಿ, ಶ್ರೀಮತಿ ಡಿ ಎನ್ ನಂದರಗಿ, ಶ್ರೀಮತಿ ಎಂ ನದಾಫ್, ಶ್ರೀಮತಿ ಎಂ ಕೆ ಕಾಂಬಳೆ, ಶ್ರೀಮತಿ ಎಸ್ ಆರ್ ಮಹೇಂದ್ರಕರ, ಶ್ರೀಮತಿ ಎಸ್ ಕೆ ಐನಾಪುರ ಹಾಗೂ ಶಾಲಾ ಮಕ್ಕಳು ಇದ್ದರು.

### ಚರಂಡಿ ಕಾಮಗಾರಿ ಮಾಡುತಿದ್ದ ದಲಿತ ವ್ಯಕ್ತಿಯ ಮೇಲೆ ನ್ಯಾಯವಾದಿ ಹಲ್ಲೆ ಮಾಡಿದ್ದನ್ನು ಖಂಡಿಸಿ

# ತಕ್ಷಣ ತಪ್ಪಿಸ್ತರನ್ನು ಬಂದಿಸುವಂತೆ ಒತ್ತಾಯ





ಗೋಕಾಕ: ಚರಂಡಿ ಕಾಮಗಾರಿ ಮಾಡುತಿದ್ದ ದಲಿತ ವ್ಯಕ್ತಿಯ ಮೇಲೆ ನ್ಯಾಯವಾದಿ ಹಲ್ಲೆ ಮಾಡಿದ್ದನ್ನು ಖಂಡಿಸಿ ವಿವಿಧ ದಲಿತ ಸಂಘಟನೆಯ ಮುಖಂಡರು ಗೋಕಾಕ ಡಿಎಸ್‌ಪಿ ಪೋಲಿಸ್ ಠಾಣೆಯ ಆವರಣದಲ್ಲಿ ಪ್ರತಿಭಟನೆ ಮಾಡಿ ತಕ್ಷಣ ತಪ್ಪಿಸ್ತರನ್ನು ಬಂದಿಸುವಂತೆ ಒತ್ತಾಯಿಸಿದರು.

ಅವರು, ಬುಧವಾರದಂದು ನಗರದಲ್ಲಿ ಶಾಸಕ ರಮೇಸ ಜಾರಕಿಹೊಳಿ ಅವರ ಕಚೇರಿಗೆ ಹಾಗೂ ಕಾಂಗ್ರೇಸ್ ಯುವ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಜಾರಕಿಹೊಳಿ ಅವರನ್ನು ಭೇಟಿ ಮಾಡಿ, ದಲಿತ ಯುವಕನ ಮೇಲೆ ನಡೆದ ದೌರ್ಜನ್ಯ ಖಂಡಿಸಿ ಮನವಿ ಪತ್ರ ನೀಡಿದರು. ನಂತರ ಡಿಎಸ್‌ಪಿ ಕಚೇರಿಯತ್ತ ತೆರಳಿದ ದಲಿತ ಸಂಘಟನೆಗಳ ಪದಾಧಿಕಾರಿಗಳು ಗೋಕಾಕ ಡಿಎಸ್‌ಪಿ ಅವರಿಗೂ ಮನವಿ ಪತ್ರ ನೀಡಿದರು.

ದಲಿತ ಮುಖಂಡ ಈಶ್ವರ ಗುಡಜ ಮಾತನಾಡಿ, ಕೂಲಿ ಕೆಲಸ ಮಾಡುವ ದಲಿತ ವ್ಯಕ್ತಿ ಶೆಟ್ಟೆಪ್ಪ ಮೇಸ್ತ್ರಿ ಇತನಿಗೆ ನಮ್ಮ ಜಾಗೆಯ ವಿಷಯ ಕೇಳಲಿಕ್ಕೆ ನಿನ್ಯಾರು ಎಂದು ಮಂಜುಳಾ ಗಿಡ್ನವರ ಮತ್ತು ಚಂದನ ಗಿಡ್ನವರ ಇತ ಶೆಟ್ಟೆಪ್ಪನಿಗೆ ಸ್ಥಳದಲ್ಲಿದ್ದ ಕಬ್ಬಿನ ರಾಡದಿಂದ ಮನಸೊ ಇಚ್ಚೆ ಹಲ್ಲೆ ಮಾಡಿದ್ದ ಪರಿಣಾಮ ಗಂಭೀರ ಗಾಯಗೊಂಡ ಶೆಟ್ಟೆಪ್ಪ ಸರಕಾರಿ ಆಸ್ಪತ್ರೆಯಲ್ಲಿ ದಾಖಾಲಗಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಈ ಘಟನೆಯಾಗಿ 3 ದಿನಗಳಾದರೂ ಸಹ ಪೋಲಿಸ್ ಇಲಾಖೆಯವರು ಬಂದಿಸಿಲ್ಲ, ತಕ್ಷಣ ಅರೋಪಿಗಳನ್ನು ಬಂಧಿಸದಿದ್ದರೆ ಪ್ರತಿಭಟನೆ ಮುಂದುವರೆಸುವದಾಗಿ ಎಚ್ಚರಿಕೆ ನೀಡಿದರು. ಇನ್ನೊರ್ವ ದಲಿತ ಮುಖಂಡ ಸತೀಶ ಹರಿಜನ ಮಾತನಾಡಿ, ಗೋಕಾಕ ಗ್ರಾಮ ದೇವತೆಯರ ಜಾತ್ರಾಮಹೋತ್ಸವದ ನಿಮಿತ್ಯ ಶಾಸಕ ರಮೇಶ ಜಾರಕಿಹೊಳಿ ಅವರು, ಅಭಿವೃದ್ಧಿ ಕಾಮಗಾರಿಗಳನ್ನು ಮಾಡಿಸುತ್ತಿದ್ದು, ಅಭಿವೃದ್ಧಿ ಕಾಮಗಾರಿಗಳ ಕೆಲಸಕ್ಕೆ ಅಡ್ಡಿಪಡಿಸುವ ಹುನ್ನಾರದಿಂದ ದಲಿತರನ್ನು ಗುರಿಯಾಗಿಸಿಕೊಂಡು ನ್ಯಾಯವಾದಿ ಚಂದನ ಗಿಡ್ಡನವರ ಗೋಕಾಕದಲ್ಲಿ ಜಾತಿ ದ್ವೇಷ ಬೀಜ ಬಿತ್ತುವ ಕಾರ್ಯವನ್ನು ಮಾಡುತಿದ್ದಾರೆ. ಶಾಸಕ ರಮೇಶ ಜಾರಕಿಹೊಳಿಯವರು 30 ವರ್ಷಗಳು ಕಳೆದರು ಈ ವರೆಗೆ ಯಾವುದೇ ರೀತಿಯ ಜಾತಿ ಭೇದ ಮಾಡಿಲ್ಲ. ನಿಮಗೇನಾದರೂ ಕೇಳುವದಿದ್ದರೆ. ಶಾಸಕರ ಕಚೇರಿಗೆ ಹೋಗಿ ಕೇಳಿ ಅದನ್ನ ಬಿಟ್ಟು ದಲಿತರ ಮೇಲೆ ಹಲ್ಲೆ ಮಾಡೊದು ಸರಿಯಲ್ಲ ಎಂದು ಅಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ ಚಂದನ ಗಿಡ್ಡನವರ ಮೇಲೆ ಪರಿಶಿಷ್ಟ ಜಾತಿ ದೌರ್ಜನ್ಯ ಪ್ರಕರಣ ಇದೆ. ಅಷ್ಟಿದ್ದರೂ ಸಹಿತ ಮತ್ತೆ ದಲಿತನ ಮೇಲೆ ಹಲ್ಲೆ ಮಾಡಿದ್ದನ್ನು ನೋಡಿದರೆ ಇವರು ದಲಿತರನ್ನೆ ಗುರಿಯಾಗಿಸಿಕೊಂಡು ದಾಳಿ ಮಾಡುತ್ತಿದ್ದಾರೆಂಬುವದು ಸ್ಪಷ್ಟವಾಗಿದೆ. ದಲಿತರಿಗೆ ನ್ಯಾಯ ಸೀಗಬೇಕು ಅದಕ್ಕಾಗಿ ಪೊಲಿಸ್ ಇಲಾಖೆ ತಕ್ಷಣ ಇವರನ್ನು ಬಂಧಿಸಬೇಕು. ಚಂದನ ಗಿಡ್ಡನವರ ಅವರ ಸನ್ನದ್ಧು ರದ್ದು ಪಡಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಮೇಶ ಮಾದರ, ಬಬಲೆಪ್ಪ ಮಾದರ, ಲಕ್ಷ್ಮಣ ತಳಗಡೆ, ಆನಂದ ತಾಯವ್ವಗೋಳ, ವೀರಭದ್ರ ಮೈಲನ್ನವರ, ವಿಠ್ಠಲ ಸಣ್ಣಕ್ಕಿ, ರವಿ ಕಡಕೋಳ, ಕಮಲಾ ಕರೆಮ್ಮನವರ, ಸುಂದರವ್ವ ಕಟ್ಟಿಮನಿ, ದೊಡ್ಡವ್ವ ತಳಗೇರಿ, ಉದಯ ಮಾದರ, ಗೋವಿಂದ ಕಳ್ಳಿಮನಿ, ಬಾಳೇಶ ಸಂತವ್ವಗೋಳ, ಅರ್ಜುನ ಗಂಡವ್ವಗೋಳ, ಪಿಎಸ್‌ಐ ಕೆ ಬಿ ವಾಲಿಕಾರ ಸೇರಿದಂತೆ ಗೋಕಾಕ ಮತ್ತು ಮೂಡಲಗಿ ತಾಲೂಕಿನ ದಲಿತ ಮುಖಂಡರು ಉಪಸ್ಥಿತರಿದ್ದರು.

# ಜೂ 21 ರಂದು ವಿಶ್ವ ಯೋಗ ದಿನಾಚರಣೆ



ಗೋಕಾಕ: ವಿಶ್ವ ಯೋಗ ದಿನಾಚರಣೆಯನ್ನು ಜೂ 21 ರಂದು ಮುಂಜಾನೆ 5:30 ಕ್ಕೆ ನಗರದ ಮಯೂರ ಸ್ಕೂಲ್ ಮೈದಾನದಲ್ಲಿ ಅತ್ಯಂತ ವಿಜೃಂಭ್ರಣೆಯಿಂದ ತಾಲೂಕು ಆಡಳಿತ ಹಾಗೂ ವಿವಿಧ ಸಂಘ, ಸಂಸ್ಥೆಗಳ ಆಶ್ರಯದಲ್ಲಿ ಆಚರಿಸಲಾಗುವುದು ಎಂದು ತಹಶೀಲ್ದಾರ ಡಾ.ಮೋಹನ ಭಸ್ಮೆ ಹೇಳಿದರು.

ಬುಧವಾರದಂದು ನಗರದ ತಹಶೀಲ್ದಾರ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಜಗತ್ತಿಗೆ ಯೋಗದ ಮಹತ್ವವನ್ನು ತಿಳಿಸಿಕೊಟ್ಟ ದೇಶ ನಮ್ಮದಾಗಿದ್ದೆ. ಮಾನವರ ನೆಮ್ಮದಿಯ ಬದುಕಿಗೆ ಯೋಗ ಅತ್ಯಂತ ಮಹತ್ತರ ಪಾತ್ರ ವಹಿಸುತ್ತದೆ. ಅತಂಹ ಯೋಗವನ್ನು ಇಂದಿನ ಯುವ ಪಿಳಿಗೆಯಲ್ಲಿ ಜಾಗೃತಿ ಮೂಡಿಸುವ ದೃಷ್ಟಿಯಿಂದ ಯೋಗ ದಿನಾಚರಣೆಯನ್ನು ಆಚ–ರಿಸಲಾಗುತ್ತಿದೆ. ಅಂದು ಸಾವಿರಾರು ಸಂಖ್ಯೆಯಲ್ಲಿ ಎಲ್ಲರೂ ಶ್ವೇತ ವಸ್ತ್ರದೊಂದಿಗೆ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೋಳಿಸುವಂತೆ ಕೋ–ರಿದರು.

ಈ ಸಂದರ್ಭದಲ್ಲಿ ಬ್ರಹ್ಮನಾಂದ ಸ್ವಾಮೀಜಿ, ವಿವಿಧ ಸಂಘಟನೆಗಳ ಮುಖ್ಯಸ್ಥರುಗಳಾದ ನಿಜಲಿಂಗ ದಡ್ಡಿಮನಿ, ಪರಮೇಶಿ ಗುಲ್, ಎಲ್.ಕೆ.ತೋರಣಗಟ್ಟಿ, ರಾಮಚಂದ್ರ ಕಾಕಡೆ, ಸದಾಶಿವ ಗುದಗಗೋಳ, ಶಿವಲಿಂಗ ಕೆ., ಸೋಮಶೇಖರ್ ಮಗದುಮ್ಮ, ಅಶೋಕ ಲಗಮಪ್ಪಗೋಳ, ವಿಷ್ಣು ಲಾತೂರ ಸೇ–ರಿದಂತೆ ಅನೇಕರು ಉಪಸ್ಥಿತರಿದ್ದರು.

## ನಮ್ಮೂರ ಶಾಲೆಗೆ ನಮ್ಮ ಯುವ ಜನರು ಕಾರ್ಯಕ್ರಮ ಅನುಷ್ಠಾನ : ಶಾಲೆಗಳಿಂದ ಅರ್ಜಿ ಆಹ್ವಾನ

ವಿಜಯಪುರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರಸಕ್ತ 2024–25ನೇ ಸಾಲಿಗೆ ನಮ್ಮೂರ ಶಾಲೆಗೆ ನಮ್ಮ ಯುವ ಜನರು ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಅರ್ಹ ಶಾಲೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು ಆಯೋಜಿಸಿದ್ದ ತಾಲೂಕು, ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ತೋ–ರಿರುವ ಕ್ರೀಡಾಪಟುಗಳನ್ನು ಹೊಂದಿರುವ ಒಂದು ಸರ್ಕಾರಿ ಶಾಲೆಯನ್ನು ಆಯ್ಕೆ ಮಾಡಿ ಆಯ್ಕೆಯಾದ ಶಾಲೆಗೆ 1 ಲಕ್ಷ ರೂ. ಅನುದಾನವನ್ನು ನೀಡಲಾಗುತ್ತದೆ. ಈ ಒಂದು ಲಕ್ಷದಲ್ಲಿ 10 ಸಾವಿರ ಗಳನ್ನು ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ಹಾಗೂ 90,000 ರೂ.ಗಳನ್ನು ಶಾಲೆಯ ಎಸ್.ಡಿ.ಎಂ.ಸಿಗೆ ಅಗತ್ಯ ಕ್ರೀಡಾ ಸಾಮಗ್ರಿಗಳನ್ನು ಖರೀದಿಸುವುದಾಗಿರುತ್ತದೆ.

ಆಸಕ್ತ ಅರ್ಹ ಸರ್ಕಾರಿ ಶಾಲೆಗಳು ಜೂನ್ 26ರೊಳಗಾಗಿ ಅರ್ಜಿಯನ್ನು ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08352–251085 ಹಾಗೂ 7019008443ಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಗ್ನೋ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ವಿಜಯಪುರ ಇಂದಿರಾಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯವು ಜುಲೈ 2025ನೇ ಸಾಲಿನ ಪದವಿ, ಸ್ನಾತಕ ಕೋರ್ಸ್ಗಳು, ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜುಲೈ 25 ಕೊನೆಯ ದಿನವಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕ್ಷೇತ್ರಿಯ ನಿರ್ದೇಶಕರು,ಇಂದಿರಾ ಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವ ವಿದ್ಯಾಲಯ,ಒಂದನೇ ಮಹಡಿ,2ನೇ ಪ್ಲಾಜಾ,ಪ್ರವಾಸೋದ್ಯಮ ಇಲಾಖೆಯ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತ ಹತ್ತಿರ ಹಾಗೂ ದೂರವಾಣಿ ಸಂಖ್ಯೆ: 08352–252006 ಹಾಗೂ ಇಮೇಲ್ ಡಿಛಿಛುರಿಚಿಠಿಣಡಿ@ುರಿ–ಟಿಂಣ.ಚಿಛಿ.ಟಿ ಸಂಪರ್ಕಿಸಬಹುದು ಎಂದು ವಿಜಯಪುರ ಪ್ರಾದೇಶಿಕ ಕೇಂದ್ರದ ಕ್ಷೇತ್ರಿಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾವು ಕಚ್ಚಿ ಕೂಲಿ ಕಾರ್ಮಿಕೆ ಸಾವು



ತಾಳಿಕೋಟೆ, ಪಟ್ಟಣದ ಎಪಿಎಂಸಿ ಮಾರ್ಕೆಟ್ ಯಾರ್ಡಿನಲ್ಲಿ ಕೂಲಿ ಕೆಲಸ ಮಾಡುತ್ತಿದ್ದ ಕಾರ್ಮಿಕ ಮಹಿಳೆಯೋರ್ವಳಿಗೆ ವಿಷಕಾರಿ ಹಾವು ಕಚ್ಚಿ ಸಾವನ್ನಪ್ಪಿದ ಘಟನೆ ಮಂಗಳವಾರರಂದು ನಡೆದಿದೆ.

ಹಾವು ಕಚ್ಚಿ ಮೃತಪಟ್ಟ ಮಹಿಳೆ ಸಾವಿತ್ರಿ ಅಶೋಕ ಮೂಕೀಹಾಳ(48) ಎಂದು ಗುರುತಿಸಲಾಗಿದ್ದು ದಿನನಿತ್ಯ ಪಟ್ಟಣದ ಎಪಿಎಂಸಿ ಮಾರ್ಕೆಟ್‌ಯಾರ್ಡಿನ ಎಸ್.ಸಿ.ಪಾಟೀಲ ಎಂಬವರ ಅಡತಿ ಅಂಗಡಿಯಲ್ಲಿ ಕಾಳುಕಡಿ ಸ್ವಚ್ಚಗೊಳಿಸುವ ಕೆಲಸಕ್ಕೆ ತೆರಳುತ್ತಿದ್ದಳು ಎಂದಿನಂತೆ ಮಂಗಳವಾರರಂದು ಬೆಳಿಗ್ಗೆ 10 ಗಂಟೆಯ ಸುಮಾರಿಗೆ ಕೆಲಸದಲ್ಲಿ ತೊಡಗಿರುವಾಗ ಎಡಗಾಲಿನ ಹಿಮ್ಮಡಿಗೆ ವಿಷಕಾರಿ ಹಾವು ಕಚ್ಚಿದೆ ಈ ವಿಷಯ ತಿಳಿದ ಅಂಗಡಿಯವರು ಹಾಗೂ ಕುಟುಂಭಸ್ಥರು ಸ್ಥಳೀಯ ಸರ್ಕಾರಿ ಆಸ್ಪತ್ರೆಗೆ ತೆರಳಿ ಪ್ರಾಥ–ಮಿಕ ಚಿಕಿತ್ಸೆ ಕೊಡಿಸುವದರೊಂದಿಗೆ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ತೆರಳುವ ಸಮಯದಲ್ಲಿ ಮಹಿಳೆಯು ಮೃತಪಟ್ಟಿದ್ದಾಳೆ ಎಂದು ಪುತ್ರ ರಾಜೇಶ ಅಶೋಕ ಮೂಕೀಹಾಳ ಅವರು ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿದ್ದಾರೆ.

ಪ್ರಕರ್ಣ ದಾಖಲಿಸಿಕೊಂಡಿರುವ ಪೊಲೀಸ್‌ರು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ, : 2025–26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಖಾನಾಪೂರ ತಾಲೂಕಿನ ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ 1 ರಿಂದ 10ನೇ ತರಗತಿ, ಪಿಯುಸಿ ಮತ್ತು ಪಿಯುಸಿ ನಂತರದ ವಿವಿಧ ಕೋರ್ಸಗಳಲ್ಲಿ ಓದುತ್ತಿರುವ ಆಸಕ್ತ ವಿದ್ಯಾರ್ಥಿಗಳು ಇಲಾಖೆಯ ವೆಬಸೈಟ್ SW.KAR.NIC.IN ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳ ಕಛೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಖಾನಾಪೂರ ತಾಲೂಕ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ–2) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರ ವಜಾಗೊಳಿಸಲು ಬಿಜೆಪಿ ಒತ್ತಾಯ



ರಬಕವಿ–ಬನಹಟ್ಟಿ, ಬೆಂಗಳೂರಿನಲ್ಲಿ ನಡೆದ ಆರ್‌ಸಿಬಿ ವಿಜಯೋತ್ಸವದಲ್ಲಿ ಹನ್ನೊಂದು ಜನರ ಸಾವಿಗೆ ಸರ್ಕಾರದ ಭದ್ರತಾ ವೈಫಲ್ಯವೇ ಕಾರಣವಾಗಿದೆ. ಆದ್ದರಿಂದ ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ರಾಜೀನಾಮೆ ಜೊತೆಗೆ ಕಾಂಗ್ರೆಸ್ ಸರ್ಕಾರವನ್ನು ವಜಾಗೊಳಿಸಿ ರಾಜ್ಯದಲ್ಲಿ ಆಡಳಿತ ಸಂಪೂರ್ಣವಾಗಿ ವಿಫಲವಾಗಿದ್ದರಿಂದ ರಾಷ್ಟ್ರಪತಿ ಆಡಳಿತವನ್ನು ಜಾರಿಗೆ ತರಬೇಕೆಂದು ಭಾರತೀಯ ಜನತಾ ಪಕ್ಷದ ನಗರ ಘಟಕದ ಅಧ್ಯಕ್ಷ ಶ್ರೀಶೈಲ ಬೀಳಗಿ ತಿಳಿಸಿದರು.

ಅವರು ಬುಧವಾರ ಇಲ್ಲಿನ ಜಮಖಂಡಿ–ಕುಡಚಿ ರಾಜ್ಯ ಹೆದ್ದಾರಿಯಲ್ಲಿನ ಎಂಎಂ. ಬಂಗ್ಲೆ ಮುಂಭಾಗದಲ್ಲಿ ತೇರದಾಳ ಮತಕ್ಷೇತ್ರದ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಯುವ ಮೋರ್ಚಾ ಘಟಕದ ವಿದ್ಯಾಧರ ಸವದಿ ಮಾತನಾಡಿ, ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹ ಸಚಿವರು ತಮ್ಮ ಮೇಲಿನ ಜವಾಬ್ದಾ–ರಿಗಳಿಂದ ತಪ್ಪಿಸಿಕೊಳ್ಳಲು ಬೇರೆಯವರ ಮೇಲೆ ಆರೋಪ ಹೊರಿಸುತ್ತಿದ್ದಾರೆ. ಅದಕ್ಕಾಗಿ ದಕ್ಷ ಪ್ರಾಮಾಣಿಕ ಅಧಿಕಾ–ರಿಗಳನ್ನು ಅಮಾನತ್ತು ಮಾಡುತ್ತಿದ್ದಾರೆ. ಈ ಘಟನೆಗೆ ರಾಜ್ಯ ಸರ್ಕಾರವೇ ನೇರ ಹೊಣೆಯಾಗಿದೆ. ವಿಜಯೋತ್ಸವಕ್ಕೆ ಸೂಕ್ತ ಭದ್ರತೆಯನ್ನು ನೀಡುವಲ್ಲಿ ಸರ್ಕಾರವೂ ಸಂಪೂರ್ಣವಾಗಿ ವಿಫಲಾಗಿತ್ತು. ಅಭಿಮಾನಿಗಳು ಕಾಲ್ತುಳಿತದಲ್ಲಿ ಮೃತ ಪಟ್ಟಿದ್ದಾರೆ ಎಂಬ ಸುದ್ದಿ ಗೊತ್ತಿದ್ದರೂ ಉಪಮುಖ್ಯಂತ್ರಿಗಳು ವಿಜಯೋತ್ಸವದಲ್ಲಿ ಭಾಗಿಯಾಗಿದ್ದರು ಎಂದು ತಿಳಿಸಿದರು.

ಸುರೇಶ ಅಕ್ಕಿವಾಟ, ಸಿದ್ದನಗೌಡ ಪಾಟೀಲ, ಶಂಕರಗೌಡ ಪಾಟೀಲ, ಮಹೇಶ ಜಿಡ್ಡಿಮನಿ, ಶಂಕರ ಕುಂಬಾರ, ವಿಠ್ಠಲ ತಟ್ರಿ, ಪುಂಡಲೀಕ ಪಾಲಭಾವಿ, ಆನಂದ ಕಂಪು, ಪಾಂಡುರಂಗ ಸಾಲ್ಗುಡೆ, ಚಂದ್ರು ಮಿರ್ಜಿ, ಲಕ್ಕಪ್ಪ ಪಾಟೀಲ, ಅಶೋಕ ರಾವಳ, ಶ್ರೀಶೈಲ ಯಾದವಾಡ, ವಿದ್ಯಾ ಧಬಾಡಿ, ಗೌರಿ ಮಿಳ್ಳಿ, ಪವಿತ್ರಾ ತುಕ್ಕನ್ನವರ, ಸುಜಾತಾ ಬೇಶೆಟ್ಟಿ ಸೇರಿದಂತೆ ಅನೇಕರು ಇದ್ದರು.

## ನಾಗರಾಳದ ಯೋಗ ದಿನಾಚರಣೆಗೆ ಪದ್ಮಶ್ರೀ ಪುರಸ್ಕೃತ ವೈದ್ಯೆ ಡಾ.ವಿಜಯಲಕ್ಷ್ಮೀ ದೇಶಮಾನೆ



ಮಹಾಲಿಂಗಪುರ : ಸಮೀಪದ ಮುಧೋಳ ತಾಲೂಕಿನ ನಾಗರಾಳ ಸರಕಾರಿ ಪ್ರೌಢಶಾಲೆಯ ಆವರಣದಲ್ಲಿ ಗ್ರಾಪಂ ಹಾಗೂ ಎಲ್ಲ ಶಾಲಾ ಕಾಲೇಜುಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಜೂ.21 ರಂದು ಬೆಳಗ್ಗೆ 6 ಗಂಟೆಗೆ ನಡೆಯಲಿರುವ ವಿಶ್ವ ಯೋಗ ದಿನಾಚರಣೆಗೆ 2025ನೇ ಸಾಲಿನ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕ್ಯಾನ್ಸರ್ ತಜ್ಞೆ,ಬೆಂಗಳೂ–ರಿನ ಡಾ. ವಿಜಯಲಕ್ಷ್ಮೀ ದೇಶಮಾನೆ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದು ಗ್ರಾಮದ ಹಿರಿಯ, ಶಾಲಾ ಕಾಲೇಜುಗಳ ಒಕ್ಕೂಟದ ಆದ–ಕ್ಷ ಆರ್.ಟಿ.ಪಾಟೀಲ ಆರ್.ಟಿ.ಪಾಟೀಲ ಹೇಳಿದರು. ಪಟ್ಟಣದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ, ಬೆಂಗಳೂರಿಗೆ ತೆರಳಿ ಪದ್ಮಶ್ರೀ ಪುರಸ್ಕೃತ ಖ್ಯಾತ ಕ್ಯಾನ್ಸರ್ ತಜ್ಞೆ ಡಾ. ವಿಜಯಲಕ್ಷ್ಮೀ ದೇಶಮಾನೆ ಅವನ್ನು ಆಹ್ವಾನಿಸಿದಾಗ ಬರಲು ಒಪ್ಪಿಕೊಂಡಿದ್ದಾರೆ. ವೇದಿಕೆ ಮೇಲಿನ ಗಣ್ಯರು, ಸಂಸದ, ಸಚಿವರು, ಅಧಿಕಾ–ರಿಗಳು, ಎಲ್ಲ ಶಾಲೆಗಳ ವಿದ್ಯಾರ್ಥಿಗಳು, ನಾಗರಿಕರು ಒಂದೇ ಮೈದಾನದಲ್ಲಿ ಏಕಕಾಲದಲ್ಲಿ ಯೋಗ ಮಾಡುವ ವಿಶಿಷ್ಠ ಕಾರ್ಯಕ್ರಮ ಕಳೆದ 10 ವರ್ಷಗಳಿಂದ ನಡೆಯುತ್ತ ಬಂದಿದೆ.

ಈ ವರ್ಷದ ವಿಶೇಷ ಆಕರ್ಷಣೆಯಾಗಿ ಪದ್ಮಶ್ರೀ ಪುರಸ್ಕೃತೆ ಭಾಗವಹಿಸಲಿದ್ದಾರೆ. ಕೊಂಚೂರ ಸವಿತಾ ಪೀಠದ ಸವಿತಾನಂದ ಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ, ಮಾಧವಾನಂದ ವಿದ್ಯಾವರ್ಧಕ ಟ್ರಸ್ಟ್ ಹಾಗೂ ಶಾಲಾ ಕಾಲೇಜು ಒಕ್ಕೂಟಗಳ ಅಧ್ಯಕ್ಷ ಆರ್.ಟಿ.ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಸಚಿವ ಆರ್.ಬಿ.ತಿಮ್ಮಾಪೂರ ಉದ್ಘಾಟಿಸಲಿದ್ದಾರೆ. ಸಂಸದ ಗೋವಿಂದ ಕಾರಜೋಳ, ಗ್ರಾಪಂ ಅಧ್ಯಕ್ಷೆ ಪಾರ್ವತಿ ತೇಲಿ, ಬಿಇಒ ಎಸ್.ಎಂ.ಮುಲ್ಲಾ, ಪಿಡಿಒ ರಂಜಿತಾ ಹತ್ತಿ, ಶಿಕ್ಷಕ ನಾರಣಗೌಡ ಉತ್ತಂಗಿ ಭಾಗವಹಿಸಲಿದ್ದಾರೆ ಎಂದರು.

ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಶ್ರೀಶೈಲ ಹುನ್ನೂರ, ಮುಖಂಡರಾದ ಈರಣ್ಣ ಅರಗಂಜಿ, ಬಸವರಾಜ ರೊಳ್ಳಿ, ಮಂಜುಳಾ ಸುಳ್ಳದ, ಯಲ್ಲಪ್ಪ ಸೂರ್ಯವಂಶಿ, ದುಂಡಪ್ಪ ಕೈಪಾಳಿ, ಯಲ್ಲಪ್ಪ ಮಾರಾಪುರ, ಮಲ್ಲಪ್ಪ ಹಸಬಿ, ಶಿರಾಜ ಹೊರಟ್ಟಿ ಪತ್ರಿಕಾ ಗೋಷ್ಠಿಯಲ್ಲಿದ್ದರು.

## ಕರ್ನಾಟಕ ಶಿಕ್ಷಕರ ಸಂಘ ಗಳ ಪರಿಷತ್ತಿನ ಪದಾಧಿಕಾರಿಗಳ ಸಭೆ:ಶಿಕ್ಷಕರ ಸಮಸ್ಯೆ ಗಳ ನಿವಾರಣೆ ಗೆ ಮನವಿ




ಬೆಳಗಾವಿ :– ಕರ್ನಾಟಕ ಶಿಕ್ಷಕರ ಸಂಘಗಳ ಪರಿಷತ್ತು, ರಾಜ್ಯ ಘಟಕ ಧಾರವಾಡ ಇದರ ಕಾರ್ಯಕಾ–ರಿಣಿ ಸದಸ್ಯರ ಪದಾಧಿಕಾರಿಗಳ, ಜಿಲ್ಲಾ ಅಧ್ಯಕ್ಷರ, ಸಭೆಯು ಬೆಳಗಾವಿ ನಗರದ ಕನ್ನಡ ಸಾಹಿತ್ಯ ಭವನದಲ್ಲಿ ರಾಜ್ಯಾಧ್ಯಕ್ಷ ಸಂಗಮೇಶ ಖನ್ನಿನಾಯ್ಕರ ಅಧ್ಯಕ್ಷತೆಯಲಿ ಜರುಗಿತು, ಸಂಘಟನೆ ಬಲಗೊಳಿಸುವ ನಿಟ್ಟಿನಲ್ಲಿ ಸುದೀರ್ಘವಾಗಿ ಚರ್ಚಿಸಲಾಯಿತು, ಪೂರ್ವ ಪ್ರಾಥಮಿಕ ಶಾಲೆಯಿಂದ ಪದವಿ ಪೂರ್ವ ಕಾಲೇಜು ವರೆಗೆ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಮಸ್ಯೆ ಗಳನ್ನು ಚರ್ಚಿಸಿ ಅವುಗಳ ಪರಿಹಾರಕ್ಕಾಗಿ ಶಾಲಾ ಶಿಕ್ಷಣ ಶಾಲಾ ಇಲಾಖೆಯ ಹಿರಿಯ ಅಧಿಕಾ–ರಿಗಳನ್ನು ರಾಜ್ಯ ಪದಾಧಿಕಾರಿಗಳು ಭೇಟಿ ಮಾಡಿ ಮನವಿ ಸಲ್ಲಿಸಲು ತೀರ್ಮಾನಿಸಲಾಯಿತು,

ಬೆಳಗಾವಿ ನಗರದಲ್ಲಿ ಜುಲೈ ತಿಂಗಳಿನಲ್ಲಿ ಪ್ರತಿಭಾವಂತ ಶಿಕ್ಷಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಶಿಕ್ಷಕರಿಗೆ ಬೋಧನಾ ಕೌಶಲ್ಯ ವೃದ್ಧಿಸಲು ಶೈಕ್ಷಣಿಕ ಕಾರ್ಯಾಗಾರ ನಡೆಸಲು ತೀರ್ಮಾನ ಮಾಡಲಾಯಿತು.

ವಿವಿಧ ಕಾರಣ ಗಳಿಂದ ಖಾಲಿ ಯಾಗಿರುವ ರಾಜ್ಯ ಸಂಘದ ಕೋಶಾಧ್ಯಕ್ಷರಾಗಿ ಪ್ರೌಢ ಶಾಲೆಯ ಶಿಕ್ಷಕರಾದ ಡಾ, ಸೋಮಶೇಖರ ಹಲಸಗಿ ರನ್ನಾಗಿ ಆಯ್ಕೆಮಾಡಿ ಅವರಿಗೆ ಆಯ್ಕೆ ಪ್ರಮಾಣ ಪತ್ರ ವಿತರಿಸಲಾಯಿತು. ರಾಜ್ಯ ಕೇಂದ್ರ ಪರಿಷತ್ ಸದಸ್ಯರನ್ನಾಗಿ ಕಾಲೇಜು ಉಪನ್ಯಾಸಕರಾದ ಡಾ, ನಾಗರಾಜ ಮರೆಣ್ಣವರ,ಜೊತೆಗೆ ಸಭೆಯಲ್ಲಿ ಬೆಳಗಾವಿ ಜಿಲ್ಲಾ ಘಟಕದ ನೂತನ ಅಧ್ಯಕ್ಷ ರಾಗಿ ಪ್ರಾಥಮಿಕ ಶಾಲಾ ಹಿರಿಯ ಮುಖ್ಯೋ್ಯಪಾದ್ಯಾಯ ರಾದ ಬಸವರಾಜ ಫಕೀರಪ್ಪ ಸುಣಗಾರ ರವರನ್ನು ಆಯ್ಕೆ ಮಾಡಲಾಯಿತು.

ಪ್ರಧಾನ ಕಾರ್ಯದರ್ಶಿಯನ್ನಾಗಿ ಮಹಾಂತೇಶ ಹಿರೇಮಠ ರವರನ್ನು ಆಯ್ಕೆ ಮಾಡಲಾಯಿತು, ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಆರ್ ಎಸ್ ರವರು ಸ್ವಾಗತಿಸಿದರು. ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷರಾದ ಬೆಂಗಳೂರಿನ ವಿಜಯಕುಮಾರ ಎ ತುರವೇಕರ,ರಾಜ್ಯ ಸರಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಸುರೇಶ ಸಕ್ರೆನವರ,ಉಪಾಧ್ಯಕ್ಷರಾದ ರುದ್ರಪ್ಪ ಬಡಿಗೇರ,ಮಹಿಳಾ ಪ್ರತಿನಿಧಿ ಶ್ರೀಮತಿ ದೊಡಮನಿ,ಪದಾಧಿಕಾರಿಗಳಾದ ಸತೀಶ ಮಿರಜಕರ, ಎನ್ ಎನ್ ಕಬ್ಬುರ,ಸೇ–ರಿದಂತೆ ವಿವಿಧ ಜಿಲ್ಲೆಯ ಪದಾಧಿಕಾ–ರಿಗಳು ಉಪಸ್ಥಿತರಿದ್ದರು, ಸಭೆಯ ನಂತರ ಪ್ರಾಥಮಿಕ ಶಾಲಾ ಶಿಕ್ಷಕರ ಸಮಸ್ಯೆ ಗಳ ಕುರಿತು ಶಾಲಾ ಶಿಕ್ಷಣ ಇಲಾಖೆಯ ಡಿ. ಡಿ. ಪಿ ಐ ರವರಿಗೆ, ಪ್ರೌಢ ಶಾಲಾ ಶಿಕ್ಷಕರ ಸಮಸ್ಯೆ, ನೇಮಕಾತಿ ಸೇ–ರಿದ್ದಂತೆ ಕುರಿತು ವಿಭಾಗೀಯ ಪ್ರೌಢ ಶಿಕ್ಷಣ ಮಂಡಳಿಯ ಸಹನಿರ್ದೇಶಕರಿಗೆ, ಕಾಲೇಜು ಉಪನ್ಯಾಸಕರ ಸಮಸ್ಯೆಗಳ ಕುರಿತು ಮನವಿ ಅರ್ಪಿಸಿ ಪರಿಹಾರ ಕ್ಕಾಗಿ ಅಗ್ರಹಿಸಲಾಯಿತು.

# ಕ್ಷೇತ್ರ ಕಾರ್ಯಕ್ಕೆ ಮಹತ್ವ ನೀಡಿ: ಪ್ರೊ.ಸಿ.ಸಿ.ಸಿಂಪಿ




ಬಸವನಬಾಗೇವಾಡಿ, : ಪಟ್ಟಣದ ಬಿಎಲ್‌ಡಿಇ ಸಂಸ್ಥೆಯ ಔಷಧ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಕ್ಷೇತ್ರಕಾರ್ಯದ ಅಧ್ಯಯನಕ್ಕೆಂದು ಸೋಮವಾರ, ಮಂಗಳವಾರ ಎರಡು ದಿನಗಳ ಕಾಲ ಗೋವಾದ ಗ್ಲೆನ್ ಮಾರ್ಕ್ ಫಾರ್ಮಾಶುಟಿಕಲ್ ಲಿಮಿಟೆಡ್ ಕೈಗಾರಿಕಾ ವಲಯಕ್ಕೆ ಭೇಟಿ ನೀಡಿ ಔಷಧ ತಯಾರಿ, ಗುಣಮಟ್ಟ ಪರೀಕ್ಷೆ, ಸಂಸ್ಕರಣೆ, ಬಾಳಿಕೆ ಹಾಗೂ ಗುಣಮಟ್ಟದ ಭರವಸೆ ತಯಾರಿಕೆಯ ಕುರಿತು ಉಪಯುಕ್ತ ಮಾಹಿತಿಯನ್ನು ಪಡೆದುಕೊಂಡರು. ಮಹಾವಿದ್ಯಾಲಯದ ಪ್ರಾಧ್ಯಾಪಕರು ಕ್ಷೇತ್ರಕಾರ್ಯದ ಮಹತ್ವದ ಕುರಿತು ಸವಿಸ್ತಾರವಾದ ಮಾಹಿತಿಯನ್ನು ನೀಡಿ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಕಾರ್ಯದಲ್ಲಿ ಹೆಚ್ಚಿನ ಆಸಕ್ತಿ ಮೂಡಿಸಲು ಪ್ರೇರಣೆ ನೀಡಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ.ಸಿ.ಸಿ.ಸಿಂಪಿ ಮಾತನಾಡಿ, ಔಷಧ ಕ್ಷೇತ್ರದಲ್ಲಿ ಅಧ್ಯಯನ ಮಾಡುತ್ತಿರುವ ಪ್ರತಿಯೊಬ್ಬ ವಿದ್ಯಾರ್ಥಿಯು ನಾಲ್ಕು ಗೋಡೆಗಳ ಮಧ್ಯದಿಂದ ಹೊರಬಂದು ವಾಸ್ತವ ಪರಿಸ್ಥಿತಿಗೆ ತಕ್ಕಂತೆ ಸಾಧನೆ ಮಾಡಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕಾದರೆ ತಮ್ಮ ಅಧ್ಯಯನದ ಜೊತೆಗೆ ಕ್ಷೇತ್ರಕಾರ್ಯಕ್ಕೆ ಹೆಚ್ಚಿನ ಮಹತ್ವ ನೀಡಬೇಕೆಂದರು. ಈ ಸಂದರ್ಭದಲ್ಲಿ ಪ್ರೊ.ಮಹಾಂತೇಶ ಕವಟೇಕರ, ಪ್ರೊ. ಚೇತನ ತೇಲಿ, ಪ್ರೊ.ಸುರೇಶ ಗುಣಕಿ ಇದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :115, Postal Reg No. PMG/KA/NK/BM/135/25-27 / POST AT Vantamury Colony Post Office